ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫೮

**ಪಟ್ಟಿ – ೦೬**

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತ ನಾಲ್ಕನೇ ಅಧಿವೇಶನ

ಸೋಮವಾರ, ದಿನಾಂಕ : ೧೬ನೇ ಡಿಸೆಂಬರ್, ೨೦೨೪

---

## ಸಮೂಹ – I

೧. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

೨. ಇಂಧನ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು

೫. ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

೭. ಉನ್ನತ ಶಿಕ್ಷಣ ಸಚಿವರು

---

## ಬಿ.ಪಿ.ಎಲ್ ಮತ್ತು ಎ.ಪಿ.ಎಲ್. ಕಾರ್ಡ್‌ಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೦ (೭೫೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ರಾಜ್ಯದಲ್ಲಿರುವ ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಕಾರ್ಡ್‌ಗಳ ಸಂಖ್ಯೆಯೆಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಕಾರ್ಡ್‌ಗಳಲ್ಲಿ ಈಗಾಗಲೇ ಎಷ್ಟು ಕಾರ್ಡ್‌ಗಳನ್ನು ಅನರ್ಹವೆಂದು ಪರಿಗಣಿಸಿ ರದ್ದುಗೊಳಿಸಲಾಗಿದೆ ; ಮುಂದಿನ ದಿನಗಳಲ್ಲಿ ಇನ್ನೂ ಎಷ್ಟು ಕಾರ್ಡ್‌ಗಳನ್ನು ರದ್ದುಗೊಳಿಸಲು ಸರ್ಕಾರ ತೀರ್ಮಾನಿಸಿದೆ ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಸದರಿ ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಕಾರ್ಡ್‌ಗಳನ್ನು ರದ್ದುಗೊಳಿಸಲು ಇರುವಂತಹ ನಿಬಂಧನೆ/ಮಾನದಂಡಗಳು ಯಾವುವು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ರಾಜ್ಯದ ಗ್ರಾಹಕರಿಗೆ ಹೊಸದಾಗಿ ಎಷ್ಟು ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಕಾರ್ಡ್‌ಗಳನ್ನು ವಿತರಿಸಲು ಸರ್ಕಾರ ಮುಂದಾಗಿದೆ ? (ಸಂಪೂರ್ಣ ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿ ವಿದ್ಯುತ್ ಸಂಪರ್ಕ ನೀಡಲು ಅಳವಡಿಸಿರುವ ವಿದ್ಯುತ್ ತಂತಿಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩೧ (೭೫೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿದ್ಯುತ್ ಲೈನ್‌ಗಳಿಗೆ ವಿದ್ಯುತ್ ಸಂಪರ್ಕ ನೀಡಲು ತಂತಿಗಳನ್ನು ಅಳವಡಿಸಿದ ಮೇಲೆ ಅವುಗಳು ಎಷ್ಟು ವರ್ಷಗಳ ಕಾಲ ಉಪಯೋಗಕ್ಕೆ ಬರುತ್ತವೆ ; ಸದರಿ ತಂತಿಗಳಿಗೆ ಕಾಲಮಿತಿ ನಿಗದಿಪಡಿಸಲಾಗಿದೆಯೇ ;

(ಆ) ಸದರಿ ತಂತಿಗಳ ಕಾಲಮಿತಿ ಮುಗಿದ ನಂತರ ತಂತಿಗಳನ್ನು ಬದಲಾಯಿಸಲು ಇರುವ ಮಾನದಂಡಗಳಾವುವು ; (ಮಾಹಿತಿ ನೀಡುವುದು)

(ಇ) ರಸ್ತೆ ಬದಿಗಳಲ್ಲಿ ತಂತಿಗಳು ಹರಿದು ಬೀಳುತ್ತಿದ್ದು, ಜನ-ಜಾನುವಾರುಗಳಿಗೆ ಪ್ರಾಣ ಹಾನಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಪಕ್ರರಣಗಳ ಕುರಿತು ಸರ್ಕಾರ ಕೈಗೊಂಡ ಮುನ್ನೆಚರಿಕೆ ಕ್ರಮಗಳಾವುವು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಈ ವಿದ್ಯುತ್ ತಂತಿಗಳ ಬದಲಿಗೆ ವಿದ್ಯುತ್ ಸಂಪರ್ಕ ಒದಗಿಸಲು ಬೇರೆ ಹೊಸ ಮಾರ್ಗಗಳನ್ನು ಅಳವಡಿಸುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ ; ನಡೆಸಿದ್ದಲ್ಲಿ, ಅವು ಯಾವುವು ? (ತಂತ್ರಾಂಶದ ಕುರಿತು ಸಂಪೂರ್ಣ ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ನ್ಯಾಯಬೆಲೆ ಅಂಗಡಿಗಳ ಸ್ಥಿತಿಗತಿ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೩೨ (೭೫೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಸರ್ಕಾರಿ ನ್ಯಾಯಬೆಲೆ ಅಂಗಡಿಗಳು ಕಾರ್ಯನಿರ್ವಹಿಸುತ್ತಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಸರ್ಕಾರಿ ನ್ಯಾಯಬೆಲೆ ಅಂಗಡಿ ಪರವಾನಗಿ ಪಡೆಯಲು ಇರುವ ಮಾನದಂಡಗಳೇನು ; (ವಿವರ ನೀಡುವುದು)

(ಇ) ನ್ಯಾಯಬೆಲೆ ಅಂಗಡಿಗಳಿಗೆ ಆಹಾರ ಪದಾರ್ಥಗಳನ್ನು ಪೂರೈಕೆ ಮತ್ತು ಸರಬರಾಜು ಮಾಡಲು ಇರುವಂತಹ ನಿಬಂಧನೆಗಳಾವುವು ;

(ಈ) ರಾಜ್ಯದಲ್ಲಿರುವ ಜಿಲ್ಲೆಗಳಿಗೆ ಯಾವ ಯಾವ ರೀತಿಯ ಆಹಾರ ಪದಾರ್ಥಗಳನ್ನು ವಿತರಿಸಲಾಗುತ್ತಿದೆ ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಉನ್ನತ ಶಿಕ್ಷಣ ಇಲಾಖೆಯಲ್ಲಿರುವ ಹುದ್ದೆಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೩೩ (೭೫೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಪದವಿ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಸದರಿ ಪದವಿ ಕಾಲೇಜು ಹಾಗೂ ವಿಶ್ವವಿದ್ಯಾಲಯಗಳಲ್ಲಿ ಅವಶ್ಯವಿರುವ ಉಪನ್ಯಾಸಕರ ಹುದ್ದೆಗಳ ಸಂಖ್ಯೆಯೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಅವಶ್ಯವಿರುವ ಉಪನ್ಯಾಸಕರ ಹುದ್ದೆಗಳಲ್ಲಿ ಈಗಾಗಲೇ ಭರ್ತಿ ಮಾಡಿರುವ ಹುದ್ದೆಗಳೆಷ್ಟು ; ಭರ್ತಿ ಮಾಡಬೇಕಾಗಿರುವ ಹುದ್ದೆಗಳೆಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ರಾಜ್ಯದಲ್ಲಿರುವ ಒಟ್ಟು ಅತಿಥಿ ಉಪನ್ಯಾಸಕರ ಸಂಖ್ಯೆಯೆಷ್ಟು ; ಸದರಿಯವರುಗಳಿಗೆ ನೀಡಲಾಗುತ್ತಿರುವ ಗೌರವಧನವೆಷ್ಟು ; (ಹುದ್ದೆವಾರು ವಿವರ ನೀಡುವುದು)

(ಉ) ಯಾವ ಯಾವ ವಿಶ್ವವಿದ್ಯಾಲಯಗಳಲ್ಲಿ ಎಷ್ಟೆಷ್ಟು ಜನ ಅತಿಥಿ ಉಪನ್ಯಾಸಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ ? (ಜಿಲ್ಲಾವಾರು ವಿವರ ನೀಡುವುದು)

## ಶ್ರೀಗಂಧ ಮರಗಳನ್ನು ಬೆಳೆಸಲು ಪ್ರೋತ್ಸಾಹ ನೀಡುವ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೩೪ (೭೫೯) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯವು ಶ್ರೀಗಂಧದ ನಾಡೆಂದು ಕೀರ್ತಿ ಪಡೆದಿದ್ದು, ಇಲ್ಲಿರುವ ಶ್ರೀಗಂಧದ ಎಣ್ಣೆ ಉತ್ಪಾದಿಸಲು ಇರುವ ಕಾರ್ಖಾನೆಗಳ ಸಂಖ್ಯೆಯೆಷ್ಟು ; (ಪೂರ್ಣ ಮಾಹಿತಿ ಒದಗಿಸುವುದು)

(ಆ) ಶ್ರೀಗಂಧ ಬೆಳೆಯನ್ನು ಪ್ರೋತ್ಸಾಹಿಸಲು ಸರ್ಕಾರ ರೈತರಿಗೆ ಯಾವ ರೀತಿಯಲ್ಲಿ ಸಹಾಯ/ಸೌಲಭ್ಯಗಳನ್ನು ಒದಗಿಸುತ್ತಿದೆ ; (ಪೂರ್ಣ ಮಾಹಿತಿ ಒದಗಿಸುವುದು)

(ಇ) ಶ್ರೀಗಂಧದ ಮರಗಳನ್ನು ಮಾರಾಟ ಮಾಡಲು ಸರ್ಕಾರದಲ್ಲಿರುವ ನಿಯಮಗಳೇನು ; ಶ್ರೀಗಂಧ ಬೆಳೆದ ರೈತನ್ನು ತನ್ನ ಮರಗಳನ್ನು ಮಾರಾಟ ಮಾಡಲು ಇರುವ ಸಂಸ್ಥೆಗಳಾವುವು ; (ವಿವರವಾಗಿ ಮಾಹಿತಿ ಒದಗಿಸುವುದು)

(ಈ) ಪ್ರಸ್ತುತ ದೇವಾಲಯಗಳಲ್ಲಿ ಹಾಗೂ ದರ್ಗಾದ ಉರುಸ್ ಧಾರ್ಮಿಕ ಆಚರಣೆಯ ಸಂದರ್ಭದಲ್ಲಿ ಶ್ರೀಗಂಧಕ್ಕೆ ತೀವ್ರ ಅಭಾವ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಶ್ರೀಗಂಧ ಬೆಳೆಯನ್ನು ಹೆಚ್ಚಿಸಲು ಸರ್ಕಾರ ಕೈಗೊಂಡ ಕಾರ್ಯಕ್ರಮಗಳಾವುದು ? (ವಿವರ ಒದಗಿಸುವುದು)

## ಹಾನಿಕಾರಕ ಕೃತಕ ಬಣ್ಣವನ್ನು ಆಹಾರ ಉತ್ಪನ್ನಗಳಿಗೆ ಬಳಸುತ್ತಿರುವ ಬಗ್ಗೆ

**ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೩೫ (೮೦೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಹಕರನ್ನು ಆಕರ್ಷಿಸಲು ಮತ್ತು ಆಹಾರ ಪದಾರ್ಥಗಳನ್ನು ರುಚಿಕರವಾಗಿರಿಸಲು ಆಹಾರ ತಯಾರಕರು ಹಾನಿಕಾರಕ ಕೃತಕ ಬಣ್ಣಗಳು ಮತ್ತು ರಸಾಯನಿಕಗಳನ್ನು ಅತಿ ಹೆಚ್ಚು ಬಳಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ನಿಷೇದವಿರುವ ಇವುಗಳನ್ನು ಬಳಸಿ ಆಹಾರ ತಯಾರಿಸಿ ಸಾರ್ವಜನಿಕರಿಗೆ ಮಾರಾಟ ಮಾಡುತ್ತಿರುವವರ ವಿರುದ್ಧ ಸರ್ಕಾರ ಕೈಗೊಂಡಿರುವ ಪರಿಣಾಮಕಾರಿ ಕ್ರಮಗಳೇನು ; (ವಿವರ ನೀಡುವುದು)

(ಇ) ಈ ರೀತಿಯ ಹಾನಿಕಾರಕ ಬಣ್ಣಗಳು ಮತ್ತು ರಸಾಯನಿಕಗಳನ್ನು ಆಹಾರ ತಯಾರಕರು ಬಳಸದಂತೆ ನಿಗಾವಹಿಸಬೇಕಾದ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಮಕ್ಕಳಿಗೆ ಪೌಷ್ಠಿಕ ಆಹಾರ ಪೂರೈಕೆ ನಿರ್ವಹಣೆ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೩೬ (೮೨೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಎಲ್ಲಾ ಸರ್ಕಾರಿ ಅನುದಾನಿತ ಶಾಲೆಯ ಮಕ್ಕಳಿಗೆ ಪೂರಕ ಪೌಷ್ಠಿಕ ಆಹಾರ ವಿತರಣೆ ಯೋಜನೆ ಜಾರಿಯಲ್ಲಿದ್ದು,

ಸದರಿ ಯೋಜನೆಗೆ ನೀಡಿರುವ ಅನುದಾನ ಎಷ್ಟು ; ಅಜೀಂ ಪ್ರೇಮ್‌ಜೀ ಫೌಂಡೇಶನ್ ವತಿಯಿಂದ ನೀಡುವ ಸಹಾಯಧನ ಎಷ್ಟು ; ಮತ್ತು ಸದರಿ ಸಹಾಯಧನವನ್ನು ರಾಜ್ಯ ಸರ್ಕಾರ ಸರಿಯಾದ ರೀತಿಯಲ್ಲಿ ಬಳಕೆ ಮಾಡುತ್ತಿದೆಯೇ ; (ವಿವರ ನೀಡುವುದು)

(ಆ) ಸದರಿ ಪೌಷ್ಠಿಕ ಆಹಾರ ಖರೀದಿ ದಾಸ್ತಾನು ಮತ್ತು ನಿರ್ವಹಣೆಯನ್ನು ಯಾವ ರೀತಿಯಲ್ಲಿ ನಿರ್ವಹಿಸಲಾಗುತ್ತದೆ ; (ವಿವರ ನೀಡುವುದು)

(ಇ) ಪೌಷ್ಠಿಕ ಆಹಾರಕ್ಕೆ ನಿಗದಿಪಡಿಸಿದ ದರ ಎಷ್ಟು ಮತ್ತು ಸದರಿ ದರದಲ್ಲಿ ದೊರಕದಿರುವುದರಿಂದ ವ್ಯತ್ಯಾಸದ ಗರಿಷ್ಠ ದರದ ಮೊತ್ತವನ್ನು ಶಿಕ್ಷಕರೇ ಭರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ದರ ಪರಿಷ್ಕೃತ ಆದೇಶವನ್ನು ಹೊರಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ಗ್ರಾಮೀಣ ಭಾಗದ ಶಾಲೆಯಲ್ಲಿ ದಾಸ್ತಾನು ಮಾಡಲು ಅಗತ್ಯ ವ್ಯವಸ್ಥೆ ಇಲ್ಲದ ಕಾರಣ ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಮೇಲ್ಕಂಡ ಕಾರಣಗಳಿಂದ ಪೌಷ್ಠಿಕ ಆಹಾರ ವಿತರಿಸುವ ಕಾರ್ಯವನ್ನು ಯಾವುದಾದರೂ ಏಜೆನ್ಸಿಗೆ ಅಥವಾ ಸಗಟು ಪೂರೈಕೆದಾರರಿಗೆ ವಹಿಸಲು ಸರ್ಕಾರಕ್ಕಿರುವ ತೊಂದರೆ ಏನು ಮತ್ತು ತೆಗೆದುಕೊಳ್ಳುವ ಕ್ರಮಗಳೇನು ?

## ಗ್ರಾಮೀಣ ಭಾಗದ ಹೆಣ್ಣುಮಕ್ಕಳಿಗೆ ಸ್ಯಾನಿಟರಿ ಪ್ಯಾಡ್ ವಿತರಣೆ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೩೭ (೮೨೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಗ್ರಾಮೀಣ ಭಾಗದ ಹೆಣ್ಣು ಮಕ್ಕಳಿಗೆ ಎಷ್ಟು ಸ್ಯಾನಿಟರಿ ಪ್ಯಾಡ್‌ಗಳನ್ನು ವಿತರಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸ್ಯಾನಿಟರಿ ಪ್ಯಾಡ್‌ಗಳ ಬಳಕೆ ಮತ್ತು ನಿರ್ವಹಣೆ ಬಗ್ಗೆ ಕೈಗೊಂಡಿರುವ ಕಾರ್ಯಕ್ರಮಗಳೇನು ; (ವಿವರ ನೀಡುವುದು)

(ಇ) ಆರೋಗ್ಯವಂತ ಹೆಣ್ಣು ಮಕ್ಕಳ ಜೀವನಕ್ರಮಕ್ಕಾಗಿ ಅಗತ್ಯ ಕ್ರಮ ಕೈಗೊಳ್ಳಲಾಗಿದೆಯೇ ?

## ವನ್ಯಜೀವಿ ಮಂಡಳಿಯ ಸದಸ್ಯರ ನೇಮಕಾತಿ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೩೮ (೮೨೭) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ವನ್ಯಜೀವಿ ಮಂಡಳಿಗೆ ಪ್ರಸ್ತುತ ಸಾಲಿನ ಮಂಡಳಿಯ ಸದಸ್ಯರ ನೇಮಕಾತಿಯಲ್ಲಿ ಅರ್ಹತೆಯ ಮಾನದಂಡಗಳನ್ನು ಗಾಳಿಗೆ ತೂರಿರುವ ಬಗ್ಗೆ ದೂರುಗಳು ಬಂದಿರುವುದು ನಿಜವೇ ;

(ಆ) ನೇಮಕಾತಿ ಮಾಡಲು ನಿಗದಿಪಡಿಸಿರುವ ಮಾನದಂಡಗಳೇನು ; ಮತ್ತು ಈಗ ನೇಮಕಗೊಂಡಿರುವ ಸದಸ್ಯರುಗಳ ಅನುಭವಗಳು ಹಾಗೂ ಅವರ ಅರ್ಹತೆಗಳ ಬಗ್ಗೆ ವಿವರವನ್ನು ಒದಗಿಸುವುದು ;

(ಇ) ಅನರ್ಹ ಸದಸ್ಯರ ನೇಮಕವಾಗಿದ್ದಲ್ಲಿ, ಕೂಡಲೇ ಮಂಡಳಿಯನ್ನು ವಿಸರ್ಜಿಸಿ ಹೊಸ ಮಂಡಳಿಯನ್ನು ರಚಿಸಲು ಕ್ರಮ ವಹಿಸಲಾಗಿದೆಯೇ ; ವಹಿಸಲಾಗುವುದೇ ?

## ರಾಜ್ಯದ ಹೆಲ್ತ್ ಟೂರಿಸ್ಂ ನಿರ್ವಹಣೆ ಮಾಡುವ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೩೯ (೮೨೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರ ಹೆಲ್ತ್ ಟೂರಿಸ್ಂ ಅನುಷ್ಠಾನಕ್ಕೆ ಮುಂದಾಗಿರುವುದು ನಿಜವೇ ;

(ಆ) ಹೊರ ರಾಜ್ಯ ಮತ್ತು ಹೊರ ದೇಶದ ರೋಗಿಗಳ ಸಲುವಾಗಿ ರಾಜ್ಯ ಸರ್ಕಾರದಿಂದ ಹೊಸ ಆಸ್ಪತ್ರೆಗಳನ್ನು ನಿರ್ಮಿಸಲಾಗಿದೆಯೇ ಅಥವಾ ಸಾರ್ವಜನಿಕ ಆಸ್ಪತ್ರೆಗಳಲ್ಲಿ ವ್ಯವಸ್ಥೆ ಮಾಡಲಾಗಿದೆಯೇ ; (ವಿವರ ನೀಡುವುದು)

(ಇ) ರಾಜ್ಯದ ಆಸ್ಪತ್ರೆಗಳಲ್ಲಿ ಔಷಧಿ, ವೈದ್ಯರ, ಸಿಬ್ಬಂದಿಗಳ ಕೊರತೆ ಕಾಡುತ್ತಿದ್ದರು ಸಹ ಹೆಲ್ತ್ ಟೂರಿಸ್ಂಗೆ ಒತ್ತು ನೀಡುತ್ತಿರುವುದು ಸರಿಯೇ ಮತ್ತು ಸರ್ಕಾರ ಕೈಗೊಂಡ ಕ್ರಮಗಳೇನು ?

## ನ್ಯಾಯಬೆಲೆ ಅಂಗಡಿಗಳ ಸರ್ವರ್ ಸಮಸ್ಯೆಯ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೬೪೦ (೮೨೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ನ್ಯಾಯಬೆಲೆ ಅಂಗಡಿಗಳಲ್ಲಿ ಸರ್ವರ್ ಸಮಸ್ಯೆಯಿಂದಾಗಿ ಸಾರ್ವಜನಿಕರಿಗೆ ಪ್ರತಿ ತಿಂಗಳ ಪಡಿತರ ಸಾಮಗ್ರಿಗಳು ಸಮಯಕ್ಕೆ ಸರಿಯಾಗಿ ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ ಈ ಸಮಸ್ಯೆಯ ಬಗ್ಗೆ ನಿರ್ಲಕ್ಷವನ್ನು ವಹಿಸಲು ಕಾರಣಗಳೇನು ;

(ಇ) ಸರ್ವರ್ ಸಮಸ್ಯೆಯನ್ನು ಹೋಗಲಾಡಿಸಿ ಬಡ ಜನರಿಗೆ ಪ್ರತಿ ತಿಂಗಳು ನಿಯಮಿತವಾಗಿ ಪಡಿತರವನ್ನು ವಿತರಿಸಲು ಕೈಗೊಳ್ಳಬಹುದಾದ ಕ್ರಮಗಳೇನು ;

## ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಿಂದ ಯಂತ್ರೋಪಕರಣಗಳ ಖರೀದಿ ಕುರಿತು

**ಶ್ರೀ ಎಸ್.ಎಲ್ ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೬೪೧ (೮೨೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಿಂದ ರಾಜ್ಯದ ಶಾಲಾ ಕಾಲೇಜುಗಳಿಗೆ ಹಲವಾರು ಯೋಜನೆಗಳ ಮೂಲಕ ಯಂತ್ರೋಪಕರಣಗಳು ಹಾಗೂ ಇತರೆ ಸಾಮಗ್ರಿಗಳನ್ನು ನೀಡಲು ಸರ್ಕಾರ ಕಿಯೋನಿಕ್ಸ್ ಸಂಸ್ಥೆಗೆ ೨೦೦೫ರಿಂದ ೨೦೨೪ರ ವರೆಗೆ ನೀಡಿರುವ ವಿವಿಧ ಯೋಜನೆಗಳು ಯಾವುವು ; (ಸಂಪೂರ್ಣ ವಿವರವಾದ ಮಾಹಿತಿಯನ್ನು ನೀಡುವುದು)

(ಆ) ಈ ಕಿಯೋನಿಕ್ಸ್ ಸಂಸ್ಥೆಯು ಶಿಕ್ಷಣ ಇಲಾಖೆಗೆ ಪೂರ್ಣ ಪ್ರಮಾಣದಲ್ಲಿ ಸಾಮಾಗ್ರಿಗಳನ್ನು ಸರಬರಾಜು ಮಾಡಿದೆಯೇ ;

(ಇ) ಸರ್ಕಾರಕ್ಕೆ ಕಿಯೋನಿಕ್ಸ್ ಸಂಸ್ಥೆಯಿಂದ ನೀಡಿರುವ ಹಲವಾರು ಉಪಕರಣಗಳು ಕಳಪೆ ಮಟ್ಟದಿಂದ ಕೂಡಿದ್ದು, ಸರ್ಕಾರಕ್ಕೆ ಇದರಿಂದ ಆಗಿರುವ ನಷ್ಟವನ್ನು ಬರಿಸಲು ಈ ಸಂಸ್ಥೆಯ ವಿರುದ್ಧ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದ ಅರಣ್ಯ ಪ್ರದೇಶಗಳಲ್ಲಿನ ರೈತರ ಸಮಸ್ಯೆಗಳ ಕುರಿತು

**ಶ್ರೀ ಎಸ್.ಎಲ್ ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೬೪೨ (೮೨೧) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಅರಣ್ಯ ಪ್ರದೇಶದಲ್ಲಿ ಸೆಕ್ಷನ್ ೪(೧) ನಿಯಮದ ಪ್ರಕಾರ ಬರುವ ಸಾಗುವಳಿ ರೈತರು ಸಾಗುವಳಿ ಮಾಡುತ್ತಿರುವ ಜಮೀನಿನ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅರಣ್ಯ ಪ್ರದೇಶಗಳಲ್ಲಿನ ಸಮಸ್ಯೆಗಳನ್ನು ನಿವಾರಿಸಲು ಸರ್ಕಾರ ರಚಿಸಿದ ಕಸ್ತೂರಿರಂಗನ್ ಸಮಿತಿ ವರದಿಯ ಅಂಶಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಸಮಿತಿಯು ಸರ್ಕಾರಕ್ಕೆ ನೀಡಿರುವ ವರದಿಯು ರೈತರ ವಿರುದ್ಧವಾಗಿರುವುದರಿಂದ ಈ ವರದಿಯನ್ನು ತಿರಸ್ಕಾರ ಮಾಡಿದೆಯೇ ಹಾಗೂ ಅರಣ್ಯ ಪ್ರದೇಶದ ಅಕ್ಕಪಕ್ಕದಲ್ಲಿ ಹಲವಾರು ವರ್ಷಗಳಿಂದ ರೈತರು ಉಳಿಮೆ ಮಾಡುತ್ತಿರುವ ಭೂಮಿಯನ್ನು ಸರ್ಕಾರ ಈ ರೈತರಿಗೆ ನೀಡಲು ಯಾವ ಕ್ರಮವನ್ನು ಕೈಗೊಂಡಿದೆ ?

## ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳ ಖಾಲಿ ಹುದ್ದೆಗಳ ಕುರಿತು

**ಶ್ರೀ ಎಸ್.ಎಲ್ ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೬೪೩ (೮೨೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸರ್ಕಾರಿ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಬಹಳಷ್ಟು ಹುದ್ದೆಗಳು ಖಾಲಿ ಇದ್ದು ವಿದ್ಯಾರ್ಥಿಗಳಿಗೆ ಬೋಧನೆ ಮಾಡಲು ತೊಂದರೆ ಆಗುತ್ತಿದ್ದು ಸರ್ಕಾರ ಈ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಯಾವ ಕ್ರಮವನ್ನು ಕೈಗೊಂಡಿದೆ ?

## ರಾಜ್ಯದಲ್ಲಿ ಬಿ.ಪಿ.ಎಲ್. ಕಾರ್ಡ್‌ಗಳನ್ನು ರದ್ದುಪಡಿಸಿರುವ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೬೪೪ (೮೨೪) ಮಾನ್ಯ ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರವು ಬಿ.ಪಿ.ಎಲ್. ಕಾರ್ಡುಗಳನ್ನು ರದ್ದುಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಎಷ್ಟು ಕಾರ್ಡ್‌ಗಳನ್ನು ರದ್ದುಪಡಿಸಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಬಿ.ಪಿ.ಎಲ್. ಕಾರ್ಡುದಾರರನ್ನು ರದ್ದುಪಡಿಸಿ ಮಾರ್ಪಡಿಸಲು

ಸರ್ಕಾರ ರೂಪಿಸಿರುವ ನಿಯಮಗಳೇನು ; ಇದರಿಂದ ಬಡವರ್ಗದವರು ಉಪಯೋಗಿಸುತ್ತಿರುವ ಬಿ.ಪಿ.ಎಲ್ ಕಾರ್ಡುದಾರರು ತುಂಬಾ ಸಂಕಷ್ಟ ಅನುಭವಿಸುತ್ತಿದ್ದು, ರದ್ದುಮಾಡಿದ ಬಿ.ಪಿ.ಎಲ್. ಕಾರ್ಡುದಾರರಿಗೆ ಮರು ಬಿ.ಪಿ.ಎಲ್ ಕಾರ್ಡುಗಳನ್ನು ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸುವ ಬಗ್ಗೆ

**ಡಾ॥ ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) :-**

೬೪೫ (೭೬೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಟ್ಟಿ ಪಟ್ಟಣದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಇದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು ; ಲಿಂಗಸೂರು ತಾಲ್ಲೂಕಿನ ನಾಗರಾಳ ಗ್ರಾಮವು ಅತಿ ಹೆಚ್ಚು ಜನಸಂಖ್ಯೆ ಹೊಂದಿದ್ದು, ಅದರ ಸುತ್ತಮುತ್ತಲು ಅನೇಕ ಹಳ್ಳಿಗಳಿದ್ದು ಪಕ್ಕದಲ್ಲಿ ನಾರಾಯಣಪುರ ಜಲಾಶಯವಿರುವುದರಿಂದ ಆ ಜಲಾಶಯದ ಹಿನ್ನೀರಿನಿಂದ ಅನೇಕ ಸಾಂಕ್ರಾಮಿಕ ರೋಗಗಳು ಹರಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ನಾಗರಾಳ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸುವ ಪ್ರಕ್ರಿಯೆ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಈ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ವೈದ್ಯರು ಹಾಗೂ ಸಿಬ್ಬಂದಿಗಳು ಹಾಗೂ ಮೂಲಭೂತ ಸೌಕರ್ಯ ಒದಗಿಸಲು ಕೈಗೊಂಡ

ಕ್ರಮಗಳೇನು ?

## ಅನುದಾನಿತ ಪದವಿ ಪೂರ್ವ ಕಾಲೇಜುಗಳ ಕುರಿತು

**ಡಾ॥ ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) :-**

೬೪೬ (೭೬೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕದಲ್ಲಿರುವ ಅನುದಾನಿತ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; ಅಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರುಗಳ ಸಂಖ್ಯೆ ಎಷ್ಟು ;

(ಆ) ತಾಲ್ಲೂಕುವಾರು ಜಿಲ್ಲಾವಾರು ಉಪನ್ಯಾಸಕರುಗಳ ಮಾಹಿತಿಯನ್ನು ಒದಗಿಸುವುದು ?

## ಖಾಸಗಿ ಅನುದಾನಿತ ಶಾಲೆಗಳಲ್ಲಿ ಆಂಗ್ಲ ಮಾಧ್ಯಮ ಪ್ರಾರಂಭಿಸುವ ಕುರಿತು

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೬೪೭ (೮೬೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಖಾಸಗಿ ಶಾಲೆಗಳಿಗೆ ಅನುದಾನ ನೀಡುವುದು ಯಾವ ವರ್ಷದಿಂದ ಜಾರಿಗೆ ಬಂದಿದ್ದು, ಇದಕ್ಕೆ ಹಾಲಿ ಇರುವ ನಿಯಮಗಳೇನು ;

(ಆ) ಸರ್ಕಾರಿ ಶಾಲೆಗಳಲ್ಲಿ ಕನ್ನಡ ಮಾಧ್ಯಮದ ಜೊತೆ ಆಂಗ್ಲ ಮಾಧ್ಯಮ ನಡೆಸಲು ಅವಕಾಶ ವಿದೆಯೇ ; ಇದ್ದಲ್ಲಿ, ಯಾವ ನಿಯಮ/ಆದೇಶದ ಅಡಿಯಲ್ಲಿ ನೀಡಲಾಗಿದೆ ; (ಆದೇಶದ ಪ್ರತಿಯನ್ನು ನೀಡುವುದು)

(ಇ) ಖಾಸಗಿ ಅನುದಾನಿತ ಶಾಲೆಗಳಲ್ಲಿ ಕನ್ನಡ ಮಾಧ್ಯಮದ ಜೊತೆಗೆ ಆಂಗ್ಲ ಮಾಧ್ಯಮ ತರಗತಿಗಳನ್ನು ಅನುದಾನ ರಹಿತವಾಗಿ

ತೆರೆಯಲು/ನಡೆಸಲು ಅವಕಾಶವಿದೆಯೇ ; ಇಲ್ಲದಿದ್ದಲ್ಲಿ, ಕಾರಣವೇನು ;

(ಈ) ಖಾಸಗಿ ಅನುದಾನಿತ ಶಾಲೆಗಳಲ್ಲಿ ರಾಜ್ಯಾದ್ಯಂತ ಹಲವು ಶಾಲೆಗಳಿಗೆ ಹತ್ತಾರು ಎಕರೆ ಮತ್ತು ಜಮೀನು ಸೌಲಭ್ಯವಿದ್ದರೂ ವಿದ್ಯಾರ್ಥಿಗಳ ಕೊರತೆಯಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ರೀತಿ ಖಾಸಗಿ ಅನುದಾನಿತ ಶಾಲೆಗಳ ಆಡಳಿತ ಮಂಡಳಿಗೆ ಅನುಮತಿ ನೀಡಿದರೆ ಆಂಗ್ಲ ಮಾಧ್ಯಮ ತೆರೆಯಲು ಅನುಮತಿ ನೀಡಲು ಸರ್ಕಾರಕ್ಕೆ ಇರುವ ಅಡೆತಡೆಗಳೇನು ;

(ಉ) ರಾಜ್ಯದ ಖಾಸಗಿ ಅನುದಾನಿತ ಶಾಲೆಗಳಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿಯಿರುವ ಹುದ್ದೆಗಳಿಗೆ ಶಿಕ್ಷಕರನ್ನು ನೇಮಕ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ?

## ಗ್ರಂಥಪಾಲಕರ ವರ್ಗಾವಣೆಯನ್ನು ಗಣಕೀಕೃತ ಕೌನ್ಸಿಲಿಂಗ್ ಮೂಲಕ ಮಾಡುವ ಕುರಿತು

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೬೪೮ (೮೬೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; ಅವುಗಳಿಗೆ ಮಂಜೂರಾಗಿರುವ ಗ್ರಂಥಪಾಲಕರ ಹುದ್ದೆಗಳ ಸಂಖ್ಯೆ ಎಷ್ಟು ; ಕಾರ್ಯನಿರ್ವಹಿಸುತ್ತಿರುವ ಗ್ರಂಥಪಾಲಕರ ಸಂಖ್ಯೆ ಎಷ್ಟು ;

(ಆ) ಪದವಿ ಪೂರ್ವ ಕಾಲೇಜುಗಳ ಗ್ರಂಥಪಾಲಕರ ಹುದ್ದೆಗಳನ್ನು ಬೋಧಕರ ಹುದ್ದೆಯನ್ನಾಗಿ ಪರಿಗಣಿಸಲಾಗಿದೆಯೇ ; ಪರಿಗಣಿಸಲಾಗಿದ್ದರೆ, ಸದರಿ ಆದೇಶವನ್ನು ನೀಡುವುದು ;

(ಇ) ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು ಮತ್ತು ಉಪನ್ಯಾಸಕರ ವರ್ಗಾವಣೆಗೆ ಯಾವ ವಿಧಾನವನ್ನು ಅನುಸರಿಸಲಾಗುತ್ತಿದೆ ; ಗ್ರಂಥಪಾಲಕರ ವರ್ಗಾವಣೆಗೆ ಯಾವ ನಿಯಮವನ್ನು ಅನುಸರಿಸಲಾಗುತ್ತಿದೆ ;

(ಈ) ಪ್ರಾಂಶುಪಾಲರು, ಉಪನ್ಯಾಸಕರ ರೀತಿಯಲ್ಲಿ ಗ್ರಂಥಪಾಲಕರನ್ನು ಗಣಕೀಕೃತ ಕೌನ್ಸಿಲಿಂಗ್ ಮೂಲಕ ವರ್ಗಾವಣೆ ಮಾಡಲು ಸರ್ಕಾರಕ್ಕೆ ಇರುವ ಸಮಸ್ಯೆಯೇನು ; ಗ್ರಂಥಪಾಲಕರ ವರ್ಗಾವಣೆಯನ್ನು ಗಣಕೀಕೃತ ಕೌನ್ಸಿಲಿಂಗ್ ಮೂಲಕ ಮಾಡುವುದಕ್ಕೆ ಸರ್ಕಾರ ಕೈಗೊಳ್ಳುವ ಕ್ರಮವೇನು ?

## ಕೃಷ್ಣಮೃಗಗಳ ಅರಣ್ಯಧಾಮ ನಿರ್ಮಾಣ/ರಕ್ಷಣೆಯ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೬೪೯ (೮೬೫) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೃಷ್ಣಮೃಗಗಳು ಕಂಡು ಬರುವ ಅರಣ್ಯ ಪ್ರದೇಶಗಳು ಯಾವುವು ;

(ಆ) ಮಧುಗಿರಿ ಮತ್ತು ರಾಣೆಬೆನ್ನೂರಿನಲ್ಲಿ ಕೃಷ್ಣಮೃಗಗಳಿಗೆ ಒದಗಿಸಿರುವ ಸೌಲಭ್ಯಗಳೇನು ;

(ಇ) ಕೆ.ಜಿ.ಎಫ್.ನಲ್ಲಿ ಕೃಷ್ಣಮೃಗಗಳಿಗೆ ಅರಣ್ಯಧಾಮ ನಿರ್ಮಿಸಬೇಕು ಎಂಬ ಪ್ರಸ್ತಾಪ ಸರ್ಕಾರಕ್ಕೆ ಸಲ್ಲಿಕೆಯಾಗಿದೆಯೇ ; ಸಲ್ಲಿಕೆಯಾಗಿದ್ದರೆ, ಅರಣ್ಯಧಾಮ ನಿರ್ಮಾಣಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಬೆಮೆಲ್–ಬೇತಮಂಗಲ ರಸ್ತೆಯಲ್ಲಿ ವಾಹನಕ್ಕೆ ಸಿಲುಕಿ ಮತ್ತು ಬೀದಿ ನಾಯಿಗಳ ದಾಳಿಗೆ ಕೃಷ್ಣಮೃಗಗಳು ಸಾಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇವುಗಳ ರಕ್ಷಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ರಾಜ್ಯದ ಅರಣ್ಯ ಪ್ರದೇಶಗಳಲ್ಲಿರುವ ಅಪರೂಪದ ಪ್ರಾಣಿ ಸಂಕುಲವನ್ನು ರಕ್ಷಣೆ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮವೇನು ;

(ಊ) ಬೇಸಿಗೆಯಲ್ಲಿ ಅರಣ್ಯ ಪ್ರದೇಶದಲ್ಲಿ ನೀರಿನ ಅಭಾವದ ಕಾರಣ ನೀರನ್ನು ಅರಸಿ ನಾಡಿಗೆ ಬಂದು ಬಲಿಯಾಗುವುದನ್ನು ತಡೆಯುವ ಸಲುವಾಗಿ ಅರಣ್ಯದಲ್ಲಿ ನೀರಿನ ಸೌಕರ್ಯ ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಸರ್ಕಾರಿ ಶಾಲೆಗಳಲ್ಲಿ ಶೌಚಾಲಯಗಳ ಸಮರ್ಪಕ ನಿರ್ವಹಣೆ ಮಾಡುವ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :-**

೬೫೦ (ಲ೫ಲ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳು ಎಷ್ಟು ; ಎಷ್ಟು ಶಾಲೆಗಳಲ್ಲಿ ಶೌಚಾಲಯುಗಳ ವ್ಯವಸ್ಥೆ ಕಲ್ಪಿಸಲಾಗಿದೆ ಹಾಗೂ ಶಾಲೆಗಳ ಶೌಚಾಲಯಗಳ ನಿರ್ವಹಣೆಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; ಒಂದು ಶೌಚಾಲಯ ನಿರ್ವಹಣೆಗೆ ಸರ್ಕಾರ ನೀಡುತ್ತಿರುವ ವಾರ್ಷಿಕ ಅನುದಾನ ಎಷ್ಟು ;

(ಆ) ಶೌಚಾಲಯಗಳಲ್ಲಿ ಶುಚಿತ್ವ ಕಾಪಾಡದೆ ಮಕ್ಕಳಿಗೆ ಆರೋಗ್ಯ ಹಾಗೂ ಇನ್ನಿತರೆ ತೊಂದರೆಗಳು ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಶೌಚಾಲಯಗಳಲ್ಲಿ ಶುಚಿತ್ವ ಕಾಪಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿನ ಬಹುತೇಕ ಶಿಕ್ಷಕರ ಹುದ್ದೆ ಖಾಲಿ ಇರುವ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೫೧ (೮೫೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿನ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಮಂಜೂರಾಗಿರುವ, ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಶಾಲೆಗಳಲ್ಲಿ ಬಹುತೇಕ ಶಿಕ್ಷಕರ ಹುದ್ದೆಗಳ ದೀರ್ಘಕಾಲದಿಂದ ಖಾಲಿ ಇರುವುದರಿಂದ ಶೈಕ್ಷಣಿಕವಾಗಿ ಅತ್ಯಂತ ಮುಖ್ಯ ಘಟ್ಟವಾದ ಪ್ರಾಥಮಿಕ, ಪ್ರೌಢ ಶಿಕ್ಷಣದಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳು ಗುಣಮಟ್ಟದ ಶಿಕ್ಷಣ ಪಡೆಯುವಲ್ಲಿ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ರಾಜ್ಯದ ಎಲ್ಲಾ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಸಿಗುವಂತೆ ಮಾಡಲು ಸರ್ಕಾರ ಕ್ರಮ ವಹಿಸುವುದು ?

## ರಾಜ್ಯದಲ್ಲಿರುವ ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡ್‌ಗಳ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೫೨ (೮೭೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಕಾರ್ಡ್‌ಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಪ್ರಸ್ತುತ ಕಾರ್ಡ್‌ಗಳ ವಿತರಣೆ ಕಾರ್ಯಕ್ರಮವನ್ನು ನಿಲ್ಲಿಸಿರುವುದರಿಂದ ರಾಜ್ಯದ ಬಡ ಜನರು ಅನುಭವಿಸುತ್ತಿರುವ ತೊಂದರೆಗಳ ಬಗ್ಗೆ ಸರ್ಕಾರ ಗಮನ ಹರಿಸಿದೆಯೇ ;

(ಇ) ಸರ್ಕಾರವು ಯಾವ ಕಾಲಮಿತಿಯೊಳಗೆ ಕಾರ್ಡ್‌ಗಳ ವಿತರಣೆ ಕಾರ್ಯವನ್ನು ಮರು ಪ್ರಾರಂಭ ಮಾಡಲಾಗುವುದು ;

(ಈ) ೨೦೨೪-೨೫ನೇ ಸಾಲಿನಲ್ಲಿ ಸರ್ಕಾರ ಎಷ್ಟು ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಕಾರ್ಡ್‌ಗಳನ್ನು ವಿತರಿಸುವ ಗುರಿಯನ್ನು ಹೊಂದಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಸರ್ಕಾರಿ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಉಚಿತ ಔಷಧಿ ದೊರಕದೆ ಇರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೬೫೩ (೭೧೯) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಜಿಲ್ಲಾ, ತಾಲ್ಲೂಕು ಹಾಗೂ ಹೋಬಳಿ ಮಟ್ಟದ ಸರ್ಕಾರಿ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಉಚಿತ ಔಷಧಿ ದೊರಕುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮವೇನು ; ಕಳೆದ ೩ ವರ್ಷಗಳ ಅವಧಿಯಲ್ಲಿ ಔಷಧಿ ಖರೀದಿಗಾಗಿ ಎಷ್ಟು ಅನುದಾನವನ್ನು ಸರ್ಕಾರ ಬಿಡುಗಡೆ ಮಾಡಿದೆ ;

(ಇ) ವೈದ್ಯರು ರೋಗಿಗಳಿಗೆ ಖಾಸಗಿ ಪ್ರಯೋಗಾಲಯಗಳಲ್ಲಿ ಪರೀಕ್ಷೆ ಹಾಗೂ ಔಷಧಿಗಳನ್ನು ಖರೀದಿಸಲು ಚೀಟಿಗಳನ್ನು ಬರೆದುಕೊಡಲು ಸರ್ಕಾರದ ನಿಯಮದಡಿಯಲ್ಲಿ ಅವಕಾಶ ಇದೆಯೇ ; ಈ ಪ್ರಕರಣದಡಿಯಲ್ಲಿ ಎಷ್ಟು ವೈದ್ಯರ ಮೇಲೆ ಕ್ರಮ ತೆಗೆದುಕೊಳ್ಳಲಾಗಿದೆ ;

(ಈ) ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳು ದುಡ್ಡಿಲ್ಲದೆ ಸರ್ಕಾರಿ ಆಸ್ಪತ್ರೆಗಳಿಗೆ ಚಿಕಿತ್ಸೆ ಪಡೆಯಲು ಹೋಗಲು ಭಯ ಪಡುತ್ತಿರುವುದು ಅಧಿಕಾರಿಗಳ ಗಮನಕ್ಕೆ ಬಂದಿದೆಯೇ ;

(ಉ) ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಸಂಬಂಧಪಟ್ಟ ಅಧಿಕಾರಿಗಳು ದಿಢೀರ್ ಭೇಟಿ ನೀಡಿ ಪರಿಶೀಲಿಸಲಾಗಿದೆ ? (ಜಿಲ್ಲೆಗಳ ಮಾಹಿತಿಗಳನ್ನು ಒದಗಿಸುವುದು)

## ಗ್ರಾಹಕರ ವ್ಯಾಜ್ಯಗಳನ್ನು ಇತ್ಯರ್ಥ ಮಾಡಲು ವಿಳಂಬ ಆಗುತ್ತಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫೪ (೭೨೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಇತ್ಯರ್ಥ ಆಯೋಗ ಹಾಗೂ ಜಿಲ್ಲಾ ಗ್ರಾಹಕ ನ್ಯಾಯಾಲಯಗಳಲ್ಲಿ ಕಕ್ಷಿದಾರರಿಗೆ ನ್ಯಾಯದಾನ ವಿಳಂಬವಾಗುತ್ತಿರುವುದು ನಿಜವೇ ;

(ಆ) ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೂ ರಾಜ್ಯ ಆಯೋಗದಲ್ಲಿ ಹಾಗೂ ಜಿಲ್ಲಾ ವೇದಿಕೆಗಳಲ್ಲಿ ಗ್ರಾಹಕರಿಂದ ಎಷ್ಟು ದೂರಿನ ಅರ್ಜಿಗಳು ಬಂದಿದೆ ; ಇದರಲ್ಲಿ ಎಷ್ಟು ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ ;

(ಇ) ರಾಜ್ಯದಲ್ಲಿ ರಾಜ್ಯ ಗ್ರಾಹಕ ಆಯೋಗ ಮತ್ತು ಜಿಲ್ಲಾ ವೇದಿಕೆಗಳಲ್ಲಿ ಅಧ್ಯಕ್ಷರು ಹಾಗೂ ಸದಸ್ಯರ ಹುದ್ದೆಗಳು ಖಾಲಿ ಇದೆಯೇ ; ಹಾಗಿದ್ದಲ್ಲಿ, ಎಷ್ಟು ವರ್ಷಗಳಿಂದ ಖಾಲಿ ಇವೆ ; ಇದಕ್ಕೆ ಕಾರಣವೇನು ;

(ಈ) ಖಾಲಿ ಇರುವ ಹುದ್ದೆಗಳನ್ನು ಸಕಾಲದಲ್ಲಿ ಭರ್ತಿ ಮಾಡದೆ ಇರುವುದರಿಂದ ಗ್ರಾಹಕರ ದೂರುಗಳನ್ನು ವಿಲೇವಾರಿ ಮಾಡಲು ವಿಳಂಬವಾಗುತ್ತಿರುವುದನ್ನು ಸರ್ಕಾರ ಒಪ್ಪಿಕೊಳ್ಳುವುದೇ ?

## ಸ್ಥಳೀಯ ಸಂಸ್ಥೆಗಳಿಂದ ಬಂದ ಲೈಬ್ರರಿ ಸೆಸ್ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೬೫೫ (೭೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಂಥಾಲಯ ಇಲಾಖೆಗೆ ಕಳೆದ ೧೦ ವರ್ಷಗಳಿಂದ ಸ್ಥಳೀಯ ಸಂಸ್ಥೆಗಳಿಂದ ಬಂದಿರುವ ಉಪಕರ (ಲೈಬ್ರರಿ ಸೆಸ್) ಹಣವೆಷ್ಟು ಹಾಗೂ ಸೆಸ್ ತೆರಿಗೆಯನ್ನು ಶೇಕಡ ಎಷ್ಟು ಪ್ರಮಾಣದಲ್ಲಿ ವಿಧಿಸಲಾಗಿದೆ ; (ಪೂರ್ಣ ಮಾಹಿತಿ ಒದಗಿಸುವುದು)

(ಆ) ಸ್ಥಳೀಯ ಸಂಸ್ಥೆಗಳು ವಸೂಲಿ ಮಾಡಿರುವ ಲೈಬ್ರರಿ ಸೆಸ್ ಹಣವನ್ನು ಸಕಾಲದಲ್ಲಿ ಇಲಾಖೆಗೆ ಪಾವತಿ ಮಾಡಲಾಗಿದೆಯೇ ಹಾಗೂ ಬಂದಿರುವ ಸೆಸ್ ಹಣವನ್ನು ಯಾವ ಯಾವ ಕಾರ್ಯಚಟುವಟಿಕೆಗೆ ಬಳಸಿಕೊಳ್ಳಲಾಗಿದೆ ;

(ಇ) ಸ್ಥಳೀಯ ಸಂಸ್ಥೆಗಳು ಬಾಕಿ ಉಳಿಸಿಕೊಂಡಿದ್ದಲ್ಲಿ, ಇದಕ್ಕೆ ಇರುವ ಕಾರಣವೇನು ; ಇದರ ಜವಾಬ್ದಾರಿ ಯಾವ ಅಧಿಕಾರಿಗೆ ವಹಿಸಲಾಗಿದೆ ;

(ಈ) ಬೇರೆ ಬೇರೆ ರಾಜ್ಯಗಳಲ್ಲಿ ಲೈಬ್ರರಿ ಸೆಸ್ ಹಣವನ್ನು ಎಷ್ಟು ಪ್ರಮಾಣದಲ್ಲಿ ಸಂಗ್ರಹಿಸುತ್ತಾರೆ ಹಾಗೂ ಹಣವನ್ನು ಯಾವ ಯಾವ ಉದ್ದೇಶಕ್ಕೆ ಬಳಸಿಕೊಳ್ಳುತ್ತಾರೆ ? (ಮಾಹಿತಿ ನೀಡುವುದು)

## ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರಿಗೆ ಕನಿಷ್ಠ ವೇತನ ನೀಡುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೬೫೬ (೭೨೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಾರ್ವಜನಿಕ ಗ್ರಂಥಾಲಯ ಇಲಾಖೆಯ ವ್ಯಾಪ್ತಿಯಲ್ಲಿ ರಾಜ್ಯದಲ್ಲಿ ಎಷ್ಟು ಗ್ರಂಥಾಲಯಗಳನ್ನು ತೆರೆಯಲಾಗಿದೆ ಹಾಗೂ ಪ್ರಸ್ತುತ ಎಷ್ಟು ಗ್ರಂಥಾಲಯಗಳು ಕಾರ್ಯನಿರ್ವಹಿಸುತ್ತಿದೆ ;

(ಆ) ಈ ಗ್ರಂಥಾಲಯ ಇಲಾಖೆಯಲ್ಲಿ ಪ್ರಸ್ತುತ ಎಷ್ಟು ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ ; ಇದರಲ್ಲಿ ಖಾಯಂ ನೌಕರರು, ಗುತ್ತಿಗೆ, ಹೊರಗುತ್ತಿಗೆ ಹಾಗೂ ಗೌರವಧನದ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಗುತ್ತಿಗೆ ಆಧಾರದಡಿ ಕೆಲಸ ನಿರ್ವಹಿಸುತ್ತಿರುವ ಗ್ರಂಥಾಲಯ ಸಹವರ್ತಿ, ಗಣಕಯಂತ್ರ ನಿರ್ವಹಣೆ ಹಾಗೂ ಇನ್ನಿತರ ಕೆಲಸಗಳನ್ನು ಮಾಡುತ್ತಿರುವ ಸಿಬ್ಬಂದಿಗಳಿಗೆ ನೀಡಲಾಗುತ್ತಿರುವ ವೇತನವೆಷ್ಟು ಹಾಗೂ ಇವರಿಗೆ ನೀಡಲಾಗಿರುವ ಸೌಲಭ್ಯಗಳೇನು ;

(ಈ) ಗುತ್ತಿಗೆ ನೌಕರರಿಗೆ ಕನಿಷ್ಠ ವೇತನ ನೀಡಬೇಕೆಂದು ಸರ್ಕಾರ ಆದೇಶವಿದೆಯೇ ; ಹಾಗಿದ್ದಲ್ಲಿ, ಇವರಿಗೆ ಕನಿಷ್ಠ ವೇತನ ನೀಡಲಾಗುತ್ತಿದೆಯೇ ?

# ಪ್ರಸ್ತುತ ರಾಜ್ಯದಲ್ಲಿರುವ ಬಿ.ಪಿ.ಎಲ್, ಎ.ಪಿ.ಎಲ್ ಮತ್ತು ಅಂತ್ಯೋದಯ ಪಡಿತರ ಚೀಟಿ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು):-**

೬೫೭ (೮೩೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಬಿಪಿಎಲ್, ಎಪಿಎಲ್ ಮತ್ತು ಅಂತ್ಯೋದಯ ಪಡಿತರ ಚೀಟಿಗಳನ್ನು ಹೊಂದಿರುವ ಕುಟುಂಬಗಳ ಸಂಖ್ಯೆ ಎಷ್ಟು ; ಪಡಿತರ ಚೀಟಿಯನ್ನು ಪಡೆಯಲು ಸರ್ಕಾರ ನಿಗದಿಪಡಿಸಿರುವ ಮಾನದಂಡಗಳೇನು ;

(ಆ) ೨೦೨೩- ಏಪ್ರಿಲ್ ನಿಂದ ಅಕ್ಟೋಬರ್-೨೦೨೪ ತಿಂಗಳ ಅಂತ್ಯದವರೆಗೆ ಬಿಪಿಎಲ್, ಎಪಿಎಲ್ ಮತ್ತು ಅಂತ್ಯೋದಯ ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಸಿರುವ ಕುಟುಂಬಗಳ ಸಂಖ್ಯೆ ಎಷ್ಟು ; ಹೊಸ ಪಡಿತರ ಚೀಟಿಗಾಗಿ ಅರ್ಜಿ ಸಲ್ಲಿಸಿರುವ ಅರ್ಹ ಫಲಾನುಭವಿಗಳಿಗೆ ಅರ್ಜಿ ಸಲ್ಲಿಸಿದ ದಿನಾಂಕದಿಂದ ಎಷ್ಟು ಸಮಯದ ಒಳಗಾಗಿ ಪಡಿತರ ಚೀಟಿಯನ್ನು ನೀಡಲಾಗುತ್ತಿದೆ ; ಅರ್ಜಿ ಸಲ್ಲಿಸಲು ಅವಕಾಶ ನೀಡಿಲ್ಲದಿದ್ದರೆ ಕಾರಣಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ೨೦೨೩-೨೪ ಮತ್ತು ೨೦೨೪-೨೫ನೇ ಸಾಲಿನಲ್ಲಿ ಅನ್ನಭಾಗ್ಯ ಯೋಜನೆಯಡಿ ಪಡಿತರ ಬದಲಾಗಿ ಇಲ್ಲಿಯವರೆಗೆ ಎಷ್ಟು ಮೊತ್ತವನ್ನು ಪಡಿತರ ಚೀಟಿದಾರರಿಗೆ ಪಾವತಿ ಮಾಡಲಾಗಿದೆ ; ಫಲಾನುಭವಿಗಳ ಸಂಖ್ಯೆ ಎಷ್ಟಿದೆ ; ಪಾವತಿ ಮಾಡಲಾದ ಫಲಾನುಭವಿಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಈ) ಪಡಿತರ ಚೀಟಿಗಳ ತಿದ್ದುಪಡಿ ಮಾಡುವುದು ಹಾಗೂ ಹೊಸ ಪಡಿತರ ಚೀಟಿಯನ್ನು ಪಡೆಯಲು ಸರ್ವರ್ ಸಮಸ್ಯೆಯಿರುವುದರಿಂದ ಜನರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸರ್ಕಾರಿ ಯೋಜನೆಗಳಿಗೆ ಹಾಗೂ ಆರೋಗ್ಯ ಸಂಬಂಧಿಸಿದ ಸವಲತ್ತುಗಳನ್ನು ಪಡೆಯಲು ಪಡಿತರ ಚೀಟಿಯು ಅತ್ಯವಶ್ಯಕವಾಗಿದ್ದು, ಸರಿಯಾದ ಸಮಯದಲ್ಲಿ ಸಾರ್ವಜನಿಕರಿಗೆ ಪಡಿತರ ಚೀಟಿಯ ತಿದ್ದುಪಡಿ ಮತ್ತು ವಿತರಣೆ ಮಾಡದಿದ್ದರೆ ಅವರನ್ನು ವಂಚಿಸಿದಂತೆ ಆಗುವುದಿಲ್ಲವೇ ;

(ಉ) ೨೦೨೩-ಏಪ್ರಿಲ್ ನಿಂದ ಅಕ್ಟೋಬರ್-೨೦೨೪ ತಿಂಗಳವರೆಗೆ ಎಷ್ಟು ಪಡಿತರ ಕಾರ್ಡ್‌ಗಳನ್ನು ರದ್ದುಪಡಿಸಲಾಗಿರುತ್ತದೆ ; ಯಾವ ಕಾರಣಕ್ಕಾಗಿ ರದ್ದುಪಡಿಸಲಾಗಿರುತ್ತದೆ ; ಪಡಿತರ ಕಾರ್ಡ್‌ಗಳನ್ನು ರದ್ದುಪಡಿಸಲು ಜಾರಿಯಲ್ಲಿರುವ ನಿಯಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು):-**

೬೫೮ (೮೩೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳು ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಕೇಂದ್ರಗಳನ್ನು ಮಂಜೂರು ಮಾಡಲು ಇರುವ ನಿಯಮಗಳೇನು ; (ವಿವರ ಒದಗಿಸುವುದು)

(ಇ) ಸದರಿ ಕೇಂದ್ರಗಳನ್ನು ಮಂಜೂರು ಮಾಡುವಲ್ಲಿ ಪ್ರಾದೇಶಿಕ ತಾರತಮ್ಯವಾಗಿರುವುದು ಸರ್ಕಾರದ ಗಮನಕ್ಕೆ ಇದೆಯೇ ; ಹಾಗಿದ್ದಲ್ಲಿ, ತಾರತಮ್ಯ ಸರಿಪಡಿಸಲು ಸರ್ಕಾರ ಕ್ರಮವಹಿಸುವುದೇ ;

(ಈ) ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳು ಅತ್ಯಂತ ಕಡಿಮೆ ಪ್ರಮಾಣದಲ್ಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ನಿಯಮಗಳನ್ವಯ ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ; (ವಿವರ ನೀಡುವುದು)

(ಉ) ಮೇಲ್ಕಂಡ ಆರೋಗ್ಯ ಕೇಂದ್ರಗಳಿಗೆ ಮಂಜೂರಾಗಿರುವ, ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳೆಷ್ಟು ; (ಆರೋಗ್ಯ ಕೇಂದ್ರವಾರು, ವೃಂದವಾರು, ಜಿಲ್ಲಾವಾರು ವಿವರ ನೀಡುವುದು)

(ಊ) ಸದರಿ ಕೇಂದ್ರಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಸರ್ಕಾರ ಯಾವಾಗ ಭರ್ತಿ ಮಾಡುವುದು ? (ವಿವರ ನೀಡುವುದು)

## ಕೊಪ್ಪಳ ಜಿಲ್ಲೆಯಲ್ಲಿರುವ ಪಿ.ಯು ಕಾಲೇಜುಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೫೯ (ಲ೩೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲೆಯಲ್ಲಿರುವ ಪಿ.ಯು ಕಾಲೇಜುಗಳ ಕಟ್ಟಡ ಉದ್ಘಾಟನೆಗೆ ಸಿದ್ಧವಾಗಿರುವ ಕಾಲೇಜುಗಳು ಯಾವುವು ; ಹಾಗಿದ್ದಲ್ಲಿ, ಕಟ್ಟಡ ಉದ್ಘಾಟನೆ ಮಾಡದೆ ಇರುವುದಕ್ಕೆ ಕಾರಣವೇನು ;

(ಆ) ಕೊಪ್ಪಳ ಜಿಲ್ಲೆಯಾದ್ಯಂತ ಇರುವ ಕಾಲೇಜುಗಳ ಕಟ್ಟಡ ಶಿಥಿಲ ಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಯಾವ ಯಾವ ಕಾಲೇಜುಗಳಲ್ಲಿ ದುರಸ್ಥಿ ಕಾರ್ಯ ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಪಿ.ಯು ಕಾಲೇಜುಗಳಲ್ಲಿನ ಉಪನ್ಯಾಸಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ತೆಗೆದುಕೊಂಡ ಕ್ರಮವೇನು ;

(ಈ) ಶಕ್ತಿಯೋಜನೆ ಬಂದಾಗಿನಿಂದ ಬಸ್ ನಿಲ್ದಾಣದ ಬಳಿ ಬಸ್‌ಗಳು ನಿಲ್ಲದೆ ಹೋಗುವುದರಿಂದ ವಿದ್ಯಾರ್ಥಿಗಳಿಗೆ ಕಾಲೇಜುಗಳಿಗೆ ತೆರಳಲು ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ತೆಗೆದುಕೊಂಡ ಕ್ರಮವೇನು ; (ವಿವರ ನೀಡುವುದು)

(ಉ) ಸರ್ಕಾರಿ ಪ್ರೌಢ ಶಾಲೆಗಳಲ್ಲಿಯೇ ಪ್ರಾರಂಭವಾದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಯಾವ ನಿರ್ಧಾರವನ್ನು ಸರ್ಕಾರ ಕೈಗೆತ್ತಿಕೊಂಡಿದೆ ? (ವಿವರ ನೀಡುವುದು)

## ರಾಜ್ಯದಲ್ಲಿರುವ ಸರ್ಕಾರಿ ಖಾಸಗಿ ಅನುದಾನಿತ, ಅನುದಾನ ರಹಿತ, ಪ್ರಾಥಮಿಕ ಮತ್ತು ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೦ (೮೩೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಖಾಸಗಿ ಅನುದಾನಿತ, ಅನುದಾನರಹಿತ, ಕಿರಿಯ ಪ್ರಾಥಮಿಕ, ಹಿರಿಯ ಪ್ರಾಥಮಿಕ, ಪ್ರೌಢ ಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಇವುಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ದಾಖಲಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಕಾಲೇಜುವಾರು ವಿವರ ನೀಡುವುದು)

(ಇ) ಇವುಗಳನ್ನು ಮಂಜೂರು ಮಾಡಲು ಇರುವ ಮಾನದಂಡವೇನು ; ಜನಸಂಖ್ಯೆಗನುಗುಣವಾಗಿ ಸದರಿ ಶಾಲಾ ಕಾಲೇಜುಗಳನ್ನು ಮಂಜೂರು ಮಾಡಲಾಗುತ್ತದೆಯೇ ; (ವಿವರ ನೀಡುವುದು)

(ಈ) ದಕ್ಷಿಣ ಕರ್ನಾಟಕಕ್ಕೆ ಹೋಲಿಸಿದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಸರ್ಕಾರಿ ಶಾಲಾ ಕಾಲೇಜುಗಳ ಸಂಖ್ಯೆ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅವಶ್ಯಕತೆಗನುಗುಣವಾಗಿ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಶಾಲಾ ಕಾಲೇಜುಗಳನ್ನು ಮಂಜೂರು ಮಾಡಲು ಸಾಧ್ಯವಿಲ್ಲವೇ ; ಸಾಧ್ಯವಿದ್ದಲ್ಲಿ, ಯಾವಾಗ ಮಂಜೂರು ಮಾಡಲಾಗುವುದು ?

## ಕರ್ನಾಟಕ ವಿದ್ಯುತ್ ನಿಗಮದ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೬೧ (೮೬೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ವಿದ್ಯುತ್ ನಿಗಮ ನಿಯಮಿತಕ್ಕೆ ಪ್ರತಿ ವರ್ಷ ಬರುವ ಆದಾಯ ಎಷ್ಟು ; ಯಾವ ಮೂಲದಿಂದ ಆದಾಯ ಬರುತ್ತದೆ ; (ಕಳೆದ ಮೂರು ವರ್ಷಗಳ ಮಾಹಿತಿ ಒದಗಿಸುವುದು)

(ಆ) ವಿದ್ಯುತ್ ಸರಬರಾಜು ಕಂಪನಿಗಳಿಗೆ ಸರಬರಾಜು ಮಾಡಿರುವ ವಿದ್ಯುತ್‌ಗೆ ಹೆಸ್ಕಾಂಗಳು ಕರ್ನಾಟಕ ವಿದ್ಯುತ್ ನಿಗಮಕ್ಕೆ ಪಾವತಿ ಮಾಡಬೇಕಾಗಿರುವ ಮೊತ್ತ ಎಷ್ಟು; ಪಾವತಿ ಮಾಡಲು ಬಾಕಿ ಇರುವ ಬಿಲ್ಲು ಮೊತ್ತ ಎಷ್ಟು; (ಎಸ್ಕಾಂವಾರು ಕಳೆದ ೩ ವರ್ಷಗಳ ಮಾಹಿತಿ ನೀಡುವುದು)

(ಇ) ಕರ್ನಾಟಕ ವಿದ್ಯುತ್ ನಿಗಮದ ದೈನಂದಿನ ಖರ್ಚು ವೆಚ್ಚಗಳಿಗೆ ಒಂದು ಆರ್ಥಿಕ ವರ್ಷಕ್ಕೆ (ವೇತನ, ಸಾರಿಗೆ ಹಾಗೂ ಇತರ ವೆಚ್ಚಗಳು ಸೇರಿದಂತೆ) ಬೇಕಾಗಿರುವ ಮೊತ್ತ ಎಷ್ಟು; (ಕಳೆದ ೩ ವರ್ಷಗಳ ಮಾಹಿತಿ ನೀಡುವುದು)

(ಈ) ವೆಚ್ಚಗಳ ಹೊಂದಾಣಿಕೆಗಾಗಿ ಕಳೆದ ೩ ವರ್ಷಗಳಲ್ಲಿ ನಿಗಮವು ಯಾವ ಮೂಲಗಳಿಂದ ಸಾಲ ಪಡೆದಿದೆ ಸಾಲ ಪಡೆದ ಮೊತ್ತದೊಂದಿಗೆ ವಿವರ ನೀಡುವುದು; ಸಾಲ ಪಡೆಯಲು ಅಡಮಾನ ಮಾಡಿರುವ ಆಸ್ತಿಯ ವಿವರ ನೀಡುವುದು;

(ಉ) ೨೦೨೪-೨೫ನೇ ಸಾಲಿನಲ್ಲಿ ಹೊಸದಾಗಿ ಸಾಲಪಡೆಯುವ ಪ್ರಸ್ತಾವನೆ ಇದೆಯೇ; ಸಾಲ ಪಡೆಯಲು ಯಾವ ಆಸ್ತಿಯನ್ನು ಅಡಮಾನ ಮಾಡಲು ಗುರುತಿಸಲಾಗಿದೆ ? (ವಿವರ ನೀಡುವುದು)

## ಕಸ್ತೂರಿ ರಂಗನ್ ವರದಿಯ ಬಗ್ಗೆ

**ಶ್ರೀ ಐವನ್ 'ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೬೨ (೭೨೫) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಸ್ತೂರಿ ರಂಗನ್ ವರದಿಯನ್ವಯ ಕರಾವಳಿ ಭಾಗದಲ್ಲಿ ಅರಣ್ಯ ಪ್ರದೇಶದಲ್ಲಿ ವಾಸಿಸುತ್ತಿರುವವರನ್ನು ಒಕ್ಕಲೆಬ್ಬಿಸುತ್ತಿದ್ದು ಈ ಬಗ್ಗೆ ಕೈಗೊಂಡಿರುವ ಕ್ರಮವೇನು; (ವಿವರ ನೀಡುವುದು)

(ಆ) ಅರಣ್ಯ ಪ್ರದೇಶವಲ್ಲದ ಸ್ಥಳಗಳಲ್ಲಿಯೂ ಅರಣ್ಯ ಇಲಾಖೆಯವರು ನೋಟೀಸ್ ನೀಡದಿರುವುದು ಸರಿಯೇ ; (ವಿವರ ನೀಡುವುದು)

(ಇ) ಕೇಂದ್ರ ಸರ್ಕಾರ ಕಸ್ತೂರಿ ರಂಗನ್ ವರದಿಯನ್ನು ಜಾರಿಗೊಳಿಸಲು ತೀರ್ಮಾನಿಸಿದೆಯೇ ; ರಾಜ್ಯ ಸರ್ಕಾರದ ತೀರ್ಮಾನವೇನು ; (ವಿವರ ನೀಡುವುದು)

(ಈ) ಕಸ್ತೂರಿ ರಂಗನ್ ವರದಿ ಜಾರಿಗೊಳಿಸಿದ್ದಲ್ಲಿ ಅರಣ್ಯ ಪ್ರದೇಶದಲ್ಲಿ ವಾಸಿಸುತ್ತಿರುವ ನಿವಾಸಿಗಳು ಬೀದಿ ಪಾಲು ಆಗಲಿದ್ದು ಈ ಬಗ್ಗೆ ಚಿಂತನೆ ನಡೆಸಿದೆಯೇ ; (ವಿವರ ನೀಡುವುದು)

(ಉ) ರಾಜ್ಯದಲ್ಲಿ ಕಸ್ತೂರಿ ರಂಗನ್ ವರದಿ ಜಾರಿಯಾದಲ್ಲಿ ಎಷ್ಟು ಕುಟುಂಬಗಳು ಬೀದಿಪಾಲು ಆಗುತ್ತದೆ ಅಭಿವೃದ್ಧಿ ಕಾಮಗಾರಿಗಳು ಕುಂಠಿತಗೊಂಡಿದಲ್ಲಿ ಶಾಲಾ, ಆಸ್ಪತ್ರೆ ಅಭಿವೃದ್ಧಿ ಮೇಲೂ ಪರಿಣಾಮ ಬೀರಲಿದ್ದು ಈ ಕುರಿತು ಸರ್ಕಾರದ ನಿಲುವು ಏನು ;

(ಊ) ಸದರಿ ವರದಿ ಜಾರಿಯಾಗದಿದ್ದರೂ ಕಳೆದ ಕೆಲವು ವರ್ಷಗಳಿಂದ ಶಾಲಾ ಕಟ್ಟಡಗಳಿಗೆ, ಆಸ್ಪತ್ರೆಗಳಿಗೆ ಮನೆಗಳನ್ನು ಕಟ್ಟಲು ಪರವಾನಿಗೆ ನಿರಾಕರಿಸುತ್ತಿರುವುದು ಸರಿಯೇ ? (ವಿವರ ನೀಡುವುದು)

## ಮಂಗಳೂರು ವಿಶ್ವವಿದ್ಯಾನಿಲಯದ ಅಧೀನದಲ್ಲಿ ಇರುವ ಸಂಯೋಜಿತ ಕಾಲೇಜುಗಳ ಬಗ್ಗೆ

**ಶ್ರೀ ಐವನ್ 'ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೬೩ (೭೨೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರು ವಿಶ್ವವಿದ್ಯಾಲಯದ ಅಧೀನದಲ್ಲಿ ಇರುವ ಸಂಯೋಜಿತ ಕಾಲೇಜುಗಳನ್ನು ನಿರ್ವಹಣೆ ಮಾಡಲು ವಿಶ್ವವಿದ್ಯಾನಿಲಯ ಬಳಿ

ಹಣಕಾಸಿನ ತೊಂದರೆಗಳು ಇರುವುದರಿಂದ ಅದನ್ನು ಸರ್ಕಾರವೇ ವಹಿಸಿಕೊಳ್ಳಲು ಕ್ರಮ ಕೈಗೊಳ್ಳಬೇಕೆಂಬ ಒತ್ತಾಯವನ್ನು ಪರಿಗಣಿಸದಿರಲು ಕಾರಣವೇನು ; ಸರ್ಕಾರ ಈ ಕಾಲೇಜುಗಳ ನಿರ್ವಹಣೆಗಾಗಿ ವಿಶ್ವವಿದ್ಯಾನಿಲಯಕ್ಕೆ ನೀಡುವ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ವಿಶ್ವವಿದ್ಯಾನಿಲಯ ಅಧೀನದಲ್ಲಿರುವ ಉಡುಪಿ ಜಿಲ್ಲೆಯ ಬೆಳವು ಪ್ರದೇಶದಲ್ಲಿ ಸ್ಥಾಪಿಸಲಾದ ಸಂಶೋಧನೆ ಕೇಂದ್ರದ ವಿದ್ಯಾರ್ಥಿಗಳ ಕೊರತೆ ಇದ್ದು, ಇದರ ಸ್ಥಾಪನೆ ಮೀಸಲಿಟ್ಟ ಹಣದಲ್ಲಿ ದುರುಪಯೋಗವಾಗಿದ್ದು ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ; (ವಿವರ ನೀಡುವುದು)

(ಇ) ವಿಶ್ವವಿದ್ಯಾನಿಲಯದಲ್ಲಿ ಉಪನ್ಯಾಸಕರ ಕೊರತೆಯಿಂದ ವಿದ್ಯಾರ್ಥಿಗಳ ಮೇಲೆ ಉಂಟಾಗುವ ತೊಂದರೆಗಳಿಗೆ ಯಾರನ್ನು ಹೊಣೆಗಾರನ್ನಾಗಿ ಮಾಡಲಾಗುತ್ತದೆ ; (ವಿವರ ನೀಡುವುದು)

(ಈ) ವಿಶ್ವವಿದ್ಯಾನಿಲಯಗಳಲ್ಲಿ ಇಂಗ್ಲೀಷ್ ಬೋಧನೆ (Speaking & Writing) ಮಾಡುತ್ತಿರುವುದು ಸರಿಯೇ ; ಸ್ನಾತಕೋತ್ತರ ಶಿಕ್ಷಣ ಮತ್ತು ಸಂಶೋಧನೆ ಮಾಡಬೇಕಾದ ಸಂಸ್ಥೆಗಳಲ್ಲಿ ಈ ಹಂತದ ಶಿಕ್ಷಣ ನೀಡುತ್ತಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸುವುದೇ ?

## ಸೋಲಾರ್ ವಿದ್ಯುತ್ ಉತ್ಪಾದನೆಯ ಬಗ್ಗೆ

**ಶ್ರೀ ಐವನ್ 'ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೪ (೭೨೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸೋಲಾರ್ ವಿದ್ಯುತ್ ಉತ್ಪಾದನೆ ಹೆಚ್ಚಿಸಲು ಇಲಾಖೆಯ ಮುಂದಿರುವ ಯೋಜನೆಗಳು ಯಾವುವು ; (ವಿವರ ನೀಡುವುದು)

(ಆ) "ರೂಫ್ ಟಾಪ್" ಸೋಲಾರ್ ವಿದ್ಯುತ್‌ನ್ನು ಉತ್ಪಾದಿಸಲು ಇಲಾಖೆ ನೀಡುತ್ತಿರುವ ಪ್ರೋತ್ಸಾಹವೇನು ; ಪ್ರತಿ ಮನೆ ಮತ್ತು ಸರ್ಕಾರಿ ಕಛೇರಿಗಳಲ್ಲಿ ಸೋಲಾರ್ ವಿದ್ಯುತ್ ಉತ್ಪಾದಿಸಲು ಇಲಾಖೆ ಕ್ರಮ ತೆಗೆದುಕೊಳ್ಳುವುದೇ ; (ವಿವರ ನೀಡುವುದು)

(ಇ) "ರೂಫ್ ಟಾಪ್" ಸೋಲಾರ್ ವಿದ್ಯುತ್‌ನ್ನು ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಉತ್ಪಾದಿಸಲಾಗುತ್ತದೆ ; ಇದರಿಂದ ಉತ್ಪಾದಿಸುವ ವಿದ್ಯುತ್ ಎಷ್ಟು ; ಜಿಲ್ಲಾವಾರು ವಿವರ ನೀಡುವುದು ;

(ಈ) "ರೂಫ್ ಟಾಪ್" ವಿದ್ಯುತ್ ಉತ್ಪಾದನೆಗೆ ಇಲಾಖೆ ಪ್ರಚಾರ ನೀಡದಿರುವುದರಿಂದ ಕಛೇರಿ ಮನೆಗಳ ಮೇಲೆ ಉತ್ಪಾದನೆ ಮಾಡದೇ ಇರಲು ಕಾರಣವಾಗಿದ್ದು ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ರಾಜ್ಯದ ಶಾಲೆಗಳಲ್ಲಿ ಅಧ್ಯಾಪಕರ ಕೊರತೆಯ ಬಗ್ಗೆ

**ಶ್ರೀ ಐವನ್ 'ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೬೫ (೭೨೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಷ್ಟು ಶಾಲೆಗಳಲ್ಲಿ ಏಕ ಉಪಾಧ್ಯಾಯರಿದ್ದಾರೆ ಎಷ್ಟು ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ೧೦ ಕ್ಕಿಂತಲೂ ಕಡಿಮೆ ಇದೆ ; ಇದಕ್ಕೆ ಕಾರಣಗಳೇನು ; ಈ ಬಗ್ಗೆ ಇಲಾಖೆ ತೆಗೆದುಕೊಂಡ ಕ್ರಮವೇನು ; (ವಿವರ ನೀಡುವುದು)

(ಆ) ಈ ಶಾಲೆಗಳಲ್ಲಿ ಶಿಕ್ಷಕರ ಕೊರತೆಯಿಂದ ಇದನ್ನು ಯಾವ ರೀತಿ ಪರಿಗಣಿಸಲಾಗುತ್ತದೆ ಮತ್ತು ಶಿಕ್ಷಣದ ಗುಣಮಟ್ಟ ಕುಸಿಯುತ್ತಿರುವುದಂತಾಗುವುದಿಲ್ಲವೆ ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಎಷ್ಟು ಶಾಲೆಗಳಲ್ಲಿ ಕೊಠಡಿಗಳ ಕೊರತೆ ಇದೆ ; ಇದರ ಬಗ್ಗೆ ಇಲಾಖೆ ಕೈಗೊಂಡಿರುವ ಕ್ರಮವೇನು ? (ವಿವರ ನೀಡುವುದು)

## ಖಾಸಗಿ ವಿಶ್ವವಿದ್ಯಾನಿಲಯದ ಬಗ್ಗೆ

**ಶ್ರೀ ಐವನ್ 'ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೬೬ (೭೨೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಖಾಸಗಿ ವಿಶ್ವವಿದ್ಯಾನಿಲಯಗಳು ಕಾರ್ಯನಿರ್ವಹಿಸುತ್ತಿದೆ ; ಇದರಿಂದ ಸರ್ಕಾರಕ್ಕೆ ಆರ್ಥಿಕವಾಗಿ ಲಾಭವಾಗಿದೆಯೇ ; ಹೆಚ್ಚುವರಿಯಾಗಿ ಎಷ್ಟು ಖಾಸಗಿ ವಿಶ್ವವಿದ್ಯಾನಿಲಯಗಳನ್ನು ಸ್ಥಾಪಿಸಲು ಅನುಮತಿ ನೀಡಲಾಗುವುದು ; ಈ ಬಗ್ಗೆ ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ;

(ಆ) ಖಾಸಗಿ ವಿಶ್ವವಿದ್ಯಾನಿಲಯ ಹೆಚ್ಚಳದಿಂದ ಸರ್ಕಾರದ ಅಧೀನದಲ್ಲಿರುವ ವಿಶ್ವವಿದ್ಯಾನಿಲಯಗಳು ಆರ್ಥಿಕ ನಷ್ಟ ಅನುಭವಿಸಲು ಕಾರಣವಾಗಿದ್ದು ಇಲಾಖೆ ಈ ಬಗ್ಗೆ ಕೈಗೊಂಡ ಕ್ರಮವೇನು ;

(ಇ) ಖಾಸಗಿ ವಿಶ್ವವಿದ್ಯಾನಿಲಯಗಳನ್ನು ತಡೆಯಲು ಇಲಾಖೆಗೆ ಇರುವ ಅಧಿಕಾರವೇನು ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಒಟ್ಟು ಎಷ್ಟು ಸ್ವಾಯತ್ತ (Autonomous) ಕಾಲೇಜುಗಳು ಕಾರ್ಯನಿರ್ವಹಿಸುತ್ತಿದೆ ; ಇವುಗಳಿಂದ ಸರ್ಕಾರಕ್ಕೆ ಬರುವ ಆರ್ಥಿಕ ಲಾಭವೇನು ? (ವಿವರ ನೀಡುವುದು)

## ಪಶ್ಚಿಮ ಘಟ್ಟದ ಕುಗ್ರಾಮಗಳ ದುಸ್ಥಿತಿಯ ಬಗ್ಗೆ

**ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೬೭ (೭೮೧) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪಶ್ಚಿಮ ಘಟ್ಟದ ಕಾಡಂಚಿನ ಮನೆಗಳ ಹಿತ ಕಾಪಾಡದ ಕಾರಣ ವ್ಯವಸ್ಥೆ ವಿರೋಧಿ ನಕ್ಸಲರಾಗುವ ಅಪಾಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಜಗತ್ತಿನಲ್ಲಿಯೇ ಕಾಣದ ಅಪರೂಪದ ಜೀವ ವೈವಿಧ್ಯಗಳನ್ನು ಹೊಂದಿದ ಪಶ್ಚಿಮ ಘಟ್ಟವನ್ನು ಸಂರಕ್ಷಣೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಸರ್ಕಾರಿ ಆಸ್ಪತ್ರೆಗಳಲ್ಲಿ ರೋಬೋಟಿಕ್ ಶಸ್ತ್ರಚಿಕಿತ್ಸೆ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೬೮ (೭೪೯) ಮಾನ್ಯ ಆರ್ಯೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ರೋಬೋಟಿಕ್ ಶಸ್ತ್ರಚಿಕಿತ್ಸೆ ಶುರುವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಎಷ್ಟು ವರ್ಷಗಳಿಂದ ಈ ಶಸ್ತ್ರಚಿಕಿತ್ಸೆಯನ್ನು ಅಳವಡಿಸಿಕೊಳ್ಳಲಾಗಿದೆ ; (ವಿವರ ನೀಡುವುದು)

(ಆ) ಪ್ರಸ್ತುತ, ಯಾವ ಯಾವ ಸರ್ಕಾರಿ ಆಸ್ಪತ್ರೆ ಮತ್ತು ಸಂಸ್ಥೆಗಳಲ್ಲಿ ಈ ರೋಬೋಟಿಕ್ ಶಸ್ತ್ರಚಿತ್ಸೆಯನ್ನು ಅಳವಡಿಸಿಕೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಈ ರೋಬೋಟ್ ಅಧುನಿಕ ಯಾಂತ್ರಿಕ ತಂತ್ರಜ್ಞಾನವನ್ನು ಅಳವಡಿಸಿಕೊಂಡು ಇದುವರೆವಿಗೂ ಎಷ್ಟು ಸರ್ಕಾರಿ ಆಸ್ಪತ್ರೆಗಳಿಂದ ಎಷ್ಟು ಸಂಖ್ಯೆ ರೋಗಿಗಳಿಗೆ ಶಸ್ತ್ರಚಿಕಿತ್ಸೆಯನ್ನು ಮಾಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ರೋಬೋಟ್ ಮೂಲಕ ನಡೆಯುವ ಶಸ್ತ್ರ ಚಿಕಿತ್ಸೆಗೆ ವಿಮೆ ಪಾವತಿಸಲು ಖಾಸಗಿ ವಿಮಾ ಕಂಪನಿಗಳು ಹಿಂದೇಟು ಹಾಕ್ಕುತ್ತಿರುವುದರಿಂದ ಮಧ್ಯಮ ಮತ್ತು ಬಡವರಿಗೆ ಹಾಗೂ ಶ್ರೀಸಾಮಾನ್ಯರಿಗೆ ಈ ಸೌಲಭ್ಯ ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಉ) ಮಧ್ಯಮ ಮತ್ತು ಬಡವರಿಗೆ ಹಾಗೂ ಶ್ರೀಸಾಮಾನ್ಯರಿಗೆ ಸರ್ಕಾರಿ ಆಸ್ಪತ್ರೆ ಮತ್ತು ಖಾಸಗಿ ಆಸ್ಪತ್ರೆಗಳಲ್ಲಿ ಈ ರೋಬೋಟಿಕ್ ಯಾಂತ್ರಿಕ ತಂತ್ರಜ್ಞಾನವನ್ನು ಬಳಸಿ ಶಸ್ತ್ರಚಿಕಿತ್ಸೆಯನ್ನು ನೀಡುವ ಸಲುವಾಗಿ ರಾಜ್ಯದ ಯಶಸ್ವಿನಿ ಯೋಜನೆ ಮತ್ತು ಬಿ.ಪಿ.ಎಲ್ ಕುಟುಂಬದ ಸದಸ್ಯರನ್ನು ಈ ರೀತಿಯ ಚಿಕಿತ್ಸೆ ವ್ಯಾಪ್ತಿಗೆ ಸೇರಿಸಲಾಗುವುದೇ ; ಈ ಬಗ್ಗೆ ಸರ್ಕಾರದ ಸ್ಪಷ್ಟತೆಯೇನು ?

## ಅರಣ್ಯ ಇಲಾಖೆಯಲ್ಲಿರುವ ಹುದ್ದೆಗಳ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೭೯ (೭೫೧) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅರಣ್ಯ ಇಲಾಖೆಯಲ್ಲಿ ಐ.ಎಫ್.ಎಸ್. ಅಧಿಕಾರಿಗಳ ಮತ್ತು ಅರಣ್ಯಗಳನ್ನು ಕಾಯುತ್ತಿರುವ ಅರಣ್ಯ ರಕ್ಷಕರ (ಗಾರ್ಡ್‌ಗಳ) ಸಂಖ್ಯೆಯೆಷ್ಟು ; ಅರಣ್ಯ ಕಾಯುವ ಅರಣ್ಯ ರಕ್ಷಕರಿಗಿಂತ ಐ.ಎಫ್.ಎಸ್/ಇತರೆ ಅಧಿಕಾರಿಗಳು ಅಧಿಕ ಪ್ರಮಾಣದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಅರಣ್ಯ ಇಲಾಖೆಯ ಅರಣ್ಯ ಭವನದಲ್ಲಿರುವ ಐ.ಎಫ್.ಎಸ್. ಅಧಿಕಾರಿಗಳ ಸಂಖ್ಯೆಯೆಷ್ಟು; ಯಾವ ಯವ ಅಧಿಕಾರಿಗಳಿಗೆ ಏನೇನು ಕೆಲಸಗಳನ್ನು ನಿರ್ವಹಿಸಲು ನೇಮಿಸಲಾಗಿದೆ ; (ಮಾಹಿತಿ ನೀಡುವುದು)

(ಇ) ಗಿಡ ನೆಡುವ ಕೆಲಸ ನೋಡುವ ಜವಾಬ್ದಾರಿಯಿಂದ ಹಿಡಿದು ಅತಿ ಸಣ್ಣಪುಟ್ಟ ಕೆಲಸಗಳನ್ನು ನೋಡಿಕೊಳ್ಳಲು ಸರಿ ಸುಮಾರು ೨೦ ರಿಂದ ೨೫ ಜನ ಐ.ಎಫ್.ಎಸ್. ಅಧಿಕಾರಿಗಳನ್ನು ಬೆಂಗಳೂರಿನ ಅರಣ್ಯ ಭವನದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಸಣ್ಣ ಹುದ್ದೆಗಳಿಗೆ ಒಬ್ಬೊಬ್ಬ ಐ.ಎಫ್.ಎಸ್. ಅಧಿಕಾರಿ ನೇಮಕ ಮಾಡುವ ಅವಶ್ಯಕತೆಯಿದೆಯೇ ; ಸರ್ಕಾರಕ್ಕೆ ಇಂತಹ ಹುದ್ದೆಗಳಿಂದ ಮಾಹೆಯಾನ ನೂರಾರು ಕೋಟಿ ಆರ್ಥಿಕ ಹೊರೆಯಾಗುವುದಿಲ್ಲವೇ ;

(ಉ) ರಾಜ್ಯದಲ್ಲಿ ಅರಣ್ಯ ಇಲಾಖೆ ಹೊರತುಪಡಿಸಿ, ಐ.ಎಫ್.ಎಸ್. ಅಧಿಕಾರಿಗಳಿಗೆ ಅರಣ್ಯ ಇಲಾಖೆಯಲ್ಲಿ ಹುದ್ದೆಗಳಿಲ್ಲದೆ, ನಿಯೋಜನೆ ಆಧಾರ ಮೇಲೆ ಯಾವ ಯಾವ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ; (ವಿವರ ಒದಗಿಸುವುದು)

(ಊ) ಸರ್ಕಾರಕ್ಕೆ ಅಗತ್ಯಕ್ಕಿಂತ ಹೆಚ್ಚಿರುವ ಐ.ಎಫ್.ಎಸ್. ಅಧಿಕಾರಿಗಳ ಹುದ್ದೆಗಳನ್ನು ಕೇಂದ್ರ ಸರ್ಕಾರಕ್ಕೆ ಹಿಂತಿರುಗಿಸಲು ಸರ್ಕಾರಕ್ಕಿರುವ ತೊಂದರೆಯೇನು ಹಾಗೂ ಅರಣ್ಯ ಭವನದಲ್ಲಿ ಅವಶ್ಯಕತೆಗಿಂತ ಹೆಚ್ಚಿರುವ ಈ ಅಧಿಕಾರಿಗಳನ್ನು ಕಾಡಿನೆಡೆಗೆ ಕಳುಹಿಸಿ, ಜವಾಬ್ದಾರಿ ಕೆಲಸ ನಿರ್ವಹಿಸುವ ಸಲುವಾಗಿ ನೇಮಿಸಲು ಸರ್ಕಾರದ ಕ್ರಮವೇನು ;

(ಋ) ಅರಣ್ಯ ಇಲಾಖೆ ನಿಯಮದ ಪ್ರಕಾರ ಒಂದು ಎಕರೆ ಅರಣ್ಯವನ್ನು ಕಾಯಲು ಎಷ್ಟು ಜನ ಅರಣ್ಯ ರಕ್ಷಕರಿರಬೇಕು ; ಖಾಲಿಯಿರುವ ಅರಣ್ಯ ರಕ್ಷಕರ ಹುದ್ದೆಗಳ ಸಂಖ್ಯೆಯೆಷ್ಟು; ಪ್ರತಿ ವರ್ಷ ಎಷ್ಟು ಜನ ಅರಣ್ಯ ರಕ್ಷಕರು ನಿವೃತ್ತಿ ಹೊಂದುತ್ತಾರೆ ; (ವಿವರವಾದ ಮಾಹಿತಿ ನೀಡುವುದು)

(ಎ) ಅರಣ್ಯ ಇಲಾಖೆಗೆ ಅರಣ್ಯ ರಕ್ಷಕರ ಹುದ್ದೆಗಳನ್ನು ಇತ್ತೀಚೆಗೆ ಯಾವಾಗ ನೇಮಕ ಮಾಡಿಕೊಳ್ಳಲಾಗಿತ್ತು ಮತ್ತು ಎಷ್ಟು ಜನರನ್ನು ನೇಮಕ ಮಾಡಿಕೊಳ್ಳಲಾಗಿದೆ ; ಹಾಲಿ ಖಾಲಿಯಿರುವ ಅರಣ್ಯ ರಕ್ಷಕರ ಹುದ್ದೆಗಳಿಗೆ ಯಾವಾಗ ನೇಮಕ ಮಾಡಿಕೊಳ್ಳಲಾಗುವುದು ? (ವಿವರ ನೀಡುವುದು)

## ರಾಜ್ಯದಲ್ಲಿರುವ ಸರ್ಕಾರಿ ಶಾಲೆಗಳ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೭೦ (೭೫೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ಶಾಲೆಗಳ ಸಂಖ್ಯೆಯೆಷ್ಟು ;

(ಆ) ಈ ಸರ್ಕಾರಿ ಶಾಲೆಗಳಲ್ಲಿ ಕೆಲಸ ಮಾಡುತ್ತಿರುವ ಶಿಕ್ಷಕರ ಸಂಖ್ಯೆಯೆಷ್ಟು; ಎಷ್ಟು ಶಿಕ್ಷಕರ ಹುದ್ದೆಗಳು ಖಾಲಿಯಿವೆ ; (ಮಾಹಿತಿ ನೀಡುವುದು)

(ಇ) ಈ ಶಾಲೆಗಳಲ್ಲಿ ಶಿಕ್ಷಕರ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ಆರ್.ಟಿ.ಇ. ಕಾಯ್ದೆ ಪ್ರಕಾರ ಕಿರಿಯ ಮತ್ತು ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಯಾವ ಅನುಪಾತದಲ್ಲಿ ಶಿಕ್ಷಕರಿರಬೇಕು ? (ವಿವರ ನೀಡುವುದು)

## ಧಾನ್ಯ ಖರೀದಿ ಕೇಂದ್ರಗಳನ್ನು ಅರಂಭಿಸುವ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೬೭೧ (೮೭೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ ಒಳಗೊಂಡಂತೆ ರಾಜ್ಯದಾದ್ಯಂತ ಭತ್ತ, ರಾಗಿ, ಸೇರಿದಂತೆ ವಿವಿಧ ಧಾನ್ಯಗಳನ್ನು ಖರೀದಿಸಲು, ಎಷ್ಟು ಧಾನ್ಯ ಖರೀದಿ ಕೇಂದ್ರಗಳನ್ನು ಆರಂಭಿಸಲು ಸರ್ಕಾರ ಸಿದ್ಧತೆ ಮಾಡಿಕೊಂಡಿದೆ ಅಥವಾ ಈಗಾಗಲೇ ಖರೀದಿ ಕೇಂದ್ರಗಳನ್ನು ಆರಂಭಿಸಿದೆಯೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಧಾನ್ಯ ಖರೀದಿ ಕೇಂದ್ರಗಳಲ್ಲಿ ಖರೀದಿಸುವ ಭತ್ತ, ರಾಗಿ ಸೇರಿದಂತೆ ವಿವಿಧ ಧಾನ್ಯಗಳಿಗೆ ನಿರ್ದಿಷ್ಟಪಡಿಸಿರುವ ಬೆಂಬಲ ಬೆಲೆ ಎಷ್ಟು; (ಧಾನ್ಯಗಳವಾರು ಮಾಹಿತಿ ನೀಡುವುದು) ಹಾಗೂ ಹೆಚ್ಚುವರಿ ಪ್ರೋತ್ಸಾಹಧನ ನೀಡುವ ಕುರಿತು ಸರ್ಕಾರದ ನಿಲುವೇನು ;

(ಇ) ಧಾನ್ಯಗಳನ್ನು ಎಷ್ಟು ಅವಧಿಯುವರೆಗೆ ಖರೀದಿಸಲು ಉದ್ದೇಶಿಸಲಾಗಿದೆ ; ಇದಕ್ಕೆ ಇರುವ ಷರತ್ತುಗಳೇನು ; (ಸಂಪೂರ್ಣ ವಿವರ ನೀಡುವುದು)

(ಈ) ಪ್ರತಿ ರೈತರಿಂದ ಧಾನ್ಯಗಳನ್ನು ನಿರ್ದಿಷ್ಟ ಪ್ರಮಾಣದಲ್ಲಿ ಮಾತ್ರ ಖರೀದಿಸಲಾಗುವುದೋ ಅಥವಾ ಇದಕ್ಕೆ ಮಿತಿ ಇಲ್ಲವೇ ; ಧಾನ್ಯಗಳ ಗರಿಷ್ಠ ಪ್ರಮಾಣದಲ್ಲಿ ಖರೀಸುವುದಾದರೆ ಆ ಪ್ರಮಾಣ ಎಷ್ಟು; (ವಿವರ ನೀಡುವುದು)

(ಉ) ರೈತರಿಗೆ ಅನುಕೂಲವಾಗುವ ರೀತಿಯಲ್ಲಿ ಶಾಶ್ವತವಾಗಿ ಧಾನ್ಯಗಳ ಖರೀದಿ ಕೇಂದ್ರಗಳನ್ನು ತೆರೆಯುವ ಕುರಿತು ಸರ್ಕಾರದ ನಿಲುವೇನು ?

# ಹೈ-ಟೆನ್ಷನ್ ವಿದ್ಯುತ್ ಪ್ರಸರಣ ಮಾರ್ಗ ಹಾದುಹೋಗಿರುವ ಜಮೀನುಗಳ ರೈತರಿಗೆ ಪರಿಹಾರ ನೀಡುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೬೭೨ (೮೭೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆ ಮದ್ದೂರು ತಾಲ್ಲೂಕಿನ ಕುದರಗುಂಡಿ ಸೇರಿದಂತೆ ವಿವಿಧ ಗ್ರಾಮಗಳ ರೈತರು ತಮ್ಮ ಜಮೀನುಗಳ ಮೇಲೆ ಹಾದುಹೋಗಿರುವ ಹೈ-ಟೆನ್ಷನ್ ವಿದ್ಯುತ್ ತಂತಿಗಳು ಪ್ರಸರಣ ಮಾರ್ಗಕ್ಕೆ ಈವರೆವಿಗೂ ಪರಿಹಾರ ನೀಡಿಲ್ಲ ಎಂದು ಆರೋಪಿಸಿ ಪ್ರತಿಭಟಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಎಷ್ಟು ರೈತರ ಜಮೀನುಗಳ ಮೇಲೆ ಹೈ-ಟೆನ್ಷನ್ ವಿದ್ಯುತ್ ತಂತಿಗಳ ಪ್ರಸರಣ ಮಾರ್ಗ ಹಾದುಹೋಗಿದೆ ಹಾಗೂ ಇದರ ಉದ್ದ ಎಷ್ಟು ; ವೋಲ್ಟೇಜ್ ಮಾರ್ಗದ ಸಾಮರ್ಥ್ಯ ಏನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ರೈತರಿಗೆ ಪಾವತಿಸಬೇಕಿರುವ ಪರಿಹಾರ ಮೊತ್ತ ಎಷು ; ಈ ಪೈಕಿ ಪಾವತಿಸಿರುವ ಹಾಗೂ ಬಾಕಿ ಇರುವ ಮೊತ್ತ ಎಷ್ಟು ಪರಿಹಾರದ ಮೊತ್ತ ವಿತರಿಸದೇ ಇದ್ದಲ್ಲಿ ಕಾರಣಗಳೇನು ; (ಸಂಪೂರ್ಣ ವಿವರ ನೀಡುವುದು)

(ಈ) ಕೆಲವು ರೈತರಿಗೆ ಮರಗಳನ್ನು ನಾಶ ಮಾಡಿದ ಪರಿಹಾರಕ್ಕಾಗಿ ನೀಡಿದ್ದ ಚೆಕ್‌ಗಳು ಬೌನ್ಸ್ ಆಗಿರುವ ಬಗ್ಗೆ ಮಾಧ್ಯಮಗಳಲ್ಲಿ ವರದಿಯಾಗಿದ್ದು, ರೈತರಿಗೆ ಸೂಕ್ತ ಪರಿಹಾರ ನೀಡಲು ಸರ್ಕಾರದ ನಿಲುವೇನು ;

(ಉ) ಮಂಡ್ಯ ಜಿಲ್ಲೆಯಲ್ಲಿ ರೈತರ ಜಮೀನುಗಳ ಮೇಲೆ ಹಾದುಹೋಗಿರುವ ಹೈ-ಟೆನ್ಷನ್ ವಿದ್ಯುತ್ ತಂತಿಗಳ ಪ್ರಸರಣ ಮಾರ್ಗಗಳ ಸಂಖ್ಯೆ ಎಷ್ಟು; ಅವು ಯಾವುವು ; ವೋಲ್ಟೇಜ್ ಮಾರ್ಗದ ಸಾಮರ್ಥ್ಯ ಏನು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಊ) ಮಂಡ್ಯ ಜಿಲ್ಲೆಯಲ್ಲಿ ಪರಿಹಾರ ವಿತರಿಸಬೇಕಿರುವ ಭೂಮಾಲೀಕರ ಸಂಖ್ಯೆ ಎಷ್ಟು ಹಾಗೂ ಪಾವತಿಸಲು ಬಾಕಿಯಿರುವ ಮೊತ್ತ ಎಷ್ಟು ಯಾವ ಕಾಲಮಿತಿಯೊಳಗೆ ಪರಿಹಾರ ಧನವನ್ನು ನೀಡಲಾಗುವುದು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಶಾಲೆಯಿಂದ ಹೊರಗುಳಿದ ಮಕ್ಕಳ ಸಮೀಕ್ಷೆ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೬೭೩ (೮೭೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಾಲೆಯಿಂದ ಹೊರಗುಳಿದಿರುವ ಮಕ್ಕಳ ಬಗ್ಗೆ ಸಮೀಕ್ಷೆ ನಡೆಸುವಂತೆ ಇತ್ತೀಚೆಗೆ ಹೈಕೋರ್ಟ್ ಆದೇಶ ನೀಡಿದ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಶಾಲೆಯಿಂದ ಹೊರಗುಳಿದಿರುವ ಮಕ್ಕಳ ಸಮೀಕ್ಷೆ ನಡೆಸಲಾಗಿದೆಯೇ ;

(ಆ) ಇದ್ದಲ್ಲಿ, ಸಮೀಕ್ಷೆಯಲ್ಲಿ ಗುರುತಿಸಲ್ಪಟ್ಟ ಮಕ್ಕಳ ಒಟ್ಟು ಸಂಖ್ಯೆ ಎಷ್ಟು ; (ಸಮೀಕ್ಷೆಗೆ ಒಳಪಟ್ಟ ಮತ್ತು ಶಾಲೆಯಿಂದ ಹೊರಗುಳಿದ ಮಕ್ಕಳ ಸಂಖ್ಯೆಯ ಮಾಹಿತಿಯನ್ನು ಜಿಲ್ಲಾವಾರು ಹಾಗೂ ಮಂಡ್ಯ ಜಿಲ್ಲೆಗೆ ಸಂಬಂಧಿಸಿದಂತೆ ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಸಮೀಕ್ಷೆ ನಡೆದ ಅವಧಿ, ಭಾಗವಹಿಸಿದ ಗಣತಿದಾರರ ಸಂಖ್ಯೆ, ಸಮೀಕ್ಷೆಗೆ ಒಳಪಡಿಸಿದ ಮಕ್ಕಳ ವಯೋಮಾನ, ಇಲಾಖೆಗಳ ಸಹಭಾಗಿತ್ವ, ತಂತ್ರಜ್ಞಾನದ ಬಳಕೆ ಸೇರಿದಂತೆ ಸಮೀಕ್ಷೆ ಕುರಿತ ಸಂಪೂರ್ಣ ಮಾಹಿತಿ ನೀಡುವುದು ;

(ಈ) ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಾಲೆಗೆ ವಾಪಸ್ಸು ಕರೆತರಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಅನಧಿಕೃತ ಗೈರು ಹಾಜರಿ ಆಗುವ ವೈದ್ಯರ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೬೭೪ (೮೭೫) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕಳೆದ ೫ ವರ್ಷಗಳಲ್ಲಿ ಅನಧಿಕೃತ ಗೈರುಹಾಜರಿ ಆಗಿರುವ ವೈದ್ಯರ ಸಂಖ್ಯೆ ಎಷ್ಟು; (ವರ್ಷವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ವೈದ್ಯರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ; ಕ್ರಮ ಜರುಗಿಸದಿದ್ದರೆ, ಕಾರಣಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಎಷ್ಟು ಪ್ರಕರಣಗಳಲ್ಲಿ ವೈದ್ಯರ ವಿರುದ್ಧ ಕ್ರಮ ಜರುಗಿಸಲಾಗಿದೆ ; ಎಷ್ಟು ಪ್ರಕರಣಗಳು ಕ್ರಮ ಜರುಗಿಸಲು ಬಾಕಿ ಇವೆ ; (ಪ್ರಕರಣವಾರು ಮಾಹಿತಿ ನೀಡುವುದು)

(ಈ) ಇಂತಹ ಪ್ರಕರಣಗಳಲ್ಲಿ ವೈದ್ಯರ ವಿರುದ್ಧ ಸಕಾಲದಲ್ಲಿ ಕ್ರಮ ಜರುಗಿಸದ ಅಧಿಕಾರಿಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು ;

(ಉ) ಅನ್ಯ ಇಲಾಖೆಗೆ ನಿಯೋಜನೆ ಮೇರೆಗೆ ತೆರಳಿರುವ ವೈದ್ಯರ ಸಂಖ್ಯೆ ಎಷ್ಟು; (ವರ್ಷವಾರು, ಇಲಾಖಾವಾರು ಮಾಹಿತಿ ನೀಡುವುದು)

(ಊ) ನಿಯೋಜನೆ ಅವಧಿ ಪೂರ್ಣಗೊಂಡರೂ ಮಾತೃ ಇಲಾಖೆಗೆ ಮರಳದೇ ನಿಯೋಜಿತ ಹುದ್ದೆಗಳಲ್ಲೇ ಮುಂದುವರೆದಿರುವ ವೈದ್ಯರ ಸಂಖ್ಯೆ ಎಷ್ಟು; ಈ ವೈದ್ಯರ ವಿರುದ್ಧ ತೆಗೆದುಕೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳ ಅತಿಥಿ ಶಿಕ್ಷಕರು/ಉಪನ್ಯಾಸಕರ ಗೌರವಧನ ಪರಿಷ್ಕರಿಸುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೬೭೫ (೮೭೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಹಾಗೂ ಖಾಲಿ ಇರುವ ಬೋಧಕ ಹುದ್ದೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಆ) ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸರ್ಕಾರಿ ಪ್ರಾಥಮಿಕ, ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಬೋಧಕ ಹುದ್ದೆಗಳ ಎದುರಾಗಿ ನೇಮಕ ಮಾಡಿಕೊಳ್ಳಲಾದ ಅತಿಥಿ ಶಿಕ್ಷಕರು/ಉಪನ್ಯಾಸಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಹಿತಿ ನೀಡುವುದು)

(ಇ) ಅತಿಥಿ ಶಿಕ್ಷಕರು/ಉಪನ್ಯಾಸಕರಿಗೆ ಮಾಹೆಯಾನ ಪಾವತಿಸುತ್ತಿರುವ ಗೌರವಧನ ಎಷ್ಟು; (ವಿವರ ನೀಡುವುದು)

(ಈ) ಹೆಚ್ಚಿನ ಸೇವಾ ಅನುಭವ ಹೊಂದಿರುವ ಹಾಗೂ ಶಾಲೆ/ ಕಾಲೇಜುಗಳಲ್ಲಿ ಪೂರ್ಣಾವಧಿ ಕೆಲಸ ನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರು/ಉಪನ್ಯಾಸಕರಿಗೆ ಮಾಸಿಕ ಪಾವತಿಸುತ್ತಿರುವ ಗೌರವ ಸಂಭಾವನೆ ತೀರಾ ಕಡಿಮೆಯಿದ್ದು ಈ ಮೊತ್ತವನ್ನು ಪರಿಷ್ಕರಣೆ ಮಾಡಲು ಸರ್ಕಾರ ಕ್ರಮಕೈಗೊಳ್ಳಬಾರದೇಕೆ ;

(ಉ) ಪ್ರಸಕ್ತ ಸಾಲಿನಲ್ಲಿ ಪ್ರಾಥಮಿಕ, ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಉದ್ದೇಶಿಸಿದೆಯೇ ; ಒಂದು ವೇಳೆ ಭರ್ತಿಗೆ ನಿರ್ಧರಿಸಿದ್ದರೆ, ಹುದ್ದೆಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಉನ್ನತ ಶಿಕ್ಷಣ ಸಂಸ್ಥೆಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೭೬ (೮೬೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸ್ತುತ ಕರ್ನಾಟಕ ರಾಜ್ಯದಲ್ಲಿ ಖಾಸಗಿ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಲು ಕೋರಿರುವ ಎಷ್ಟು ಅರ್ಜಿಗಳು ಸರ್ಕಾರದ ಮಟ್ಟದಲ್ಲಿ ಅನುಮೋದನೆಗೆ ಬಾಕಿ ಇವೆ ; ಬಾಕಿ ಇರಲು ಕಾರಣಗಳೇನು ; ಯಾವಾಗ ಈ ಅರ್ಜಿಗಳನ್ನು ವಿಲೇವಾರಿ ಮಾಡಲಾಗುವುದು ;

(ಆ) ರಾಜ್ಯದಲ್ಲಿ ಬೇರೆ ಬೇರೆ ಪ್ರದೇಶಗಳಲ್ಲಿ ಖಾಸಗಿ ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಹೊಂದಿರಬೇಕಾದ ಭೂಮಿಯ ವಿಸ್ತೀರ್ಣವೆಷ್ಟು ; ಖಾಸಗಿ ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಅಗತ್ಯವಿರುವ ಭದ್ರತಾ ಠೇವಣಿ ಎಷ್ಟು ಮತ್ತು ಪೂರೈಸಬೇಕಾದ ಇತರ ಷರತ್ತುಗಳು (norms) ಯಾವುವು ; ಅವುಗಳನ್ನು ಯಾವಾಗ ರೂಪಿಸಲಾಗಿದೆ ;

(ಇ) ರಾಜ್ಯದ ಎಲ್ಲಾ ರೀತಿಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಉದ್ಯೋಗಾವಕಾಶ ತರಬೇತಿ ಕೇಂದ್ರ (ಪ್ಲೇಸ್ ಮೆಂಟ್ ಸೆಲ್) ಗಳನ್ನು ಸ್ಥಾಪಿಸಲಾಗಿದೆಯೇ ; ಸ್ಥಾಪಿಸದಿದ್ದಲ್ಲಿ, ಈ ಕುರಿತು ಯಾವಾಗ ಕ್ರಮವಹಿಸಲಾಗುವುದು ;

(ಈ) ಕರ್ನಾಟಕ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಸಂಯೋಜನೆ (ಎಫಿಲಿಯೇಷನ್) ಇರುವ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳು ಎಷ್ಟು ; ಪ್ರತಿಯೊಂದು ಕಾಲೇಜಿನಿಂದ ಪ್ರತೀ ವರ್ಷ ಸಂಯೋಜನೆ ಮತ್ತು ಇತರ ಶುಲ್ಕ ಇತ್ಯಾದಿಗಳ ಮೂಲಕ ಎಷ್ಟು ಮೊತ್ತವನ್ನು ಸಂಗ್ರಹಿಸಲಾಗುತ್ತಿದೆ ಮತ್ತು ಈ ಮೊತ್ತವನ್ನು ಯಾವ ಯಾವ ಉದ್ದೇಶಗಳಿಗೆ ಉಪಯೋಗಿಸಲಾಗುತ್ತಿದೆ ? (ಕಳೆದ ಮೂರು ವರ್ಷಗಳ ವಿವರ ನೀಡುವುದು)

## ಕರ್ನಾಟಕ ರಾಜ್ಯದಲ್ಲಿ ಆಂಬುಲೆನ್ಸ್‌ಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೭೭ (೮೬೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಆಂಬುಲೆನ್ಸ್ ಅಪಘಾತಗಳ ಸಂಖ್ಯೆ ಎಷ್ಟು; ಸದರಿ ಆಂಬುಲೆನ್ಸ್ ಅಪಘಾತಗಳಲ್ಲಿ ಪ್ರಾಣ ಹಾನಿಯಾದ, ಗಾಯಗೊಂಡ ಪ್ರಕರಣಗಳು ಎಷ್ಟು ; ಆಂಬುಲೆನ್ಸ್ ಅಪಘಾತಗಳಲ್ಲಿ ಪ್ರಾಣ ಹಾನಿಯಾದ ಮತ್ತು ಗಾಯಗೊಂಡ ರೋಗಿಗಳಿಗೆ ಪರಿಹಾರ ಧನ ನೀಡಲಾಗಿದೆಯೇ ; ಬಾಕಿಯಿರುವ ಪರಿಹಾರ ಧನ ನೀಡಲು ಯಾವಾಗ ಕ್ರಮವಹಿಸಲಾಗುವುದು ;

(ಆ) ಆಂಬುಲೆನ್ಸ್ ಅಪಘಾತಗಳಿಗೆ ಕಾರಣಗಳೇನು ; ಈ ಕುರಿತು ಎಷ್ಟು ದೂರುಗಳು ದಾಖಲಾಗಿದೆ ; ಆಂಬುಲೆನ್ಸ್ ಸೇವೆಗಳಿಗೆ ವರ್ತಮಾನ ಕಾಲಕ್ಕೆ ಅನುಗುಣವಾಗಿ ಅಗತ್ಯವಿರುವ ನಿಯಮಗಳನ್ನು ರೂಪಿಸಲಾಗಿದೆಯೇ ; ಇಲ್ಲದಿದ್ದರೆ, ಯಾವಾಗ ನಿಯಮಗಳನ್ನು ರೂಪಿಸಲಾಗುವುದು ;

(ಇ) ಆರೋಗ್ಯ ಇಲಾಖೆಯ ಆಂಬುಲೆನ್ಸ್ ಚಾಲಕರು ಹಾಗೂ ಸಿಬ್ಬಂದಿಗಳಿಗೆ ಪ್ರಸ್ತುತ ಎಷ್ಟು ಅವಧಿಯವರೆಗೆ ವೇತನ ಪಾವತಿ ಬಾಕಿಯಿದೆ ; ಯಾವಾಗ ಪಾವತಿಸಲಾಗುವುದು ;

(ಈ) ಈಗಾಗಲೇ ಆಗಿರುವ ಆಂಬುಲೆನ್ಸ್ ಅಪಘಾತಗಳ ಕಾರಣಗಳನ್ನು ಗುರುತಿಸಿಕೊಂಡು ಮುಂದಿನ ದಿನಗಳಲ್ಲಿ ಈ ಆಂಬುಲೆನ್ಸ್ ಅಪಘಾತಗಳನ್ನು ಶೂನ್ಯ ಸಂಖ್ಯೆಗೆ ಇಳಿಸುವ ನಿಟ್ಟಿನಲ್ಲಿ ಏನೇನು ಸುಧಾರಣಾ ಕ್ರಮಗಳನ್ನು ಹಾಗೂ ಮುಂಜಾಗ್ರತೆ ಕ್ರಮಗಳನ್ನು ವಹಿಸಲಾಗಿದೆ ; ಈ ಕುರಿತು ಆರೋಗ್ಯ ಇಲಾಖೆ ಆಂಬುಲೆನ್ಸ್ ಚಾಲಕರು ಹಾಗೂ ಸಿಬ್ಬಂದಿಗಳಿಗೆ ಸೂಚನೆ ನೀಡಲಾಗುತ್ತಿದೆಯೇ ?

## ರಾಜ್ಯದ ಐ.ಟಿ.ಐ.ಗಳ ಉನ್ನತೀಕರಣ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೭೮ (೮೬೯) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಐ.ಟಿ.ಐ.ಗಳ ಸಂಖ್ಯೆಯೆಷ್ಟು ; ಅವುಗಳಲ್ಲಿ ಸರ್ಕಾರಿ, ಖಾಸಗಿ ಮತ್ತು ಅನುದಾನಿತ ಐ.ಟಿ.ಐ.ಗಳು ಎಷ್ಟು ; ಒಟ್ಟು ಬೋಧಕರುಗಳ ಸಂಖ್ಯೆಯೆಷ್ಟು ;

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿರುವ ಸರ್ಕಾರಿ, ಖಾಸಗಿ ಮತ್ತು ಅನುದಾನಿತ ಐ.ಟಿ.ಐ.ಗಳು ಎಷ್ಟು ; ಅನುದಾನಿತ ಐ.ಟಿ.ಐ.

ಗಳಲ್ಲಿ ಈಗ ಇರುವ ಅನುದಾನಕ್ಕೆ ಒಳಪಟ್ಟಿರುವ ಬೋಧಕರ ಸಂಖ್ಯೆಯೆಷ್ಟು ; ಪ್ರಸ್ತುತ ಅನುದಾನಿತ ಐ.ಟಿ.ಐ. ಗಳಲ್ಲಿ ಬೋಧಕರು ನಿವೃತ್ತಿಯಾದ ಬಳಿಕ ಸದರಿ ಹುದ್ದೆಗಳಿಗೆ ಸರ್ಕಾರ ಅನುದಾನ ನೀಡಲು ಕ್ರಮವಹಿಸಲಾಗುತ್ತಿದೆಯೇ ; ಇಲ್ಲದಿದ್ದರೆ, ಯಾವಾಗ ಅನುದಾನ ನೀಡಲು ಕ್ರಮವಹಿಸಲಾಗುತ್ತಿದೆ ;

(ಇ) ಪ್ರಸ್ತುತ ಕೈಗಾರಿಕೆಗಳಿಗೆ ಹೆಚ್ಚು ಸಂಖ್ಯೆಯ ಐ.ಟಿ.ಐ. ಶಿಕ್ಷಣ ಹೊಂದಿರುವವರ ಅಗತ್ಯವಿರುವ ಹಿನ್ನಲೆಯಲ್ಲಿ ರಾಜ್ಯದಲ್ಲಿರುವ ಎಲ್ಲಾ ಐ.ಟಿ.ಐ. ಗಳ ಉನ್ನತೀಕರಣ ಮತ್ತು ಅಭಿವೃದ್ಧಿಗೆ ಯಾವ ಕ್ರಮಗಳನ್ನು ಜರುಗಿಸಲಾಗುತ್ತಿದೆ ? (ವಿವರ ನೀಡುವುದು)

## ಕರ್ನಾಟಕ ರಾಜ್ಯದಲ್ಲಿ ಪಡಿತರ ಚೀಟಿ ವಿತರಣೆ ಮಾನದಂಡಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೭೯ (೮೭೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪಡಿತರ ಚೀಟಿಗಳನ್ನು ಬಿ.ಪಿ.ಎಲ್ ನಿಂದ ಎ.ಪಿ.ಎಲ್‌ಗೆ ಬದಲಾಯಿಸುವಾಗ ಸರ್ಕಾರಿ ನೌಕರರು, ಆದಾಯ ತೆರಿಗೆ/ ಜಿ.ಎಸ್.ಟಿ ತೆರಿಗೆ ಪಾವತಿದಾರರು, ಸಾಲಕ್ಕಾಗಿ ಆದಾಯ ತೆರಿಗೆ ರಿಟರ್ನ್ಸ್ ಸಲ್ಲಿಸಿದವರು, ಆಧಾರ್-ಪಾನ್ ಲಿಂಕ್ ಗೆ ದಂಡ ಪಾವತಿಸಿದವರು ಮತ್ತು ಹೆಚ್ಚು ಆದಾಯ ಹೊಂದಿದವರನ್ನು ಗುರುತಿಸುವಾಗ ನೈಜ ಬಿ.ಪಿ.ಎಲ್ ಪಡಿತರ ಚೀಟಿದಾರರಿಗೆ ತೊಂದರೆಯಾಗದಂತೆ ಇರಲು ಅನುಸರಿಸಿದ ಕಾರ್ಯ ವಿಧಾನವೇನು ;

(ಆ) ಸರ್ಕಾರಿ ರಿಯಾಯಿತಿ ಸೌಲಭ್ಯಗಳಿಗೆ ಬಿ.ಪಿ.ಎಲ್ ಪಡಿತರ ಚೀಟಿ ಮಾನದಂಡವಾಗಿರುವ ಕಾರಣ ಅನೇಕರು ಪಡಿತರ ಅಗತ್ಯವಿಲ್ಲದಿದ್ದರೂ ಬಿ.ಪಿ.ಎಲ್ ಪಡಿತರ ಚೀಟಿ ಹೊಂದಿದ್ದು ಸರ್ಕಾರಿ ಸೌಲಭ್ಯಗಳಿಗೆ ಅರ್ಹತಾ ದಾಖಲೆ ಪಟ್ಟಿಯಿಂದ ಪಡಿತರ ಚೀಟಿಯನ್ನು ಹೊರಗಿಡಲು ಸರ್ಕಾರ ಏನು ಕ್ರಮವಹಿಸುತ್ತಿದೆ ;

(ಇ) ಪಡಿತರ ಸಾಮಾಗ್ರಿಗಳನ್ನು ಸ್ವಬಳಕೆ ಮಾಡದೆ ಪಡಿತರ ವ್ಯವಸ್ಥೆಯನ್ನು ದುರುಪಯೋಗಪಡಿಸುತ್ತಿರುವ ಬಗ್ಗೆ ಇಲಾಖೆ ಏನು ಕ್ರಮವಹಿಸುತ್ತಿದೆ ; ಈ ಹಿನ್ನಲೆಯಲ್ಲಿ ಅನಗತ್ಯ ಹಾಗೂ ಗಂಭೀರತೆಯಿಲ್ಲದ (ನಾನ್ ಸೀರಿಯಸ್) ಬಿ.ಪಿ.ಎಲ್ ಪಡಿತರ ಚೀಟಿ ಅರ್ಜಿಗಳ ಸಂಖ್ಯೆ ಹೆಚ್ಚಾಗಿ ಒಟ್ಟು ಅರ್ಜಿ ವಿಲೆವಾರಿ ವ್ಯವಸ್ಥೆಯ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದ್ದು ನೈಜ ಅರ್ಹ ಬಿ.ಪಿ.ಎಲ್ ಫಲಾನುಭವಿಗಳನ್ನು ಗುರುತಿಸುವಲ್ಲಿ ಆಗುತ್ತಿರುವ ಸಮಸ್ಯೆಯನ್ನು ಹೇಗೆ ನಿವಾರಿಸಲಾಗುತ್ತಿದೆ ?

## ಕರ್ನಾಟಕ ರಾಜ್ಯದಲ್ಲಿ ಕಸ್ತೂರಿ ರಂಗನ್ ವರದಿಯ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೮೦ (೮೭೧) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿ ಕಸ್ತೂರಿ ರಂಗನ್ ವರದಿ ಜಾರಿಗೊಳಿಸುವಿಕೆಯ ಸಮಿತಿಯು ಗುರುತಿಸಿರುವ ಪಶ್ಚಿಮ ಘಟ್ಟ ವ್ಯಾಪ್ತಿಯ (ಇಕೋಸೆನ್ಸಿಟಿವ್ ಏರಿಯಾ) ಪರಿಸರ ಸೂಕ್ಷ್ಮ ಪ್ರದೇಶದ ಎಷ್ಟು ಜನರನ್ನು ಬಾಧಿಸುತ್ತಿದೆ ; ಅವರು ಅನುಭವಿಸುತ್ತಿರುವ ತೊಂದರೆಗಳೇನು ;

(ಆ) ಈ ವರದಿ ಜಾರಿಗೊಳಿಸುವಿಕೆಯಿಂದ ತೊಂದರೆಗೊಳಗಾಗುತ್ತಿರುವ ಜನರ ಸಂಕಷ್ಟಗಳನ್ನು ನಿವಾರಿಸಲು ಮತ್ತು ವರದಿಯ ಅನುಷ್ಠಾನವನ್ನು ಪ್ರಜಾತಾಂತ್ರಿಕವಾಗಿ ವಿರೋಧಿಸುವ ನಾಗರಿಕರನ್ನು ಮನವೊಲಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳುತ್ತಿದೆ ;

(ಇ) ಸದರಿ ಸಮಿತಿ ಗುರುತಿಸಿರುವ ಪರಿಸರ ಸೂಕ್ಷ್ಮ ಪ್ರದೇಶದಲ್ಲಿ ಪ್ರಸ್ತುತವಾಗಿ ದೊಡ್ಡ ಕಟ್ಟಡಗಳು, ಗಣಿಗಾರಿಕೆ, ಮರಳುಗಾರಿಕೆ, ಕೈಗಾರಿಕೆ, ಜಲವಿದ್ಯುತ್, ಪವನ ವಿದ್ಯುತ್ ಯೋಜನೆಗಳು ಇವೆಂಯೇ ; ಅವು ಯಾವುವು ; ಅವುಗಳನ್ನು ಸ್ಥಳಾಂತರಿಸಲಾಗುವುದೇ ?

## ರಾಸಾಯನಿಕ ಯುಕ್ತ ಬಣ್ಣದ ತಿಂಡಿ ತಿನಿಸುಗಳ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೮೧ (೭೬೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ರಾಸಾಯನಿಕ ಯುಕ್ತ ಬಣ್ಣದ ತಿಂಡಿ ತಿನಿಸುಗಳು ನೆರೆ ರಾಜ್ಯಗಳಿಂದ ಸರಬರಾಜಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಆರೋಗ್ಯಕ್ಕೆ ಹಾನಿಕಾರಕವಾದ ಇಂತಹ ತಿಂಡಿ ತಿನಿಸುಗಳ ಸರಬರಾಜನ್ನು ನಿಷೇಧಿಸುವುದಕ್ಕೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಕೈಗೊಂಡಿಲ್ಲದಿದ್ದಲ್ಲಿ, ಕಾರಣವೇನು ?

## ಶಾಲಾ ವಿದ್ಯಾರ್ಥಿಗಳಿಗೆ ಮೊಟ್ಟೆ ನೀಡುವ ಕಾರ್ಯಕ್ರಮದ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೮೨ (೭೬೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉದ್ಯಮಿ ಅಜೀಂ ಪ್ರೇಮ್ ಜಿ ಫೌಂಡೇಷನ್ ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಶಾಲಾ ವಿದ್ಯಾರ್ಥಿಗಳಿಗೆ ವಾರದಲ್ಲಿ ೬ ದಿನ ಮೊಟ್ಟೆ ಯೋಜನೆಗೆ ವಿಶೇಷ ಆರ್ಥಿಕ ನೆರವು ನೀಡಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಈ ಯೋಜನೆಗಾಗಿ ರಾಜ್ಯ ಸರ್ಕಾರಕ್ಕೆ ನೀಡಿದ ಆರ್ಥಿಕ ನೆರವೆಷ್ಟು ; ಎಷ್ಟು ಜನ ಮಕ್ಕಳು ಈ ಯೋಜನೆಯ ಲಾಭ ಪಡೆಯುತ್ತಿದ್ದಾರೆ ;

(ಇ) ಈ ನೆರವಿನ ಸಹಾಯದಿಂದ ಯಾವ ಯಾವ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ ;

(ಈ) ಇತ್ತಿಚೆಗೆ ೬ ದಿನ ಕಾಲ ಮೊಟ್ಟೆ ವಿತರಿಸಲು ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದಕ್ಕೆ ಕಾರಣಗಳೇನು ?

## 'ಡಿ' ಗ್ರೂಪ್ ನೌಕರರಿಗೆ ವೇತನ ಅನುದಾನ ನೀಡುವ ಬಗ್ಗೆ

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೮೩ (೮೦೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೦೨.೦೨.೨೦೦೦ರ ಪೂರ್ವದಲ್ಲಿ ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅನುದಾನ ವಂಚಿತ "ಡಿ" ಗ್ರೂಪ್ ನೌಕರರನ್ನು ಅನುದಾನಕ್ಕೆ ಒಳಪಡಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರವು ಈ ನೌಕರರನ್ನು ಅನುದಾನಕ್ಕೆ ಒಳಪಡಿಸದೆ ಇರಲು ಕಾರಣವೇನು ; (ಸಂಪೂರ್ಣ ವಿವರ ನೀಡುವುದು)

(ಇ) ಈ ನೌಕರರನ್ನು ಅನುದಾನಕ್ಕೆ ಒಳಪಡಿಸಲು ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು ;

(ಈ) ಯಾವ ಕಾಲಮಿತಿಯಲ್ಲಿ ಈ ನೌಕರರನ್ನು ಅನುದಾನಕ್ಕೆ ಒಳಪಡಿಸಲಾಗುವುದು ?

## ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಕಾರ್ಡ್‌ಗಳ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೮೪ (೮೦೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಕಾರ್ಡ್ ದಾರರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಬಿ.ಪಿ.ಎಲ್ ಕಾರ್ಡ್‌ಗಳನ್ನು ನೀಡುವಾಗ ಸರ್ಕಾರ ನಿಗಧಿಪಡಿಸಿರುವ ನಿಯಮ ಹಾಗೂ ಮಾನದಂಡಗಳೇನು ;

(ಇ) ಪ್ರಸ್ತುತ ರಾಜ್ಯದಲ್ಲಿ ಒಟ್ಟು ಎಷ್ಟು ಅಕ್ರಮವಾಗಿ ಬಿ.ಪಿ.ಎಲ್ ಕಾರ್ಡ್‌ಗಳನ್ನು ಹೊಂದಿರುವವರನ್ನು ಗುರುತಿಸಲಾಗಿದೆ ;

(ಇ) ಅಕ್ರಮ ಬಿ.ಪಿ.ಎಲ್ ಕಾರ್ಡ್‌ಗಳನ್ನು ಪತ್ತೆ ಹಚ್ಚಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಈಗಾಗಲೇ ಅಕ್ರಮ ಕಾರ್ಡ್‌ಗಳನ್ನು ನೀಡಿರುವವರನ್ನು ಯಾವ ರೀತಿ ಪತ್ತೆ ಹಚ್ಚಿ ಶಿಕ್ಷೆಗೆ ಒಳಪಡಿಸಲಾಗುತ್ತದೆ ?

## ವಿಶ್ವವಿದ್ಯಾನಿಲಯಗಳ ಅಡಿಯಲ್ಲಿ ಬರುವ ಕಾಲೇಜುಗಳ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೮೫ (೮೧೨) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ವಿಶ್ವವಿದ್ಯಾನಿಲಯಗಳಿವೆ ; ಈ ವಿಶ್ವವಿದ್ಯಾನಿಲಯಗಳಡಿಯಲ್ಲಿ ಎಷ್ಟು ಕಾಲೇಜುಗಳು ಬರುತ್ತವೆ ; (ವಿಶ್ವವಿದ್ಯಾಲಯಗಳವಾರು ವಿವರ ಒದಗಿಸುವುದು)

(ಆ) ವಿಶ್ವವಿದ್ಯಾನಿಲಯಗಳಡಿಯಲ್ಲಿ ಬರುವ ಕಾಲೇಜುಗಳಿಗೆ ಪ್ರತಿ ವರ್ಷ ವಿಶ್ವವಿದ್ಯಾನಿಲಯಗಳಿಂದ ಎಷ್ಟು ಅನುದಾನ ನೀಡಲಾಗುತ್ತದೆ ; ಯಾವ ಯಾವ ಕಾಲೇಜುಗಳಿಗೆ ಎಷ್ಟು ಅನುದಾನ ನೀಡಲಾಗಿದೆ ; (ಕಾಲೇಜುವಾರು ವಿವರ ಒದಗಿಸುವುದು)

(ಇ) ಕಳೆದ ೨ ವರ್ಷಗಳಿಂದ ಸರ್ಕಾರದಿಂದ ವಿಶ್ವವಿದ್ಯಾನಿಲಯಕ್ಕೆ ವರ್ಷಕ್ಕೆ ಎಷ್ಟು ಅನುದಾನ ನಿಗಧಿಪಡಿಸಲಾಗಿದೆ ಹಾಗೂ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ? (ವಿಶ್ವವಿದ್ಯಾನಿಲಯವಾರು ವಿವರ ಒದಗಿಸುವುದು)

# ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳ ವೈದ್ಯರ ಮತ್ತು ಇತರೆ ಹುದ್ದೆಗಳ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೮೬ (೮೧೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಆಸ್ಪತ್ರೆಗಳೆಷ್ಟು; ಈ ಆಸ್ಪತ್ರೆಗಳಿಗೆ ತಜ್ಞ ವೈದ್ಯರು, ಆರೋಗ್ಯ ನಿರೀಕ್ಷಣಾಧಿಕಾರಿ ಸೇರಿದಂತೆ ಮಂಜೂರಾಗಿರುವ ಒಟ್ಟು ಹುದ್ದೆಗಳೆಷ್ಟು ; (ಹುದ್ದೆವಾರು ವಿವರವನ್ನು ಜಿಲ್ಲಾವಾರು ಒದಗಿಸುವುದು)

(ಆ) ಕಳೆದ ೨ ವರ್ಷಗಳಿಂದ ಯಾವ ಹಂತದ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ; (ಹುದ್ದೆವಾರು ವಿವರ ನೀಡುವುದು)

(ಇ) ಖಾಲಿ ಹುದ್ದೆಗಳ ಪರಿಣಾಮ ರೋಗಿಗಳಿಗೆ ತೊಂದರೆಯಾಗುತ್ತಿರುವುದನ್ನು ಸರ್ಕಾರ ಮನಗಂಡಿದೆಯೇ; ರೋಗಿಗಳಿಗೆ ತೊಂದರೆಯಾಗಿರುವ ಕುರಿತು ಎಷ್ಟು ಪ್ರಕರಣಗಳು ವರದಿಯಾಗಿದೆ; (ವಿವರ ನೀಡುವುದು)

(ಈ) ತಜ್ಞ ವೈದ್ಯರು, ಆರೋಗ್ಯ ನಿರೀಕ್ಷಣಾಧಿಕಾರಿ ಸೇರಿದಂತೆ ಮಂಜೂರಾಗಿರುವ ಎಲ್ಲಾ ಹಂತದ ಹುದ್ದೆಗಳ ಭರ್ತಿಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಪ್ರಸ್ತುತ ನೇಮಕ ಪ್ರಕ್ರಿಯೆ ಆರಂಭಗೊಂಡಿದೆಯೇ ? (ವಿವರ ನೀಡುವುದು)

# ರಾಜ್ಯದಲ್ಲಿರುವ ಕನ್ನಡ ಮತ್ತು ಆಂಗ್ಲ ಮಾಧ್ಯಮ ಸರ್ಕಾರಿ ಶಾಲೆಗಳ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೬೮೭ (೮೧೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಆಂಗ್ಲ ಮಾಧ್ಯಮ ಶಾಲೆಗಳೆಷ್ಟು; ಈ ಶಾಲೆಗಳಲ್ಲಿ ದಾಖಲಾಗಿರುವ ಮಕ್ಕಳ ಸಂಖ್ಯೆ ಎಷ್ಟು; (ಜಿಲ್ಲಾವಾರು/ಶಾಲೆವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿರುವ ಸರ್ಕಾರಿ ಕನ್ನಡ ಮಾಧ್ಯಮ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳೆಷ್ಟು ; ಈ ಶಾಲೆಗಳಲ್ಲಿ ದಾಖಲಾಗಿರುವ ಮಕ್ಕಳ ಸಂಖ್ಯೆ ಎಷ್ಟು;

(ಇ) ಕಡಿಮೆ ದಾಖಲಾತಿ ಹಾಗೂ ಶೂನ್ಯ ದಾಖಲಾತಿ ಹೊಂದಿರುವ ಶಾಲೆಗಳೆಷ್ಟು ; ಮಕ್ಕಳ ದಾಖಲಾತಿ ಕಡಿಮೆ ಆಗಲು ಕಾರಣಗಳೇನು ; (ಶಾಲೆವಾರು ವಿವರವನ್ನು ಜಿಲ್ಲಾವಾರು ನೀಡುವುದು)

(ಈ) ಶೂನ್ಯ ದಾಖಲಾತಿ ಹೊಂದಿರುವ ಶಾಲೆಗಳಲ್ಲಿ ಮಕ್ಕಳ ದಾಖಲಾತಿಯನ್ನು ಹೆಚ್ಚಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; ನೀಡಲು ಉದ್ದೇಶಿಸಿರುವ ಸೌಲಭ್ಯಗಳೇನು ? (ವಿವರ ಒದಗಿಸುವುದು)

## ರಾಜ್ಯದಲ್ಲಿರುವ ಒಟ್ಟು ಅರಣ್ಯ ಭೂ ಪ್ರದೇಶದ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೮೮ (೮೦೯) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಅರಣ್ಯ ಪ್ರದೇಶ ಎಷ್ಟು ; ರಾಜ್ಯದ ಒಟ್ಟಾರೆ ಭೂ ಪ್ರದೇಶಕ್ಕೆ ಹೋಲಿಸಿದರೆ ರಾಜ್ಯದಲ್ಲಿ ಇರಬೇಕಾದ ಅರಣ್ಯ ಪ್ರದೇಶ ಎಷ್ಟು ; ನೆರೆಯ ರಾಜ್ಯಗಳಲ್ಲಿರುವ ಅರಣ್ಯ ಪ್ರದೇಶ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಅರಣ್ಯ ಪ್ರದೇಶ ಹೆಚ್ಚಳ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಈ ಉದ್ದೇಶಕ್ಕಾಗಿ ಸಸಿಗಳನ್ನು ನೆಟ್ಟು ಅರಣ್ಯ ನೆಡುತೋಪು ನಿರ್ಮಿಸಲು ಖರೀದಿಸಿದ ಸಸಿಗಳು ಎಷ್ಟು ; ಈ ಪೈಕಿ ನಾಶವಾಗಿರುವ ಸಸಿಗಳು ಎಷ್ಟು; ಸಸಿಗಳು ನಾಶವಾಗಲು ಕಾರಣಗಳೇನು ; ಸಸಿಗಳು ನಾಶವಾಗಿರುವ ಕಾರಣದಿಂದ ಆಗಿರುವ ನಷ್ಟ ಎಷ್ಟು ;

(ಇ) ಕಳೆದ 3 ವರ್ಷಗಳಿಂದ ರಾಜ್ಯದಲ್ಲಿ ಅರಣ್ಯೀಕರಣ ಮತ್ತು ಹಸಿರು ಹೆಚ್ಚಿಸುವ ಸಲುವಾಗಿ ಸರ್ಕಾರ ಮಂಜೂರು ಮಾಡಿರುವ ಮತ್ತು ಬಿಡುಗಡೆ ಮಾಡಿರುವ ಅನುದಾನ ಎಷ್ಟು; ಈ ಪೈಕಿ ವರ್ಷವಾರು ವೆಚ್ಚ ಮಾಡಿರುವ ಹಣ ಎಷ್ಟು;

(ಈ) ಸದರಿ ಅನುದಾನದಿಂದ ಅರಣ್ಯೀಕರಣ ಮತ್ತು ಹಸಿರು ಹೆಚ್ಚಿಸುವಲ್ಲಿ ಆಗಿರುವ ಪ್ರಗತಿ ಏನು ; ಈ ಬಗ್ಗೆ ರೂಪಿಸಲಾಗಿದ್ದ ಕಾರ್ಯ ಕ್ರಮಗಳೇನು ; ಪ್ರತಿ ಕಾರ್ಯಕ್ರಮಕ್ಕೆ ವೆಚ್ಚ ಮಾಡಿರುವ ಹಣ ಎಷ್ಟು ; ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ಕಾಡು ಬೆಳೆಸಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ಕರ್ನಾಟಕ ರಾಜ್ಯದಲ್ಲಿ ಹೈಡ್ರೋಜನ್ ಶಕ್ತಿ ಉತ್ಪಾದಿಸುವ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೬೮೯ (೮೭೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅತ್ಯಂತ ಹಗುರವಾದ ಅಂಶದಲ್ಲೊಂದಾದ ಹೈಡ್ರೋಜನ್ ಶಕ್ತಿಯ ಉತ್ಪಾದನೆಯು ಜಗತ್ತಿನಲ್ಲಿ ಅತ್ಯಾಧುನಿಕ ತಂತ್ರಜ್ಞಾನವಾಗಿದ್ದು, ಈ ಶಕ್ತಿಯ ಉತ್ಪಾದಿಸುತ್ತಿರುವ ದೇಶಗಳಾವುವು ;

(ಆ) ಭಾರತದಲ್ಲಿ ಹೈಡ್ರೋಜನ್ ವಿದ್ಯುತ್ ಶಕ್ತಿಯನ್ನು ಉತ್ಪಾದಿಸಿ ತಮ್ಮ ಕೈಗಾರಿಕಾ/ಸಂಸ್ಥೆಗಳಲ್ಲಿ ಉಪಯೋಗಿಸುತ್ತಿರುವ ಮಾಹಿತಿ ನಿಜವೇ; ಇದ್ದಲ್ಲಿ ರಾಜ್ಯ ಸರ್ಕಾರವು ಈ ಹೈಡ್ರೋಜನ್ ಶಕ್ತಿಯ ಉತ್ಪಾದನೆ ಕುರಿತು ಯೋಜನೆ ರೂಪಿಸಿದೆಯೇ ; ಇದ್ದಲ್ಲಿ, ರಾಜ್ಯದ ಯಾವ ಜಿಲ್ಲೆಗಳಲ್ಲಿ ಇದನ್ನು ಉತ್ಪಾದನಾ ಘಟಕವನ್ನು ಸ್ಥಾಪಿಸಲು ಯೋಜಿಸಿದೆ ; ಹಾಗೂ, ಹೈಡ್ರೋಜನ್ ವಿದ್ಯುತ್ ಉತ್ಪಾದನೆಗೆ ಎಷ್ಟು ವೆಚ್ಚವಾಗಬಹುದೆಂದು ಅಂದಾಜಿಸಲಾಗಿದೆ ;

(ಇ) ಇಂತಹ ಯೋಜನೆಗಳನ್ನು ಜಾರಿಗೊಳಿಸಲು ಯೋಜಿಸಿದ್ದಲ್ಲಿ, ಸರ್ಕಾರವು ಈ ಯೋಜನೆಯನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವ ಮಾದರಿಯಲ್ಲಿ ಅನುಷ್ಠಾನಗೊಳಿಸುತ್ತಿದೆಯೋ ಅಥವಾ ಸಂಪೂರ್ಣ ಸರ್ಕಾರದ ಹಂತದಲ್ಲಿಯೇ ಅನುಷ್ಠಾನಗೊಳಿಸುತ್ತಿದೆಯೇ ;

(ಈ) ಹೈಡ್ರೋಜನ್ ಉತ್ಪಾದಿಸಿದ್ದಲ್ಲಿ, ಕೈಗಾರಿಕೆ ವಲಯಗಳಲ್ಲಿ ಹಾಗೂ ಇತರೆ ಸಂಸ್ಥೆಗಳಲ್ಲಿ ವಿದ್ಯುತ್ ಸಮಸ್ಯೆಗಳನ್ನು ಬಹುಮಟ್ಟಿಗೆ ನಿವಾರಿಸಬಹುದಾಗಿದ್ದು, ಸಾರ್ವಜನಿಕರಲ್ಲಿ ಈ ಕುರಿತು ಜಾಗೃತಿ ಮೂಡಿಸಲು ಸರ್ಕಾರ ಯಾವ ಕ್ರಮಕೈಗೊಂಡಿದೆ ?

# ಕರ್ನಾಟಕ ರಾಜ್ಯದ ಅರಣ್ಯ ಪ್ರದೇಶಗಳಲ್ಲಿ ವಾಸವಾಗಿರುವ ಜನರ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೬೯೦ (೮೮೧) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಹಲವಾರು ಪ್ರದೇಶಗಳಲ್ಲಿನ ಕಾಡಂಚಿನಲ್ಲಿ ಈಗಲೂ ವಾಸುಸುವ ನಾಗರೀಕರಿಗೆ ಮೂಲಭೂತ ಸೌಲಭ್ಯಗಳು ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಖಾನಾಪೂರದ ಭೀಮಗಡ ಅಭಯಾರಣ್ಯದ ವ್ಯಾಪ್ತಿಯ ಗ್ರಾಮಗಳಾದ ತಳೇವಾಡಿ, ಪಾಸ್ಟೋಲಿ, ಗವಾಳಿ, ಕೃಷ್ಣಾಪುರ ಮತ್ತು ಹೊಳದಾ ಗ್ರಾಮದ ಗ್ರಾಮಸ್ಥರು ಇನ್ನೂ ಕಾಡಲ್ಲಿ ಮತ್ತು ಕಾಡಂಚಿನಲ್ಲಿ ವಾಸವಾಗಿದ್ದು, ಇವರಿಗೆ ಮುಲಭೂತ ಸೌಕರ್ಯಗಳಾದ ಸಾರಿಗೆ ವ್ಯವಸ್ಥೆ, ವಿದ್ಯುತ್ ಸಂಪರ್ಕ, ವೈದ್ಯೋಪಚಾರ ಇಲ್ಲದೇ ತೊಂದರೆ ಅನುಭವಿಸುತ್ತಿದ್ದ ಈ ಗ್ರಾಮದಲ್ಲಿ ತುರ್ತು ಪರಿಸ್ಥಿತಿಯಲ್ಲಿ ವೈದ್ಯೋಪಚಾರ ಬೇಕಾದಲ್ಲಿ ಕನಿಷ್ಠ ೧೦ ಕಿ.ಮೀ. ನಡೆದು ಬಂದು ಅಂಬ್ಯುಲೆನ್ಸ್ ಸೇವೆ ಪಡೆಯಬೇಕಾದ ಪರಿಸ್ಥಿಸಿ ಉಂಟಾಗಿದ್ದು, ಇದು ಸರ್ಕಾರದ ಗಮನದಲ್ಲಿದೆಯೇ ; ಇದ್ದಲ್ಲಿ, ಈ ಕುರಿತು ಕೈಗೊಂಡಿರುವ ಕ್ರಮಗಳೇನು ;

(ಇ) ಈ ರೀತಿ ಕಾಡಿನಲ್ಲಿ ಅಥವಾ ಕಾಡಂಚಿನಲ್ಲಿ ವಾಸಿಸುವ ನಾಗರೀಕರಿಗೆ ಯಾವ ಯೋಜನೆಯಡಿಯಲ್ಲಿ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ ; ಈ ಯೋಜನೆಗಾಗಿ ನಿಗದಿಪಡಿಸಿರುವ ಅನುದಾನವೆಷ್ಟು ;

(ಈ) ಕಾಡಲ್ಲಿ ಮತ್ತು ಕಾಡಂಚಿನಲ್ಲಿ ವಾಸವಿರುವ ಜನರು/ನಾಗರೀಕರಿಗೆ ಪುನರ್ ವಸತಿ ಕಾರ್ಯಕ್ರಮಗಳ ಬಗ್ಗೆ ಅರಿವು ಮೂಡಿಸಲಾಗಿದೆಯೇ ಇದ್ದಲ್ಲಿ ಕಾಡಿನಿಂದ ನಗರಕ್ಕೆ ಸ್ಥಳಾಂತರ ಹೊಂದಲು ಎಷ್ಟು ಗ್ರಾಮಸ್ಥರು ಒಪ್ಪಿಕೊಂಡಿದ್ದಾರೆ. ಸ್ಥಳಾಂತರ ಹೊಂದಲು ಒಪ್ಪಿಕೊಂಡಿರುವ ಗ್ರಾಮಸ್ಥರಿಗೆ ಯಾವ ಸೌಲಭ್ಯಗಳನ್ನು ಸರ್ಕಾರದಿಂದ ಕಲ್ಪಿಸಲಾಗುವುದು ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ಕಡ್ಡಾಯ ಮತ್ತು ಉಚಿತ ಶಿಕ್ಷಣದ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೬೯೧ (೮೮೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಡ್ಡಾಯ ಮತ್ತು ಉಚಿತ ಪ್ರಾಥಮಿಕ ಶಿಕ್ಷಣ ಸಾಂವಿಧಾನಿಕ ಬಾಧ್ಯತೆಗಳನ್ನು ಪೂರೈಸಲು ಸರ್ಕಾರವು ಯೋಜಿಸಿರುವ ಯೋಜನೆ ಕುರಿತು ಮಾಹಿತಿ ನೀಡುವುದು ;

(ಆ) ಮಧ್ಯಾಹ್ನದ ಊಟ, ಆಪರೇಷನ್ ಬ್ಲಾಕ್‌ಬೋರ್ಡ್ ಮತ್ತು ಇತರೆ ಶೈಕ್ಷಣಿಕ ಯೋಜನೆಗಳಿಗೆ ಒದಗಿಸಲಾದ ಅನುದಾನಗಳಾವುವು: (ಜಿಲ್ಲಾವಾರು ಮತ್ತು ಯೋಜನೆವಾರು ವಿವರ ನೀಡುವುದು)

(ಇ) ಪ್ರಾಥಮಿಕ ಶಿಕ್ಷಣವನ್ನು ಒದಗಿಸುವಲ್ಲಿ ಇದುವರೆಗೆ ಸಾಧಿಸಿದ ಯಶಸ್ಸು, ವಿಶೇಷವಾಗಿ ಬಡತನ ರೇಖೆಗಿಂತ ಕೆಳಗಿರುವ ನಾಗರೀಕರಿಗೆ ಮತ್ತು ಈ ಉದ್ದೇಶಕ್ಕಾಗಿ ಕೇಂದ್ರ ಸರ್ಕಾರದಿಂದ ಪಡೆದ ಅನುದಾನ ಎಷ್ಟು ? (ಮಾಹಿತಿ ನೀಡುವುದು)

## ಉನ್ನತ ಶಿಕ್ಷಣದಲ್ಲಿ ಒಟ್ಟು ದಾಖಲಾತಿ ಅನುಪಾತದ (**Gross Enrollment Ratio**) ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೬೧೨ (೮೮೩) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉನ್ನತ ಶಿಕ್ಷಣದಲ್ಲಿ ಒಟ್ಟು ದಾಖಲಾತಿ ಅನುಪಾತವನ್ನು (ಜಿಇಆರ್) ನಿರ್ಣಯಿಸಲು ಸರ್ಕಾರವು ಯಾವುದಾದರೂ ಅಧ್ಯಯನವನ್ನು ನಡೆಸಿದೆಯೇ ; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ೧೮-೨೩ ವರ್ಷ ವಯಸ್ಸಿನ ಯುವ ಜನಸಂಖ್ಯೆಯ ಒಂದು ಭಾಗ ಮಾತ್ರ ಉನ್ನತ ಶಿಕ್ಷಣ ಸಂಸ್ಥೆಗಳಿಗೆ ದಾಖಲಾತಿ ಪಡೆದಿದೆಯೇ ; ಹಾಗಿದ್ದಲ್ಲಿ, ವರ್ಷವಾರು ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು ;

(ಇ) ಎಸ್.ಸಿ/ಎಸ್.ಟಿ/ಓಬಿಸಿ ವಿದ್ಯಾರ್ಥಿಗಳ ಜಿಇಆರ್ ಸರಾಸರಿ ರಾಜ್ಯ ಜಿಇಆರ್‌ಗಿಂತ ತೀರ ಕಡಿಮೆ ಇದೆಯೇ ಹಾಗಿದ್ದಲ್ಲಿ, ಅದಕ್ಕೆ ಕಾರಣಗಳು ಏನು ? (ವಿವರ ನೀಡುವುದು)

## ಬೆಳಗಾವಿ, ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿನ 'ಡಿ' ದರ್ಜೆ ನೌಕರರ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೬೧೩ (೭೩೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ, ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಲ್ಲಿ ಮಂಜೂರಾದ ಒಟ್ಟು "ಡಿ" ದರ್ಜೆ ನೌಕರರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಮಂಜೂರಾದ ಒಟ್ಟು ಹುದ್ದೆಗಳ ಪೈಕಿ ಈಗಾಗಲೇ ಭರ್ತಿ ಮಾಡಲಾದ ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡ ಕ್ರಮಗಳೇನು ; ಮತ್ತು ಯಾವ ಕಾಲಮಿತಿಯೊಳಗೆ ಖಾಲಿಯಿರುವ "ಡಿ" ದರ್ಜೆ ನೌಕರರನ್ನು ಭರ್ತಿ ಮಾಡಿಕೊಳ್ಳಲಾಗುವುದು ತಿಳಿಸುವುದು ;

(ಇ) ಪ್ರಸ್ತುತ ಇಲಾಖೆಯಲ್ಲಿ "ಡಿ" ದರ್ಜೆ ನೌಕರರಿಲ್ಲದೆ ಇಲಾಖೆಗಳ ದೈನಂದಿನ ಕೆಲಸ ಕಾರ್ಯಗಳನ್ನು ನಡೆಸುವುದು ಕಷ್ಟಕರವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿನ ಶೌಚಾಲಯಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೬೯೪ (೭೩೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿನ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿರುವ ಒಟ್ಟು ಶೌಚಾಲಯಗಳ ಸಂಖ್ಯೆ ಎಷ್ಟು, ಪ್ರಸಕ್ತ ಸಾಲಿನಲ್ಲಿ ಓದುತ್ತಿರುವ ಒಟ್ಟು ಬಾಲಕರ ಮತ್ತು

ಬಾಲಕಿಯರ ಸಂಖ್ಯೆ ಎಷ್ಟು ; ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಉಪಯೋಗಕ್ಕೆ ಯೋಗ್ಯವಾಗಿರುವ ಮತ್ತು ದುರಸ್ತಿಯಲ್ಲಿರುವ ಶೌಚಾಲಯಗಳ ಸಂಖ್ಯೆ ಎಷ್ಟು ; (ಶಾಲಾವಾರು ಮಾಹಿತಿ ನೀಡುವುದು)

(ಆ) ಉಪಯೋಗಕ್ಕೆ ಯೋಗ್ಯವಾಗಿರುವ ಶೌಚಾಲಯಗಳ ಸ್ವಚ್ಛತೆಗಾಗಿ ಶಾಲೆಗಳಿಗೆ ಅನುದಾನ ನೀಡಲಾಗುತ್ತಿದೆಯೇ ; ನೀಡುತ್ತಿದ್ದಲ್ಲಿ, ಪ್ರತಿ ಶಾಲೆಗೆ ಪ್ರತಿ ತಿಂಗಳು ಎಷ್ಟು ಹಣ ಸಂದಾಯ ಮಾಡಲಾಗುತ್ತಿದೆ ; ಮಾಡದಿದ್ದಲ್ಲಿ, ಯಾವ ಕಾರಣಕ್ಕಾಗಿ ಸಂದಾಯ ಮಾಡುತ್ತಿಲ್ಲ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿನ ದುರಸ್ತಿಯಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶೌಚಾಲಯಗಳನ್ನು ಮಕ್ಕಳ ಉಪಯೋಗಕ್ಕೆ ಯೋಗ್ಯವಾಗುವಂತೆ ಮರು ನಿರ್ಮಾಣ ಮಾಡಲು ಅಥವಾ ದುರಸ್ತಿ ಕಾರ್ಯವನ್ನು ಕೈಗೊಳ್ಳಲು ಸರ್ಕಾರವು ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಂಡು ಪೂರ್ಣಗೊಳಿಸುವುದು ?

## ರಾಜ್ಯದಲ್ಲಿನ ರೈತರ ಹೊಲ/ಜಮೀನುಗಳಲ್ಲಿನ ವಿದ್ಯುತ್ ಕಂಬಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೬೯೫ (೭೩೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ರೈತರ ಹೊಲ/ಗದ್ದೆಗಳ ಮಧ್ಯದಲ್ಲಿ ವಿದ್ಯುತ್ ಕಂಬಗಳನ್ನು ಅಳವಡಿಸಲು ಇರುವ ಮಾನದಂಡಗಳೇನು ;

(ಆ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿನ ಹೊಲ/ಗದ್ದೆ ಮಧ್ಯದಲ್ಲಿ ವಿದ್ಯುತ್ ಕಂಬಗಳನ್ನು ಅಳವಡಿಸಿದ ಹಿನ್ನೆಲೆಯಲ್ಲಿ ಎಷ್ಟು ಸಾವು-ನೋವು, ಬೆಳೆ ಹಾನಿ ಆಗಿವೆ ; ಹಾನಿಗಳಿಗೆ ಪರಿಹಾರ ನೀಡಲಾಗಿದೆಯೇ ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ವಿದ್ಯುತ್ ಕಂಬಗಳನ್ನು ಹೊಲಗದ್ದೆ ಮಧ್ಯದಲ್ಲಿ ಆಳವಡಿಸುವ ಸಂದರ್ಭದಲ್ಲಿ ಮಾಲೀಕರ ಅನುಮತಿ ಪಡೆಯಲಾಗುತ್ತದೆಯೇ: ಪಡೆದಿದ್ದರೆ ಎಷ್ಟು ರೈತರ ಅನುಮತಿ ಪಡೆಯಲಾಗಿದೆ ; ಒಂದು ವೇಳೆ ರೈತರು ನಿರಾಕರಿಸಿದರೆ ಯಾವ ಮಾರ್ಗ ಅನುಸರಿಸಲಾಗುವುದು ;

(ಈ) ಸದರಿ ಜಿಲ್ಲೆಗಳಲ್ಲಿನ ರೈತರ ಹೊಲಗದ್ದೆ ಮಧ್ಯದಲ್ಲಿ ಟಿಸಿ ಅಳವಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗೂ ಎಷ್ಟು ರೈತರು ತಮ್ಮ ಹೊಲ/ಗದ್ದೆ ಮಧ್ಯದಲ್ಲಿರುವ ಟಿ.ಸಿಗಳನ್ನು ಸ್ಥಳಾಂತರಿಸಲು ಮನವಿ ಮಾಡಿದ್ದಾರೆ ; ಇವರುಗಳ ಮನವಿ ಪರಿಗಣಿಸಿ ಕ್ರಮ ಜರುಗಿಸಲಾಗಿದೆಯೇ ; ಎಷ್ಟು ಟಿ.ಸಿ.ಗಳನ್ನು ಸ್ಥಳಾಂತರಿಸಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಉ) ಟಿ.ಸಿ.ಗಳನ್ನು ಸ್ಥಳಾಂತರಿಸಲು ಹಲವು ಬಾರಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಮಾಡಿದರೂ ಸಹ ಅಧಿಕಾರಿಗಳು ಇಲ್ಲಿಯವರೆಗೂ ಸ್ಥಳಾಂತರಿಸದೇ ನಿರ್ಲಕ್ಷ್ಯ ತೋರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

# ರಾಜ್ಯದಲ್ಲಿ ಶಿಕ್ಷಕರ ಕೊರತೆ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೬೯೬ (೭೩೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಶಾಲೆಗಳ ಅಭಿವೃದ್ಧಿ, ಸಬಲೀಕರಣಕ್ಕಾಗಿ ಈ ಹಿಂದೆ ಸರ್ಕಾರ ಸಮಿತಿ ರಚಿಸಿದ್ದು, ನಿಜವೇ, ನಿಜವಿದ್ದಲ್ಲಿ, ಸದರಿ ಸಮಿತಿಯು ತನ್ನ ವರದಿ ನೀಡಿದೆಯೇ ; ಯಾವ ಕಾರಣಕ್ಕಾಗಿ ಸಮಿತಿಯನ್ನು ರಚಿಸಲಾಗಿದೆ ; ಪ್ರಸ್ತುತ ಸದರಿ ಸಮಿತಿಯು ಕಾರ್ಯನಿರ್ವಹಿಸುತ್ತಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿನ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮಗಳೇನು ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಎಷ್ಟು ಶಾಲೆಗಳಲ್ಲಿ ಎಷ್ಟು ಶಿಕ್ಷಕರ ಕೊರತೆ ಇದೆ ; (ವಿಷಯವಾರು ಮತ್ತು ವಲಯವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಪ್ರತಿ ವರ್ಷ ಸರ್ಕಾರಿ ಶಾಲೆಗಳಲ್ಲಿ ಪ್ರವೇಶ ಪಡೆಯುವವರ ಸಂಖ್ಯೆ ಕುಸಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಕೈಗೊಂಡ ಕ್ರಮಗಳೇನು ;

(ಉ) ರಾಜ್ಯದಲ್ಲಿ ಸುಮಾರು ಶಾಲೆಗಳಲ್ಲಿ ಶೂನ್ಯ ಪ್ರವೇಶಾತಿ ಇರುವುದು ನಿಜವೇ ? (ಶಾಲೆವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

# ಸರ್ಕಾರಿ ವಿಶ್ವವಿದ್ಯಾಲಯಗಳ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :-**

೬೯೭ (೭೪೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಮಂಜೂರಾಗಿರುವ ಬೋಧಕ/ ಬೋಧಕೇತರ ಹುದ್ದೆಗಳೆಷ್ಟು ; (ವಿಷಯವಾರು, ವಿಭಾಗವಾರು ಮಾಹಿತಿ ನೀಡುವುದು)

(ಆ) ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಹಲವಾರು ವರ್ಷಗಳಿಂದ ಖಾಲಿಯಿರುವ ಹುದ್ದೆಗಳನ್ನು ತುಂಬಲು ಅನುಮತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅನುಮತಿ ನೀಡದಿರಲು ಕಾರಣಗಳೇನು ;

(ಇ) ವಿಶ್ವವಿದ್ಯಾಲಯಗಳಲ್ಲಿ ಖಾಲಿಯಿರುವ ಖಾಯಂ ಬೋಧಕ/ ಬೋಧಕೇತರ ಹುದ್ದೆಗಳನ್ನು ತುಂಬದಿರುವುದರಿಂದ ಆಡಳಿತ ಮತ್ತು ವಿದ್ಯಾರ್ಥಿಗಳ ಶಿಕ್ಷಣಕ್ಕೆ ತೊಂದರೆಯಾಗುತ್ತಿದ್ದರೂ, ಇದುವರೆವಿಗೆ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅನುಮತಿ ನೀಡದಿರಲು ಕಾರಣವೇನು ;

(ಈ) ಯಾವ ಕಾಲಮಿತಿಯಲ್ಲಿ ಖಾಲಿ ಹುದ್ದೆಗಳ ಭರ್ತಿಗೆ ಕ್ರಮ ಕೈಗೊಳ್ಳಲಾಗುವುದು ?

# ಥಾಮಸ್ ವರದಿಯನ್ನು ಯಥಾವತ್ತಾಗಿ ಜಾರಿಗೊಳಿಸುವ ಕುರಿತು

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :-**

೬೯೮ (೭೪೭) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಅನುದಾನಿತ ಐ.ಟಿ.ಐ. ತರಬೇತಿ ಕೇಂದ್ರಗಳ ನೌಕರರಿಗೆ ಶ್ರೀ ಥಾಮಸ್ ನೇತೃತ್ವದ ವರದಿಯನ್ನು ಯಾವಾಗ ಅನುಷ್ಠಾನಗೊಳಿಸಲಾಗಿದೆ ; (ವಿವರ ಮತ್ತ ಆದೇಶದ ಪ್ರತಿ ನೀಡುವುದು)

(ಆ) ಸದರಿಯವರಿಗೆ ಥಾಮಸ್ ನೇತೃತ್ವದ ವರದಿಯಂತೆ ಇದುವರೆವಿಗೆ ಇತರೆ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ನೀಡಿರುವ ಎಲ್ಲಾ ಸೌಲಭ್ಯಗಳನ್ನು ನೀಡದಿರಲು ಕಾರಣಗಳೇನು ; (ವಿವರ ನೀಡುವುದು)

(ಇ) ಸದರಿ ನೌಕರರಿಗೆ ಥಾಮಸ್ ವರದಿಯ ಶಿಫಾರಸ್ಸಿನಂತೆ ಸೇವಾ ನಿಯಮಗಳನ್ನು ರೂಪಿಸದಿರುವುದರಿಂದ ಸಾವಿರಾರು ನೌಕರರಿಗೆ ಯಾವುದೇ ಸೌಲಭ್ಯವಿಲ್ಲದೆ ಅನ್ಯಾಯವಾಗಿದ್ದು, ಯಾವ ಕಾಲಮಿತಿಯಲ್ಲಿ ಸೇವಾ ನಿಯಮಗಳನ್ನು ರಚಿಸಿ ಎಲ್ಲಾ ಸೌಲಭ್ಯಗಳನ್ನು ನೀಡಲಾಗುತ್ತದೆ ? (ವಿವರ ನೀಡುವುದು)

## ೧೯೯೫ ರಿಂದ ೨೦೦೫ರ ಅವಧಿಯ ಕನ್ನಡ ಮಾಧ್ಯಮ ಶಾಲೆಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಕುರಿತು

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೬೯ (೭೪೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೧೯೯೫ರಿಂದ ೨೦೦೫ರ ಅವಧಿಯಲ್ಲಿ ಪ್ರಾರಂಭವಾಗಿ ಸತತವಾಗಿ ನಡೆಯುತ್ತಿರುವ ಅನುದಾನರಹಿತ ಕನ್ನಡ ಮಾಧ್ಯಮದ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಶಾಲಾ ಕಾಲೇಜುಗಳೆಷ್ಟು ; (ಜಿಲ್ಲಾವಾರು ವಿಳಾಸದೊಡನೆ ವಿವರ ನೀಡುವುದು)

(ಆ) ಈ ಶಾಲಾ, ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರ್ಹ ಬೋಧಕ/ಬೋಧಕೇತರರ ಸಂಖ್ಯೆಯೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಸವರಿ ಶಾಲಾ-ಕಾಲೇಜುಗಳನ್ನು ವೇತನಾನುದಾನಕ್ಕೊಳಪಡಿಸಲು ಬೇಕಾಗುವ ವೆಚ್ಚವೆಷ್ಟು; (ವಿವರ ನೀಡುವುದು)

(ಈ) ಸದರಿ ಶಾಲಾ-ಕಾಲೇಜುಗಳನ್ನು ಯಾವ ಕಾಲಮಿತಿಯಲ್ಲಿ ವೇತನಾನುದಾನಕ್ಕೆ ಒಳಪಡಿಸಲಾಗುತ್ತದೆ ?

## ವಿದ್ಯುತ್ ಇಲಾಖೆಯಲ್ಲಿ LT ತಂತಿಗಳು ಹರಿದು ಬಿದ್ದು ರಾಜ್ಯದಲ್ಲಿ ಆಗುತ್ತಿರುವ ಪ್ರಾಣ ಹಾನಿಗಳನ್ನು ತಪ್ಪಿಸಲು ತಂತಿಗಳನ್ನು ಬದಲಾಯಿಸುವ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೦೦ (೮೫೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿದ್ಯುತ್ ಇಲಾಖೆಯಲ್ಲಿ ಹೆಚ್ಚಿನ ಅಪಘಾತಗಳು ಪ್ರಾಣ ಹಾನಿಗಳು LT ಲೈನಿನ ತಂತಿಗಳು ಮೇಲಿಂದ ಮೇಲೆ ಹರಿದು ಬೀಳುವುದರಿಂದ ತೊಂದರೆ ಆಗುತ್ತಿರುವುದು ನಿಜವೇ ; ರಾಜ್ಯದಲ್ಲಿ ಕಳೆದ ೫ ವರ್ಷಗಳಲ್ಲಿ ಎಲ್.ಟಿ. ಲೈನಿನ ತಂತಿಗಳು ಹರಿದು ಬಿದ್ದು ಆಗಿರುವ ಪ್ರಾಣ ಹಾನಿಗಳ ಸಂಖ್ಯೆ ಎಷ್ಟು ;

(ಆ) ಎಲ್.ಟಿ. ಲೈನ್‌ಗಳ ತಂತಿ (ವಿದ್ಯುತ್‌ವಾಹಕ/ಕಂಡಕ್ಟರ್‌ಗಳು) ಗಳ ಆಯುಷ್ಯವು ಸಾಮಾನ್ಯವಾಗಿ ೨೫ ವರ್ಷಗಳ ಎನ್ನುವ ಮಾಹಿತಿ ನಿಜವೇ ;

(ಇ) ಹಳೆಯ ಕಂಡಕ್ಟರ್‌ಗಳು (LT) ಕೋರೋಜನ್ ನಿಂದಾಗಿ ಸವೆದಿದ್ದು, ಬಹಳಷ್ಟು ಕಡೆ ಅವುಗಳನ್ನು ಕಳೆದ ೪೦ ವರ್ಷದಿಂದ ಬದಲಾಯಿಸಲಾರದ ಕಾರಣ, ಅಪಘಾತಗಳು ಹೆಚ್ಚಾಗುತ್ತಿದ್ದು, LT ತಂತಿಗಳನ್ನು ಬದಲಾಯಿಸಬೇಕೆನ್ನುವ ಕೂಗು ಸಾರ್ವಜನಿಕರಿಂದ ಬರುತ್ತಿದ್ದು, ಅವುಗಳನ್ನು ಬದಲಾಯಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬಿಪಿಎಲ್ ಪಡಿತರ ಚೀಟಿಗಳನ್ನು ರದ್ದುಪಡಿಸಿರುವ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೦೧ (೮೩೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಬಿಪಿಎಲ್ ಪಡಿತರ ಚೀಟಿಗಳನ್ನು ಇದುವರೆಗೆ ವಿತರಿಸಲಾಗಿದೆ ಹಾಗೂ ಬಿಪಿಎಲ್ ಪಡಿತರ ಚೀಟಿ ವಿತರಣೆಗೆ ಅನುಸರಿಸುತ್ತಿರುವ ನಿಯಮ ಹಾಗೂ ಮಾನದಂಡಗಳೇನು ;

(ಆ) ಪ್ರಸ್ತುತ ದಿನದವರೆಗೆ ಒಟ್ಟು ಎಷ್ಟು ಬಿಪಿಎಲ್ ಪಡಿತರ ಚೀಟಿಗಳನ್ನು ರದ್ದುಪಡಿಸಲಾಗಿದೆ ; ಅದಕ್ಕೆ ಕಾರಣಗಳೇನು ಸದರಿ ರದ್ದತಿಗೆ ಅನುಸರಿಸಿರುವ ಮಾನದಂಡಗಳೇನು ;

(ಇ) ಬಿಪಿಎಲ್ ಕಾರ್ಡ್‌ನಿಂದ ಎಪಿಎಲ್ ಕಾರ್ಡ್‌ಗೆ ಪಡಿತರ ಕಾರ್ಡ್‌ಗಳನ್ನು ಪರಿವರ್ತಿಸಲಾಗಿದೆಯೇ ಪರಿವರ್ತಿಸಿದ್ದಲ್ಲಿ ಅದಕ್ಕೆ ಕಾರಣಗಳೇನು ; ಮತ್ತು ಅನುಸರಿಸಿರುವ ಮಾನದಂಡಗಳೇನು ;

(ಈ) ಈ ರೀತಿ ಬಿಪಿಎಲ್ ಪಡಿತರ ಚೀಟಿಗಳನ್ನು ಏಕಾಏಕಿ ರದ್ದುಪಡಿಸಿರುವುದರಿಂದ ಮತ್ತು ಬಿಪಿಎಲ್ ಕಾರ್ಡ್ ನಿಂದ ಎಪಿಎಲ್ ಕಾರ್ಡ್ ಪರಿವರ್ತಿಸಲಾಗಿರುವುದರಿಂದ ಹಲವಾರು ಕಾರ್ಡ್ ದಾರರು ಅರ್ಹರಾಗಿದ್ದರೂ ಕೂಡ ಸರ್ಕಾರ ಹಲವಾರು ಯೋಜನೆಗಳು ಹಾಗು ಸೇವೆಗಳಿಂದ ವಂಚಿತರಾಗುತ್ತಿದ್ದು ಇದರಿಂದಾಗಿ ಸಾಕಷ್ಟು ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಈ ಕಾರ್ಡ್ ದಾರರಿಗೆ ಆಗುತ್ತಿರುವ ತೊಂದರೆಗಳನ್ನು ತಪ್ಪಿಸಲು ಸರ್ಕಾರ ಏನು ಕ್ರಮವಹಿಸಿದೆ ?

## ಅರ್ಹ ಅರಣ್ಯ ಒತ್ತುವರಿದಾರರ ಪ್ರಕರಣಗಳನ್ನು ಸಕ್ರಮಗೊಳಿಸುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೦೨ (೮೩೮) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅರಣ್ಯ ಒತ್ತುವರಿಯನ್ನು ಕೆಲವು ಷರತ್ತುಗಳನ್ನು ವಿಧಿಸಿ, ಸಕ್ರಮಗೊಳಿಸಲು ೧೯೯೬ರಲ್ಲಿ ಕೇಂದ್ರ ಸರ್ಕಾರ ಅನುಮತಿ ನೀಡಿದ ನಂತರ ಆ ಕುರಿತು ಎಷ್ಟು ಪ್ರಕರಣಗಳನ್ನು ಸಕ್ರಮಗೊಳಿಸಲು ಅನುಮತಿ ಕೋರಿ ಸಲ್ಲಿಸಲಾಗಿತ್ತು ;

(ಆ) ಸಕ್ರಮಗೊಳಿಸಲು ಅನುಮತಿ ಕೋರಿ ಪ್ರಸ್ತಾವನೆಗಳನ್ನು ಸಲ್ಲಿಸುವಾಗ ಅರ್ಹ ಒತ್ತುವರಿದಾರರ ಎಷ್ಟು ಪ್ರಕರಣಗಳು ಕೈಬಿಟ್ಟುಹೋಗಿದ್ದವು ;

(ಇ) ಸಕ್ರಮಗೊಳಿಸಲು ಅನುಮತಿ ಕೋರಿ ಪ್ರಸ್ತಾವನೆಗಳನ್ನು ಸಲ್ಲಿಸುವಾಗ ಅರ್ಹ ಒತ್ತುವರಿದಾರರ ಪ್ರಕರಣಗಳು ಕೈಬಿಟ್ಟುಹೋಗಿದ್ದಲ್ಲಿ ಅವುಗಳ ಕುರಿತು ಸರ್ಕಾರ ಆ ನಂತರದಲ್ಲಿ ಏನು ಕ್ರಮ ಕೈಗೊಂಡಿದೆ ;

(ಈ) ರಾಜ್ಯದಲ್ಲಿ ಎಲ್ಲಾ ಅರ್ಹ ಒತ್ತುವರಿದಾರರ ಪ್ರಕರಣಗಳನ್ನು ಈಗಾಗಲೇ ಸಕ್ರಮಗೊಳಿಸಲಾಗಿದೆಯೇ ;

(ಉ) ಎಲ್ಲಾ ಅರ್ಹ ಒತ್ತುವರಿದಾರರ ಪ್ರಕರಣಗಳನ್ನು ಇದುವರೆಗೆ ಸಕ್ರಮಗೊಳಿಸದಿದ್ದಲ್ಲಿ ಅದಕ್ಕೆ ಕಾರಣಗಳೇನು: ಯಾವ ಕಾಲಮಿತಿಯಲ್ಲಿ ಸಕ್ರಮಗೊಳಿಸಲಾಗುವುದು ?

## ಮಂಜೂರಾದ ಅರಣ್ಯ ಭೂಮಿಯನ್ನು ಇನ್ನೂ "Denotification" ಮಾಡದೇ ಹಾಗೇ ಇರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೦೩ (೮೩೯) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅರಣ್ಯ (ಸಂರಕ್ಷಣೆ) ಕಾಯ್ದೆ ೧೯೮೦ ಜಾರಿಗೆ ಬರುವ ಪೂರ್ವದಲ್ಲಿ ರಾಜ್ಯ ಸರ್ಕಾರದ ಸಕ್ಷಮ ಪ್ರಾಧಿಕಾರಗಳು ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಭೂ ಮಂಜೂರಾತಿ ಕಾಯ್ದೆ ಮತ್ತು ನಿಯಮಗಳು ಹಾಗೂ ಇತರೆ ಕಾನೂನಾತ್ಮಕ ನಿಯಮಗಳಡಿಯಲ್ಲಿ ಅನೇಕ ಪ್ರಕರಣಗಳಲ್ಲಿ ಅರಣ್ಯ ಭೂಮಿಯನ್ನು ಮಂಜೂರು ಮಾಡಿವೆಯೇ ;

(ಆ) ಮಂಜೂರು ಮಾಡಿದ್ದಲ್ಲಿ, ಆ ವೇಳೆಯಲ್ಲಿ ಕರ್ನಾಟಕದಲ್ಲಿ ಚಾಲ್ತಿಯಲ್ಲಿದ್ದಂತಹ ಅರಣ್ಯ ಕಾಯ್ದೆಗಳನ್ವಯ ಇಂತಹ ಮಂಜೂರಾದ ಎಲ್ಲಾ ಅರಣ್ಯ ಭೂಮಿಯನ್ನು "Denotification" ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಇಂದಿಗೂ ಇಂತಹ ಮಂಜೂರಾತಿಗಳು ಕರ್ನಾಟಕ ಅರಣ್ಯ ಇಲಾಖೆಯ ದಾಖಲೆಗಳಲ್ಲಿ "ಅರಣ್ಯ" ಎಂಬುದಾಗಿ ಮುಂದುವರೆಸಿಕೊಂಡು ಬರಲಾಗುತ್ತಿದ್ದು, ಈ ಸಮಸ್ಯೆ ಪರಿಹರಿಸಲು ಸರ್ಕಾರ ಇದುವರೆಗೆ ಏನು ಕ್ರಮ ಕೈಗೊಂಡಿದೆ ;

(ಈ) ಸದರಿ ಈ ಎಲ್ಲಾ ಅರ್ಹ ಅರಣ್ಯ ಭೂ ಮಂಜೂರಾತಿ ಪ್ರಕರಣಗಳಲ್ಲಿ ಸರ್ಕಾರದ ನಿಲುವೇನು ?

## ಅರ್ಹ ಅರಣ್ಯ ಒತ್ತುವರಿದಾರರ ಪ್ರಕರಣಗಳನ್ನು ಪರಿಹರಿಸಲು ಕೂಡಲೇ ಜಂಟಿ ಮರು ಸರ್ವೆ ಮಾಡುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೭೦೪ (೮೪೦) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಅರಣ್ಯ ಒತ್ತುವರಿ ಪ್ರಕರಣಗಳಲ್ಲಿ ನಿಗದಿತ ಅವಧಿಯಲ್ಲಿ ಅರಣ್ಯ ಇಲಾಖೆಯು ಕಂದಾಯ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿ ಜಂಟಿ ಸರ್ವೆ ಮಾಡಿ ಪರಿಹಾರ ಹುಡುಕದ ಕಾರಣದಿಂದಾಗಿ ಹಲವಾರು ಅರ್ಹ ಅರಣ್ಯ ಒತ್ತುವರಿದಾರರಿಗೆ ಇಂದಿಗೂ ತೊಂದರೆಯಾಗುತ್ತಾ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜ್ಯದಲ್ಲಿ ಅರಣ್ಯ ಒತ್ತುವರಿ ಸಮಸ್ಯೆ ಪರಿಹರಿಸುವ ಸಲುವಾಗಿ ಅರಣ್ಯ ಇಲಾಖೆಯು ಕಂದಾಯ ಇಲಾಖೆಯೊಂದಿಗೆ ಸೇರಿ ಈಗಾಗಲೇ ಜಂಟಿ ಸರ್ವೆ ನಡೆಸಿದೆಯೇ ;

(ಇ) ನಡೆಸಿದ್ದಲ್ಲಿ ಇಂದಿಗೂ ಅರ್ಹ ಅರಣ್ಯ ಒತ್ತುವರಿದಾರರ ಪ್ರಕರಣಗಳನ್ನು ಸಕ್ರಮಗೊಳಿಸದೇ ಇರಲು ಕಾರಣಗಳೇನು ;

(ಈ) ಅರ್ಹ ಅರಣ್ಯ ಒತ್ತುವರಿದಾರರ ಪ್ರಕರಣಗಳನ್ನು ಪರಿಹರಿಸುವ ಸಲುವಾಗಿ ಈ ಕೂಡಲೇ ಅರಣ್ಯ ಇಲಾಖೆ ಮತ್ತು ಕಂದಾಯ ಇಲಾಖೆಗಳನ್ನೊಳಗೊಂಡ ಜಂಟಿ ಮರು ಸರ್ವೆ ಮಾಡಿ, ಅರ್ಹ ಅರಣ್ಯ ಒತ್ತುವರಿದಾರರಿಗೆ ನ್ಯಾಯ ದೊರಕಿಸಿಕೊಡಲು ಸರ್ಕಾರ ಕೂಡಲೇ ಕ್ರಮ ವಹಿಸುವುದೇ ?

## ಪಂಚಕರ್ಮ ಘಟಕಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವೈದ್ಯರು ಹಾಗೂ ಶುಶ್ರೂಕರನ್ನು ಖಾಯಂಗೊಳಿಸುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೭೦೫ (೮೪೧) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎನ್.ಎಚ್.ಎಮ್ ಆಯುಷ್ ವಿಭಾಗದಲ್ಲಿ ಖಾಯಂ ಹಾಗೂ ಗುತ್ತಿಗೆ ಆಧಾರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಅಧಿಕಾರಿ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು ಮತ್ತು ಅವರಿಗೆ ನೀಡುತ್ತಿರುವ ವೇತನ ಮತ್ತು ಭತ್ಯೆಗಳು ಎಷ್ಟು ; (ವಿವರ ನೀಡುವುದು)

(ಆ) ಕಳೆದ ಆರ್ಥಿಕ ವರ್ಷದಲ್ಲಿ ಎನ್.ಎಚ್.ಎಮ್. ಆಯುಷ್ ವಿಭಾಗಕ್ಕೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ದೊರೆತಿರುವ ಅನುದಾನ ಎಷ್ಟು ; (ವಿವರ ನೀಡುವುದು)

(ಇ) ಎನ್.ಎಚ್.ಎಮ್ ಆಯುಷ್ ವಿಭಾಗದಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಕಾರ್ಯಕ್ರಮ ಅಧಿಕಾರಿಗಳ ನೇಮಕಾತಿ ಮಾನದಂಡಗಳು, ಅವರು ನಿರ್ವಹಿಸುತ್ತಿರುವ ಕರ್ತವ್ಯಗಳು ಹಾಗೂ ಅವರಿಗೆ ನೀಡುತ್ತಿರುವ ವೇತನ ಮತ್ತು ಭತ್ಯೆಗಳ ವಿವರಗಳೇನು ;

(ಈ) ಆಯುಷ್ ಇಲಾಖೆಯಲ್ಲಿ ಖಾಯಂ ವೈದ್ಯರು ಹಾಗೂ ಶುಶ್ರೂಕರು ಇರುವಂತೆ, ೧೩ ಪಂಚಕರ್ಮ ಘಟಕಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸ್ನಾತಕೋತ್ತರ ವೈದ್ಯರು ಹಾಗೂ ಶುಶ್ರೂಕರನ್ನು ಖಾಯಂಗೊಳಿಸಲು ಸರ್ಕಾರ ಕ್ರಮ ವಹಿಸಿದೆಯೇ ;

(ಉ) ಪಂಚಕರ್ಮ ಘಟಕಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ನಾತಕೋತ್ತರ ವೈದ್ಯರು ಹಾಗೂ ಶುಶ್ರೂಕರುಗಳು ಸುಮಾರು ೧೦-೧೫ ವರ್ಷಗಳಿಂದ ಕಡಿಮೆ ವೇತನದಲ್ಲಿ ಕಾರ್ಯನಿರ್ವಹಿಸುತ್ತಿದ್ದು ಮಾನವೀಯತೆ ಮತ್ತು ಸಾಮಾಜಿಕ ಭದ್ರತೆಯ ದೃಷ್ಟಿಯಿಂದ ಇವರುಗಳನ್ನು ಖಾಯಂಗೊಳಿಸಲು ಸರ್ಕಾರ ವಹಿಸುವುದೇ ?

## ಡಾ॥ ಕಸ್ತೂರಿ ರಂಗನ್ ವರದಿ ಜಾರಿ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೦೬ (೮೧೩) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪಶ್ಚಿಮ ಘಟ್ಟಗಳ ರಕ್ಷಣೆಗೆ ಡಾ:ಕಸ್ತೂರಿ ರಂಗನ್ ನೇತೃತ್ವದ ಸಮಿತಿಯ ವರದಿಯನ್ನು ಅನುಷ್ಠಾನಗೊಳಿಸಲು ಸಾರ್ವಜನಿಕರ ವಿರೋಧ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ವರದಿ ಅನುಷ್ಠಾನದ ಕುರಿತು ಸರ್ಕಾರದ ನಿಲುವೇನು ;

(ಇ) ಶ್ರೀ ಮಾಧವ ಗಾಡ್ಗೀಳ್ ವರದಿ ಹಾಗೂ ಡಾ:ಕಸ್ತೂರಿ ರಂಗನ್ ವರದಿಯಲ್ಲಿ ಪಶ್ಚಿಮ ಘಟ್ಟ ಸಂರಕ್ಷಣೆಗೆ ಸಂಬಂಧಿಸಿದಂತೆ ಯಾವ ಯಾವ ಅಂಶಗಳಿವೆ ; ಈ ಎರಡೂ ವರದಿಗಳಲ್ಲಿರುವ ವ್ಯತ್ಯಾಸಗಳೇನು ;

(ಈ) ಈ ವರದಿಯನ್ನು ಅನುಷ್ಠಾನಗೊಳಿಸುವುದರಿಂದ ಸಾರ್ವಜನಿಕರಿಗೆ ಅನ್ಯಾಯವಾಗದಂತೆ ಸರ್ಕಾರ ಏನು ಕ್ರಮಕೈಗೊಳ್ಳಲಿದೆ ?

## ಚಿಕ್ಕಮಗಳೂರು ನಗರದಲ್ಲಿರುವ ಆಯುಷ್ ಆಸ್ಪತ್ರೆಗೆ ವೈದ್ಯಕೀಯ ಸಿಬ್ಬಂದಿ ಕಲ್ಪಿಸುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೦೭ (೮೧೪) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿಕ್ಕಮಗಳೂರು ನಗರಕ್ಕೆ ೫೦ ಹಾಸಿಗೆಯ ಆಯುಷ್ ಆಸ್ಪತ್ರೆ ಮಂಜೂರಾಗಿದ್ದು ಯಾವಾಗ ;

(ಆ) ಈ ಆಸ್ಪತ್ರೆ ಕಟ್ಟಡ ಕಾಮಗಾರಿ ಪೂರ್ಣಗೊಂಡಿದೆಯೇ ; ಇಲ್ಲದಿದ್ದರೆ ಯಾವಾಗ ಪೂರ್ಣಗೊಳಿಸಲಾಗುವುದು ;

(ಇ) ಈ ಆಸ್ಪತ್ರೆಗೆ ಈವರೆಗೆ ವೈದ್ಯಕೀಯ ಹಾಗೂ ವೈದ್ಯಕೀಯೇತರ ಸಿಬ್ಬಂದಿಗಳನ್ನು ನೇಮಕ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಈ ಆಯುಷ್ ಆಸ್ಪತ್ರೆಗೆ ಅಗತ್ಯವಿರುವ ವೈದ್ಯಕೀಯ ಸಿಬ್ಬಂದಿಗಳು ಹಾಗೂ ಪರಿಕರಗಳನ್ನು ಪೂರೈಸಿ ಯಾವ ಮಿತಿಯಲ್ಲಿ ಆಸ್ಪತ್ರೆಯನ್ನು ಪ್ರಾರಂಭಿಸಲಾಗುವುದು ? (ವಿವರ ಒದಗಿಸುವುದು)

## ವಾಯುಮಾಲಿನ್ಯ ಹೆಚ್ಚಳದಿಂದಾಗಿ ಗಾಳಿಯ ಗುಣಮಟ್ಟ ಹದಗೆಟ್ಟಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೦೮ (೮೧೫) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ವಾಯುಮಾಲಿನ್ಯದ ಪ್ರಮಾಣ ಹೆಚ್ಚುತ್ತಿರುವ ಕಾರಣ ಗಾಳಿಯ ಗುಣಮಟ್ಟ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಯಾವ ಯಾವ ಜಿಲ್ಲೆಗಳಲ್ಲಿ ಗಾಳಿಯ ಗುಣಮಟ್ಟ ಹದಗೆಟ್ಟಿದೆ ; ವಾಯುಮಾಲಿನ್ಯ ಹೆಚ್ಚಳವಾಗಲು ಕಾರಣಗಳೇನು ;

(ಆ) ವಿಶ್ವ ಆರೋಗ್ಯ ಸಂಸ್ಥೆ (ಡಬ್ಲ್ಯೂಹೆಚ್‌ಒ) ನಿಗಧಿಪಡಿಸಿರುವ ಗಾಳಿಯ ಗುಣಮಟ್ಟ ಎಷ್ಟು ; ಡಬ್ಲ್ಯೂಹೆಚ್‌ಒ ನಿಗಧಿಪಡಿಸಿರುವ ಮಾರ್ಗಸೂಚಿ ಮೀರಿರುವ ಜಿಲ್ಲೆಗಳು ಯಾವುವು ;

(ಇ) ಶುದ್ಧ ಗಾಳಿ ಮೂಲಭೂತ ಹಕ್ಕಾಗಿದ್ದು, ಇದನ್ನು ಒದಗಿಸುವ ನಿಟ್ಟಿನಲ್ಲಿ ವಾಯುಮಾಲಿನ್ಯವನ್ನು ಕಡಿಮೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಈ ಕುರಿತು ಅಧ್ಯಯನ ನಡೆಸಿದೆಯೇ ; ಹಾಕಿಕೊಂಡಿರುವ ಕಾರ್ಯಕ್ರಮಗಳು ಯಾವುವು ? (ಸಮಗ್ರ ವಿವರ ನೀಡುವುದು)

## ಡೀಮ್ಡ್ ಫಾರೆಸ್ಟ್-೨ ಪಟ್ಟಿ ತಯಾರಿಸುವಾಗ ಅನುಸರಿಸುವ ಮಾನದಂಡಗಳು

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೦೯ (೮೧೬) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಡೀಮ್ಡ್ ಫಾರೆಸ್ಟ್–೧ರಲ್ಲಿ ಎಷ್ಟು ಪ್ರದೇಶವನ್ನು ಗುರುತಿಸಲಾಗಿದೆ ; (ತಾಲ್ಲೂಕುವಾರು ಸರ್ವೆ ನಂಬರ್ ಸಹಿತ ವಿವರ ನೀಡುವುದು)

(ಆ) ಡೀಮ್ಡ್ ಪಾರೆಸ್ಟ್–೧ರಲ್ಲಿ ಎಷ್ಟು ಪ್ರದೇಶವನ್ನು ಕೈಬಿಟ್ಟು, ಡೀಮ್ಡ್ ಫಾರೆಸ್ಟ್–೨ ಪಟ್ಟಿಯನ್ನು ಸಿದ್ದಪಡಿಸಲಾಗಿದೆ ; (ತಾಲ್ಲೂಕುವಾರು ಸರ್ವೆ ನಂಬರ್ ಸಹಿತ ವಿವರ ನೀಡುವುದು)

(ಇ) ಡೀಮ್ಡ್ ಫಾರೆಸ್ಟ್–೨ ಪಟ್ಟಿ ತಯಾರಿಕೆಗೆ ಅನುಸರಿಸಿರುವ ಮಾನದಂಡಗಳೇನು ; ಡೀಮ್ಡ್ ಫಾರೆಸ್ಟ್–೨ ಪಟ್ಟಿ ತಯಾರಿಸಿ ಸುಪ್ರೀಂಕೋರ್ಟ್‌ಗೆ ಸರ್ಕಾರ ಸಲ್ಲಿಸಿದ್ದ ಅಫಿಡೆವಿಟ್‌ನ್ನು ಸುಪ್ರೀಂಕೋರ್ಟ್ ಮಾನ್ಯ ಮಾಡಿ ಅಂಗೀಕರಿಸಿದೆಯೇ ? (ವಿವರ ಒದಗಿಸುವುದು)

## ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವಾಗಿ ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೧೦ (೮೧೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯ ಸಖರಾಯಪಟ್ಟಣ ಹಾಗೂ ಕಳಸಾಪುರ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದರೆ, ಈ ಪ್ರಸ್ತಾವನೆ ಯಾವ ಹಂತದಲ್ಲಿದೆ ;

(ಆ) ಯಾವ ಕಾಲಮಿತಿಯೊಳಗೆ ಈ ಎರಡೂ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಲಾಗುವುದು; ಈ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳೇನು ?

## ವಿದ್ಯುತ್ ಅವಘಡಗಳಿಂದ ಸಾವಿಗೀಡಾಗುತ್ತಿರುವ ಪ್ರಕರಣಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೧೧ (೭೯೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ವಿದ್ಯುತ್ ಅವಘಡಗಳಿಂದ ಸಾವಿಗೀಡಾಗುತ್ತಿರುವ ಪ್ರಕರಣಗಳು ಮರುಕಳಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಳೆದ ೫ ವರ್ಷಗಳಲ್ಲಿ ವಿದ್ಯುತ್ ಅವಘಡದಿಂದ ಮರಣ ಹೊಂದಿರುವ ಸಿಬ್ಬಂದಿ ನಾಗರೀಕರು ಮತ್ತು ಜಾನುವಾರುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಲ್ಲಿ ವಿದ್ಯುತ್ ಅವಘಡದಿಂದ ಮರಣ ಹೊಂದಿರುವ ಸಿಬ್ಬಂದಿ ನಾಗರೀಕರು ಮತ್ತು ಜಾನುವಾರುಗಳಿಗೆ ಪರಿಹಾರ ರೂಪದಲ್ಲಿ ಸರ್ಕಾರ ಬಿಡುಗಡೆ ಮಾಡಿರುವ ಪರಿಹಾರವೇನು ; (ಸಂಪೂರ್ಣ ವಿವರ ನೀಡುವುದು)

(ಇ) ವಿದ್ಯುತ್ ಅವಘಡಗಳು ಸಂಭವಿಸಲು ಪ್ರಮುಖ ಕಾರಣಗಳೇನು ಮತ್ತು ಇದನ್ನು ತಡೆಗಟ್ಟಲು ಇರುವ ಮಾರ್ಗೋಪಾಯಗಳಾವುವು ? (ಸಂಪೂರ್ಣ ಮಾಹಿತಿ ನೀಡುವುದು)

## ವೈದ್ಯರು ಮತ್ತು ವೈದ್ಯಕೀಯ ಸಿಬ್ಬಂದಿಗಳ ಮೇಲೆ ನಡೆಯುತ್ತಿರುವ ದಾಳಿಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೧೨ (೭೯೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ವೈದ್ಯರು. ವೈದ್ಯಕೀಯ ಸಿಬ್ಬಂದಿ ಮತ್ತು ಆಸ್ಪತ್ರೆಗಳ ಮೇಲೆ ನಡೆಯುತ್ತಿರುವ ದಾಳಿ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕರ್ತವ್ಯನಿರತ ವೈದ್ಯರು ಮತ್ತು ವೈದ್ಯಕೀಯ ಸಿಬ್ಬಂದಿಗಳ ಸುರಕ್ಷತೆಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಸಿ.ಎಸ್.ಆರ್ ಯೋಜನೆಯಡಿ ಕೆ.ಪಿ.ಎಸ್ ಶಾಲೆಗಳನ್ನು ಅಭಿವೃದ್ಧಿ ಪಡಿಸುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೧೩ (೭೯೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಿ.ಎಸ್.ಆರ್ ಯೋಜನೆಯಡಿ ಸಮಗ್ರವಾಗಿ ಅಭಿವೃದ್ಧಿ ಪಡಿಸಲು ಗುರುತಿಸಲಾಗಿರುವ ರಾಜ್ಯದ ಕರ್ನಾಟಕ ಪಬ್ಲಿಕ್ ಶಾಲೆಗಳ ಸಂಖ್ಯೆ ಎಷ್ಟು; ಅವು ಯಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಯೋಜನೆಯಡಿ ಕರ್ನಾಟಕ ಪಬ್ಲಿಕ್ ಶಾಲೆಗಳಿಗೆ ಒದಗಿಸಲು ಉದ್ದೇಶಿಸಿರುವ ಸೌಲಭ್ಯಗಳಾವುವು ; ಈ ಯೋಜನೆಯಡಿ ಅಭಿವೃದ್ಧಿಪಡಿಸಲಾಗಿರುವ ಶಾಲೆಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು

## ತಾಲ್ಲೂಕು ಆಯುಷ್ ಆಸ್ಪತ್ರೆಗಳಿಗೆ ಸೃಜನೆಯಾಗಿರುವ ಹುದ್ದೆಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೧೪ (೮೦೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ತಾಲ್ಲೂಕು ಆಯುಷ್ ಆಸ್ಪತ್ರೆಗಳಿಗೆ ಸರ್ಕಾರವು ಸೃಜನೆ ಮಾಡಿರುವ ವೈದ್ಯಾಧಿಕಾರಿಗಳು ಮತ್ತು ಹಿರಿಯ ವೈದ್ಯಾಧಿಕಾರಿಗಳ ಹುದ್ದೆಗಳೆಷ್ಟು; ಆ ಹುದ್ದೆಗಳ ವೇತನ ಶ್ರೇಣಿ ಎಷ್ಟು ಈ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ವೈದ್ಯಾಧಿಕಾರಿ/ ಹಿರಿಯ ವೈದ್ಯಾಧಿಕಾರಿಗಳ ಸಂಖ್ಯೆ ಮತ್ತು ಗುತ್ತಿಗೆ/ ಅರೆಕಾಲಿಕ ವೈದ್ಯಾಧಿಕಾರಿ/ಹಿರಿಯ ವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು; ಇವರಿಗೆ ತಾಲ್ಲೂಕು ಆಯುಷ್ ಆಸ್ಪತ್ರೆಗಳಲ್ಲಿ ಪಾವತಿಸುತ್ತಿರುವ ವೇತನವೆಷ್ಟು ; (ಆಸ್ಪತ್ರೆವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ತಾಲ್ಲೂಕು ಮಟ್ಟದ ಆಯುಷ್ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರುಗಳ ಅವಶ್ಯಕತೆ ಇದ್ದರೂ ಆ ಹುದ್ದೆಗಳನ್ನು ಹಲವು ವರ್ಷಗಳಿಂದ ತುಂಬದಿರುವುದರಿಂದ ರೋಗಿಗಳಿಗೆ ಬಹಳ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಮಾಹಿತಿ ನೀಡುವುದು)

(ಇ) ಆಯುಷ್ ಆಸ್ಪತ್ರೆಗಳಲ್ಲಿ ಶುಶ್ರೂಕಿಯರ ಹುದ್ದೆಗಳನ್ನು ಹಲವು ವರ್ಷಗಳಿಂದ ತುಂಬದಿರುವುದರಿಂದ ರೋಗಿಗಳಿಗೆ ಬಹಳ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಇಲಾಖೆಯಲ್ಲಿ ಖಾಲಿ ಇರುವ ಶುಶ್ರೂಕಿಯರ ಹುದ್ದೆಗಳೆಷ್ಟು ; ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಆಹಾರ ಧಾನ್ಯ ಖರೀದಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೧೫ (೭೬೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಿಂದ ನ್ಯಾಯ ಬೆಲೆ ಅಂಗಡಿಯ ಮೂಲಕ ವಿತರಿಸಲು ಸರಕಾರವು ಆಹಾರ ಧಾನ್ಯ ಹಾಗೂ ಯಾವ ಯಾವ ವಸ್ತುಗಳನ್ನು ಖರೀಸುತ್ತದೆ ; (ವಿವರ ನೀಡುವುದು)

(ಆ) ಆಹಾರ ಧಾನ್ಯ ಈ ವಸ್ತುಗಳನ್ನು ಸರಕಾರವು ಯಾರಿಂದ ಖರೀದಿಸುತ್ತದೆ; ಸದರಿ ಆಹಾರ ಧಾನ್ಯ, ಬೇಳೆ ಕಾಳುಗಳ ಸರಬರಾಜುದಾರರು, ಪೂರೈಕೆದಾರರು ಯಾರು ; (ಹೆಸರು ಮತ್ತು ಸಂಪೂರ್ಣ ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಇ) ಆಹಾರ ಮತ್ತು ನಾಗರಿಕ ಸರಬರಾಜು ನ್ಯಾಯ ಬೆಲೆ ಅಂಗಡಿಯ ಮೂಲಕ ವಿತರಿಸಲು ಸರಕಾರವು ಖರೀದಿಸುವ ವಸ್ತುಗಳನ್ನು ಒಂದು ಸ್ಥಳದಿಂದ ಇನ್ನೊಂದು ಸ್ಥಳಕ್ಕೆ ಸಾಗಾಟ ಮಾಡುವವರು ಯಾರು ? (ಅವರ ಹೆಸರು ದೂರವಾಣಿ ಸಂಖ್ಯೆಯೊಂದಿಗೆ ವಿಳಾಸ ಹಾಗೂ ಸಮಗ್ರ ವಿವರ ನೀಡುವುದು)

## ಆಹಾರ ಪೊಟ್ಟಣಗಳ ಮೇಲೆ ನಮೂದು ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೧೬ (೭೭೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯು ಆಹಾರ ಪೊಟ್ಟಣಗಳ ಮೇಲೆ ಯಾವೆಲ್ಲಾ ವಿಷಯಗಳ ಕುರಿತು ಕಡ್ಡಾಯವಾಗಿ ನಮೂದು ಇರಬೇಕಾಗಿದೆ ಎಂಬುದಾಗಿ ಆಹಾರ ವಸ್ತುಗಳ ಮಾರಾಟಗಾರರಿಗೆ ಆದೇಶಿಸಿದೆ ; (ವಿವರ ನೀಡುವುದು)

(ಆ) ಸರ್ಕಾರ ವತಿಯಿಂದ ಹಲಾಲ್ ಪ್ರಮಾಣ ಪತ್ರವನ್ನು ನೀಡಲಾಗುತ್ತಿದೆಯೇ ; ಹಾಗಿದ್ದಲ್ಲಿ, ಆಹಾರ ಪೊಟ್ಟಣಗಳ ಮೇಲೆ ಹಲಾಲ್ ಪ್ರಮಾಣ ಪತ್ರವನ್ನು ಅಚ್ಚು ಹಾಕಲು ಯಾವ ನಿಯಮದ ಅನ್ವಯ ಅನುಮತಿ ನೀಡಲಾಗಿದೆ ; ಈ ಕುರಿತು ಸರಕಾರದ ನಿಲುವೇನು ;

(ಇ) ಹಲಾಲ್ ಪ್ರಮಾಣ ಪತ್ರಗಳನ್ನು ಯಾವ ಸಂಸ್ಥೆಯವರು ನೀಡುತ್ತಿದ್ದಾರೆ ರಾಜ್ಯ ಸರಕಾರವು ಸದರಿ ಸಂಸ್ಥೆಯವರಿಗೆ ಹಲಾಲ್ ಪ್ರಮಾಣ ಪತ್ರ ನೀಡುವ ಅಧಿಕೃತ ಸಂಸ್ಥೆ ಎಂಬುದಾಗಿ ಅನುಮತಿ ನೀಡಿದೆಯೇ ; ಇಲ್ಲವಾದಲ್ಲಿ, ಯಾರ ಅನುಮತಿಯನ್ನು ಪಡೆದು ಈ ಪ್ರಮಾಣ ಪತ್ರವನ್ನು ನೀಡಲಾಗುತ್ತದೆ; ಇದ್ದರಿಂದ ಸರಕಾರಕ್ಕೆ ಎಷ್ಟು ಪ್ರಮಾಣದ ಶುಲ್ಕ ಸಂದಾಯವಾಗುತ್ತಿದೆ ?

## ಸೌರ ನೀರು ಎತ್ತುವ ಪಂಪುಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೧೭ (೭೭೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೪,೦೬೫ ಸೌರ ನೀರು ಎತ್ತುವ ಪಂಪುಗಳಿಗೆ ಕಾರ್ಯದೇಶ ನೀಡಿದ್ದರೂ ಕೇವಲ ೩೭೧೦ ಸೌರ ನೀರು ಎತ್ತುವ ಪಂಪುಗಳನ್ನು ಮಾತ್ರ ಸ್ಥಾಪಿಸಲಾಗಿರುವುದು ಸರಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರಕಾರದ ನಿಲುವೇನು ;

(ಆ) ನವೀನ ಮತ್ತು ನವೀಕರಿಸಬಹುದಾದ ಇಂಧನ ಮಂತ್ರಾಲಯವು ನೀರಾವರಿ ಮತ್ತು ಕುಡಿಯುವ ನೀರಿಗಾಗಿ ೯೦೨೫ ಸೌರ ನೀರು ಎತ್ತುವ ಪಂಪುಗಳನ್ನು ಮಂಜೂರು ಮಾಡಿದ್ದರೂ ಕೇವಲ ೩೭೧೦ ಪಂಪುಗಳನ್ನು ಮಾತ್ರವೇ ಸ್ಥಾಪಿಸಿದ್ದರಿಂದ ಜನ ಸಾಮಾನ್ಯರಿಗೆ, ರೈತರಿಗೆ ಆಗಿರುವ ಅನಾನುಕೂಲಗಳಿಗೆ ಜವಾಬ್ದಾರಿ ಯಾರು; (ವಿವರ ನೀಡುವುದು)

(ಇ) ಕೇಂದ್ರ ಸರ್ಕಾರವು ಮಂಜೂರು ಮಾಡಿರುವ ಯೋಜನೆಗಳನ್ನೂ ಸಮರ್ಪಕವಾಗಿ ಜಾರಿ ಮಾಡದೆ ರಾಜ್ಯದ ಜನತೆಗೆ ಅನ್ಯಾಯ ವೆಸಗುತ್ತಿರುವ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು)

## ಮರಗಳ ಹರಾಜು ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೧೮ (೭೭೨) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ಅರಣ್ಯ ಇಲಾಖೆಯ ವತಿಯಿಂದ ಎಷ್ಟು ಟನ್ ಮರಗಳ ಹರಾಜು ಪ್ರಕ್ರಿಯೆ ನಡೆದಿದೆ ಇದರಿಂದ ಸರ್ಕಾರಕ್ಕೆ ಜಮಾ ಆಗಿರುವ ಮೊತ್ತ ಎಷ್ಟು ; ಯಾವ ಜಾತಿಯ ಮರದಿಂದ ಎಷ್ಟು ಅದಾಯ ಬಂದಿದೆ ; (ಸದರಿ ಮರಗಳನ್ನು ಖರೀದಿಸಿದವರ ವಿವರದೊಂದಿಗೆ ಮಾಹಿತಿ ನೀಡುವುದು)

(ಆ) ವಸತಿ ಪ್ರದೇಶದಲ್ಲಿ ಮರದ ಮಿಲ್ಲುಗಳನ್ನು ನಡೆಸಲು ಅನುಮತಿ ನೀಡಲಾಗಿದೆಯೇ: ಈ ಕುರಿತು ಇರುವ ನಿಯಮಗಳೇನು ; ಇದುವರೆಗೆ ವಸತಿ ಪ್ರದೇಶದಲ್ಲಿರುವ ಎಷ್ಟು ಮರದ ಮಿಲ್ಲುಗಳನ್ನು ಮುಚ್ಚಲಾಗಿದೆ ;

(ಇ) ಕಳೆದ ಎರಡು ವರ್ಷಗಳಲ್ಲಿ ಹೊಸದಾಗಿ ಎಷ್ಟು ಮರದ ಮಿಲ್ಲುಗಳನ್ನು ತೆರೆಯಲು ಅನುಮತಿಸಲಾಗಿದೆ ; ಮರದ ಮಿಲ್ಲುಗಳನ್ನು ಪ್ರಾರಂಭಿಸಲು ಇರುವ ನಿಯಮಗಳೇನು ; ಯಾವ ಸ್ಥಳದಲ್ಲಿ ಮರದ ಮಿಲ್ಲನ್ನು ಪ್ರಾರಂಭಿಸಬಹುದು ; (ವಿವರ ನೀಡುವುದು)

(ಈ) ದಕ್ಷಿಣ ಕನ್ನಡ ಜಿಲ್ಲೆಯ ಕೃಷ್ಣಾಪುರ ಮತ್ತು ಕಾಟಿಪಳ್ಳ ಗ್ರಾಮದಲ್ಲಿರುವ ಮರದ ಮಿಲ್ಲುಗಳು ವಸತಿ ಪ್ರದೇಶದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ವಸತಿ ಪ್ರದೇಶದಲ್ಲಿ ವಾಯು ಮಾಲಿನ್ಯ ಮತ್ತು ಶಬ್ದ ಮಾಲಿನ್ಯವುಂಟು ಮಾಡುವ ಮರದ ಮಿಲ್ಲುಗಳ ಕುರಿತು ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಸಂಸ್ಕೃತ ಭಾಷೆಯ ಅಭಿವೃದ್ಧಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೯ (೭೭೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಂಸ್ಕೃತ ಭಾಷೆಯ ಅಭಿವೃದ್ಧಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ; ಸಂಸ್ಕೃತ ಭಾಷೆಯನ್ನು ಕಲಿಯುವವರಿಗೆ ಸರ್ಕಾರ ಯಾವ ರೀತಿಯ ಪ್ರೋತ್ಸಾಹ ನೀಡುತ್ತಿದೆ ; (ವಿವರ ನೀಡುವುದು)

(ಆ) ೧೦ನೇ ತರಗತಿಯವರೆಗೆ ಸಂಸ್ಕೃತ ಕಲಿತ ವಿದ್ಯಾರ್ಥಿಗಳಿಗೆ ಸರ್ಕಾರಿ ಸೇವೆ ಮತ್ತು ಉನ್ನತ ಶಿಕ್ಷಣದಲ್ಲಿ ಮೀಸಲಾತಿ ನೀಡುವ ಕುರಿತು ಸರ್ಕಾರದ ನಿಲುವೇನು ; ಈ ಕುರಿತು ಸರ್ಕಾರ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಪಡಿತರ ಚೀಟಿಯ ಕುರಿತಂತೆ ಮಾಹಿತಿ

**ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೨೦ (೭೧೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ವಿತರಿಸಿರುವ ಪಡಿತರ ಚೀಟಿ ಸಂಖ್ಯೆ ಎಷ್ಟು; ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಪಡಿತರ ಚೀಟಿಯನ್ನು ರದ್ದು ಪಡಿಸಲು ಅಥವಾ ಅನರ್ಹಗೊಳಿಸಲು ಸರ್ಕಾರ ಯಾವ ಯಾವ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ; ಈವರೆಗೂ ಅನರ್ಹಗೊಳಿಸಿರುವ ಪಡಿತರ ಚೀಟಿ ಸಂಖ್ಯೆ ಎಷ್ಟು ; (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ರೈತಾಪಿ ವರ್ಗದವರು, ಬಡವರು ಹಾಗೂ ಕೂಲಿ ಕಾರ್ಮಿಕರ ಪಡಿತರ ಚೀಟಿಯನ್ನು ಹೆಚ್ಚಾಗಿ ರದ್ದು ಅಥವಾ ಅನರ್ಹಗೊಳಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಪಡಿತರ ಚೀಟಿಯನ್ನು ಅರ್ಹ ಕುಟುಂಬದವರಿಗೆ ಮರು ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ತುಮಕೂರು ಜಿಲ್ಲೆಯಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶಿಕ್ಷಕರ ಕೊರತೆ

**ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೨೧ (೭೧೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆಯ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಮಂಜೂರಾದ ಶಿಕ್ಷಕರ ಸಂಖ್ಯೆ ಎಷ್ಟು ; ಇಲ್ಲಿ ಖಾಲಿ ಇರುವ ಶಿಕ್ಷಕರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಶೈಕ್ಷಣಿಕ ವರ್ಷ ಪ್ರಾರಂಭಗೊಂಡರು ಸಹ ಶಿಕ್ಷಕರ ಕೊರತೆಯಿಂದ ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣದ ಕೊರತೆಯಿಂದ ವಿದ್ಯಾರ್ಥಿಗಳಿಗೆ ವ್ಯಾಸಂಗಕ್ಕೆ ತೊಂದರೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಖಾಲಿ ಇರುವ ಶಿಕ್ಷಕರ ಹುದ್ದೆಯನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಸರ್ಕಾರದ ಮಹತ್ವಕಾಂಕ್ಷಿ ಯೋಜನೆ ಬಿಸಿಯೂಟ ಯೋಜನೆಯ ಕುರಿತು

**ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೨೨ (೭೧೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದ ಮಹತ್ವಕಾಂಕ್ಷಿ ಯೋಜನೆಯಾದ ಮಕ್ಕಳ ಬಿಸಿಯೂಟ ಯೋಜನೆಯು ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ಹಿತದೃಷ್ಟಿಯಿಂದ ಜಾರಿಗೊಳಿಸಿದ್ದು, ಗುಬ್ಬಿ ತಾಲ್ಲೂಕು, ಟಿ. ಪಾಳ್ಯದ (ನಡುವಲಪಾಳ್ಯ) ಸರ್ಕಾರಿ ಪ್ರಾಥಮಿಕ ಪಾಠಶಾಲೆಯ ಮಕ್ಕಳಿಗೆ ೧೫ ದಿನಗಳವರೆಗೆ ಮೊಟ್ಟೆ, ಬಾಳೆಹಣ್ಣು, ಚಿಕ್ಕಿ ಹಾಗೂ ಮಧ್ಯಾಹ್ನದ ಬಿಸಿಯೂಟ ನೀಡದೇ ನಿರ್ಲಕ್ಷ್ಯವಹಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ :

(ಆ) ಬಂದಿದಲ್ಲಿ, ಈ ರೀತಿ ನಿರ್ಲಕ್ಷ್ಯವಹಿಸಿರುವ ಅಧಿಕಾರಿಗಳ ಮೇಲೆ ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಇ) ಎಲ್ಲಾ ಕಡೆಗಳಲ್ಲಿ ಈ ರೀತಿಯ ಪ್ರಕರಣಗಳು ಮರುಕಳಿಸದಂತೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಮಧುಗಿರಿ ಶೈಕ್ಷಣಿಕ ಜಿಲ್ಲೆಯಲ್ಲಿ ಪದವಿ ಪೂರ್ವ ಶಿಕ್ಷಣದ ಉಪ ನಿರ್ದೇಶಕರ ಕಛೇರಿಯನ್ನು ಪ್ರಾರಂಭಿಸುವ ಬಗ್ಗೆ

**ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೨೩ (೮೦೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಧುಗಿರಿಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಜಿಲ್ಲಾ ಉಪ ನಿರ್ದೇಶಕರ ಕಛೇರಿ ಪ್ರಾರಂಭಿಸಲು ಪ್ರಸ್ತಾವನೆಗಳನ್ನು ಸಲ್ಲಿಸಲಾಗಿದೆಯೇ ;

(ಆ) ಸಲ್ಲಿಕೆಯಾಗಿದ್ದಲ್ಲಿ, ಮಧುಗಿರಿಯನ್ನು "ಶೈಕ್ಷಣಿಕ ಜಿಲ್ಲೆಯೆಂದು ಘೋಷಣೆ" ಮಾಡಿ ೨೪ ವರ್ಷ ಕಳೆದರೂ ಮಧುಗಿರಿ, ಕೊರಟಗೆರೆ, ಪಾವಗಡ, ಸಿರಾ ತಾಲ್ಲೂಕುಗಳನ್ನು ಒಳಗೊಂಡಂತೆ ಇದುವರೆಗೂ ಮಧುಗಿರಿಯಲ್ಲಿ ಜಿಲ್ಲಾ ಉಪ ನಿರ್ದೇಶಕರ ಕಛೇರಿ ಪ್ರಾರಂಭಿಸುವ ಬಗ್ಗೆ ಸರ್ಕಾರ ಏನು ಕ್ರಮಕೈಗೊಂಡಿದೆ ; (ವಿವರ ನೀಡುವುದು)

(ಇ) ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಜಿಲ್ಲಾ ಸದರಿ ಕಛೇರಿಯನ್ನು ಪ್ರಾರಂಭಿಸಲು ವಿಳಂಬವಾಗುತ್ತಿರುವುದಕ್ಕೆ ಕಾರಣವೇನು ; ಯಾವ ಕಾಲಮಿತಿಯಲ್ಲಿ ಸದರಿ ಕಛೇರಿಯನ್ನು ಪ್ರಾರಂಭಿಸಲಾಗುವುದು ? (ವಿವರ ನೀಡುವುದು)

## ಕೌಶಲ್ಯಾಭಿವೃದ್ಧಿ ಯೋಜನೆಯ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :-**

೭೨೪ (೭೯೩) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೌಶಲ್ಯಾಭಿವೃದ್ಧಿ ಯೋಜನೆಯಡಿ ಕಳೆದ ೫ ವರ್ಷಗಳಲ್ಲಿ ಕೈಗೊಳ್ಳಲಾದ ಯೋಜನೆಗಳು ಯಾವುವು ;

(ಆ) ಎಷ್ಟು ಜನ ಫಲಾನುಭವಿಗಳು ಈ ಯೋಜನೆಗಳ ಲಾಭ ಪಡೆದುಕೊಂಡಿದ್ದಾರೆ ; (ಜಿಲ್ಲಾವಾರು, ವರ್ಷವಾರು ಮಾಹಿತಿ ನೀಡುವುದು)

(ಇ) ನಿರುದ್ಯೋಗಿ ಯುವಕರಿಗೆ ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಉದ್ಯೋಗವಕಾಶ ಒದಗಿಸಲಾಗಿದೆಯೇ ;

(ಈ) ನಿರುದ್ಯೋಗಿ ಯುವಕರಿಗೆ ಉದ್ಯೋಗವಕಾಶ ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರ ಒದಗಿಸುವುದು)

(ಉ) ಇದುವರೆಗೂ ಎಷ್ಟು ಅನುದಾನ ಬಿಡುಗಡೆಯಾಗಿದೆ ಮತ್ತು ಎಷ್ಟು ಯುವಕರಿಗೆ ಉದ್ಯೋಗವಕಾಶ ಕಲ್ಪಿಸಲಾಗಿದೆ ? (ಜಿಲ್ಲಾವಾರು ವಿವರ ಒದಗಿಸುವುದು)

## ದೈಹಿಕ ಶಿಕ್ಷಕರನ್ನು ಸಹ ಶಿಕ್ಷಕರಂತೆ ಪರಿಗಣಿಸುವ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :-**

೭೨೫ (೭೯೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾನ ವಿದ್ಯಾರ್ಹತೆ, ಸಮಾನ ವೇತನ ಹಾಗೂ ಒಂದೇ ನೇಮಕಾತಿ ವಿಧಾನವಿದ್ದರೂ ಸಹ ಶಿಕ್ಷಕರು ಮತ್ತು ದೈಹಿಕ ಶಿಕ್ಷಕರುಗಳಲ್ಲಿ ತಾರತಮ್ಯ ಧೋರಣೆ ತೋರಲಾಗಿದೆಯೇ ;

(ಆ) ದೈಹಿಕ ಶಿಕ್ಷಕರನ್ನು ಸಹ ಶಿಕ್ಷಕರು ಎಂದು ಪರಿಗಣಿಸಿ ಸಹ ಶಿಕ್ಷಕರಿಗೆ ಒದಗಿಸುತ್ತಿರುವ ಸೌಲಭ್ಯಗಳನ್ನು ದೈಹಿಕ ಶಿಕ್ಷಕರುಗಳಿಗೆ ನೀಡಲಾಗುತ್ತಿದೆಯೇ ;

(ಇ) ದೈಹಿಕ ಶಿಕ್ಷಕರುಗಳನ್ನು ಸಹ ಶಿಕ್ಷಕರು ಎಂದು ಪರಿಗಣಿಸಿ ಹೆಚ್‌ಆರ್‌ಎಂಎಸ್ ನಲ್ಲಿ ದಾಖಲು ಮಾಡಲಾಗುತ್ತಿದೆಯೇ ;

(ಈ) ಸುಮಾರು ವರ್ಷಗಳಿಂದ ನೇಮಕಾತಿ ಇಲ್ಲದೆ ಪದವಿ ಕಾಲೇಜುಗಳಲ್ಲಿ ಹಾಗೂ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ದೈಹಿಕ ನಿರ್ದೇಶಕರು/ಪ್ರೊಫೆಸರ್ ಹುದ್ದೆಗೆ ನೇಮಕಾತಿ ಮಾಡಿಕೊಳ್ಳದೆ ಇರುವುದರಿಂದ ನೇಮಕಾತಿ ಅಧಿಸೂಚನೆಯನ್ನು ಯಾವಾಗ ಹೊರಡಿಸಲಾಗುವುದು ?

## ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶೌಚಾಲಯಗಳ ನಿರ್ವಹಣೆ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :-**

೭೨೬ (೭೯೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು. ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಎಲ್ಲಾ ಶಾಲೆಗಳಲ್ಲಿ ಎಷ್ಟು ಶೌಚಾಲಯಗಳನ್ನು ನಿರ್ಮಿಸಲಾಗಿದೆ ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈ ಶಾಲೆಗಳ ಶೌಚಾಲಯಗಳ ನಿರ್ವಹಣೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಶಾಲೆಗಳಲ್ಲಿ ವಿದ್ಯಾರ್ಥಿಗಳಿಂದ ಶೌಚಾಲಯ ನಿರ್ವಹಣೆ ಮಾಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ;

(ಉ) ಬಂದಿದ್ದಲ್ಲಿ ಸಂಬಂಧಿಸಿದವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಊ) ಶೌಚಾಲಯ ನಿರ್ವಹಣೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಸರ್ಕಾರಿ ಹಿರಿಯ ಪ್ರಾಥಮಿಕ, ಪ್ರೌಢ ಶಾಲೆಗಳಲ್ಲಿ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಣ ನೀಡುವ ಕುರಿತು

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :-**

೭೨೭ (೭೯೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಹಿರಿಯ ಪ್ರಾಥಮಿಕ ಪ್ರೌಢ ಶಾಲೆಗಳು ಪದವಿ ಪೂರ್ವ ಕಾಲೇಜುಗಳ ವಿದ್ಯಾರ್ಥಿಗಳಿಗೆ ದೈಹಿಕ ಶಿಕ್ಷಣ ನೀಡುವ ಕುರಿತು ಸರ್ಕಾರದ ನಿಲುವೇನು ; ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಆ) ಸದರಿ ವಿಷಯವನ್ನು ಬೋಧಿಸುತ್ತಿರುವ ದೈಹಿಕ ಶಿಕ್ಷಣ ಶಿಕ್ಷಕರ/ ಉಪನ್ಯಾಸಕರ ಸಂಖ್ಯೆ ಎಷ್ಟು ; ಅವಶ್ಯಕತೆ ಇರುವ ಶಿಕ್ಷಕರ ಸಂಖ್ಯೆ ಎಷ್ಟು ;

(ಇ) ಎಷ್ಟು ವಿದ್ಯಾರ್ಥಿಗಳ ಸಂಖ್ಯೆಗೆ ಒಬ್ಬ ಶಿಕ್ಷಕರ ನೇಮಕಾತಿ ಮಾಡಲಾಗುತ್ತಿದೆ ; (ವಿದ್ಯಾರ್ಥಿ ಶಿಕ್ಷಕರ ಅನುಪಾತ) ಒಬ್ಬ ದೈಹಿಕ ಶಿಕ್ಷಕರಿಗೆ ೫೦೦ ವಿದ್ಯಾರ್ಥಿಗಳ ಅನುಪಾತ ಇರುವುದು ನಿಜವೇ ;

(ಈ) ದೈಹಿಕ ಶಿಕ್ಷಣ ಶಿಕ್ಷಕರ/ಉಪನ್ಯಾಸಕರ ವೃಂದ ಮತ್ತು ನೇಮಕಾತಿ ತಿದ್ದುಪಡಿ ಕಾರ್ಯ ಯಾವ ಹಂತದಲ್ಲಿದೆ ; ಯಾವ ಕಾಲಮಿತಿಯೊಳಗೆ ಇದನ್ನು ಪೂರ್ಣಗೊಳಿಸಲಾಗುವುದು ?

## ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಬಿ.ಪಿ.ಎಲ್ ಕಾರ್ಡ್‌ಗಳನ್ನು ಬದಲಾವಣೆ ಮಾಡಿರುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೨೮ (೭೩೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಕಳೆದ ಎರಡು ವರ್ಷಗಳಲ್ಲಿ ಬಡ ಕುಟುಂಬಗಳಿಗೆ ಬಿಪಿಎಲ್ ಕಾರ್ಡ್‌ಗಾಗಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು ಮತ್ತು ಮಂಜೂರು ಮಾಡಿದ ಅರ್ಜಿಗಳ ಸಂಖ್ಯೆ ಎಷ್ಟು; ತಿರಸ್ಕೃತವಾದ ಅರ್ಜಿಗಳು, ಕಾರ್ಡ್‌ಗಳು ಎಷ್ಟು ; (ಮಾಹಿತಿ ಒದಗಿಸುವುದು)

(ಆ) ಸದರಿ ಜಿಲ್ಲೆಗಳಲ್ಲಿ ಕಳೆದ ಎರಡು ವರ್ಷಗಳಲ್ಲಿ ಮಂಜೂರಾದ ಕಾರ್ಡ್‌ಗಳಲ್ಲಿ ನಂತರ ರದ್ದತಿ ಅಥವಾ ಬದಲಾವಣೆ ಮಾಡಿದ ಕಾರ್ಡ್‌ಗಳೆಷ್ಟು; (ವಿವರ ನೀಡುವುದು)

(ಇ) ಸರ್ಕಾರವು ಬಿಪಿಎಲ್ ಕಾರ್ಡ್‌ಗಳನ್ನು ರದ್ದತಿ ಅಥವಾ ಬದಲಾವಣೆ ಮಾಡಲು ಇರುವ ಮಾನದಂಡಗಳೇನು ; ರದ್ದು ಮಾಡಲು ಕಾರಣಗಳೇನು ;

(ಈ) ಹೊಸದಾಗಿ ಪಡಿತರ ಚೀಟಿಗಳನ್ನು ವಿತರಿಸಲು ಅರ್ಜಿಗಳನ್ನು ಸಲ್ಲಿಸಲು ಅವಕಾಶ ನೀಡಲಾಗುವುದೇ ? (ಮಾಹಿತಿ ಒದಗಿಸುವುದು)

## ಬಳ್ಳಾರಿಯಲ್ಲಿ ಮಹಿಳಾ ಸರ್ಕಾರಿ ಪಾಲಿಟೆಕ್ನಿಕ್ ಮಂಜೂರು ಮಾಡುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೯ (೭೩೬) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿಯಲ್ಲಿ ಮಹಿಳಾ ಸರ್ಕಾರಿ ಪಾಲಿಟೆಕ್ನಿಕ್ ಸ್ಥಾಪಿಸಲು ಬಳ್ಳಾರಿ ಗ್ರಾಮದ ಸ.ನಂ.೬೯೩ ಮತ್ತು ೬೯೪ ರಲ್ಲಿ ಒಟ್ಟು ೬.೬೮ ಎಕರೆ ಜಮೀನನ್ನು ಷರತ್ತಿಗೊಳಪಟ್ಟು ಜಿಲ್ಲಾಧಿಕಾರಿಗಳು ಕಾಯ್ದಿರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಮಹಿಳಾ ಸರ್ಕಾರಿ ಪಾಲಿಟೆಕ್ನಿಕ್‌ನ್ನು ಮಂಜೂರು ಮಾಡಲು ಇರುವ ತೊಂದರೆ ಏನು ; ಯಾವ ಕಾರಣಗಳಿಂದ ಕೈಗೊಂಡಿರುವುದಿಲ್ಲ; ಮಂಜೂರು ಮಾಡಲು ಕಾಲಮಿತಿಯನ್ನು ನಿಗದಿಪಡಿಸಲಾಗಿದೆಯೇ ; ಯಾವ ಕಾಲಮಿತಿಯಲ್ಲಿ ಮಂಜೂರು ಮಾಡಲಾಗುವುದು ; (ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

(ಇ) ಬಳ್ಳಾರಿಯಲ್ಲಿ ಮಹಿಳಾ ಸರ್ಕಾರಿ ಪಾಲಿಟೆಕ್ನಿಕ್ ತ್ವರಿತಗತಿಯಲ್ಲಿ ಸ್ಥಾಪಿಸಲು ಸರ್ಕಾರದ ನಿಲುವೇನು ? (ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

# ಬಳ್ಳಾರಿಯಿಂದ ಕುರುಗೋಡಿಗೆ ಬಿಇಒ ಕಛೇರಿ ಸ್ಥಳಾಂತರ ಮಾಡಿರುವುದರಿಂದ ಆಗಿರುವ ತೊಂದರೆಯ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೭೩೦ (೭೩೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿದ್ದ ಬಳ್ಳಾರಿ ಪಶ್ಚಿಮ ವಲಯ ಬಿಇಒ ಕಛೇರಿಯನ್ನು ಕುರುಗೋಡು ತಾಲ್ಲೂಕಿಗೆ ಸ್ಥಳಾಂತರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಬಳ್ಳಾರಿ ನಗರದ ಪಶ್ಚಿಮ ವಲಯಕ್ಕೆ ಬರುತ್ತಿದ್ದ ಶಾಲೆ/ಕಾಲೇಜುಗಳು ಸಹ ಕುರುಗೋಡು ಬಿಇಒ ಕಛೇರಿ ವ್ಯಾಪ್ತಿಗೆ ಸೇರಿರುವ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಶಾಲೆ/ ಕಾಲೇಜುಗಳ ಸಂಖ್ಯೆ ಎಷ್ಟು ; (ಮಾಹಿತಿ ಒದಗಿಸುವುದು)

(ಆ) ಬಳ್ಳಾರಿ ನಗರದಿಂದ ಬಳ್ಳಾರಿ ಪಶ್ಚಿಮ ವ್ಯಾಪ್ತಿಗೆ ಶಾಲೆ/ಕಾಲೇಜುಗಳ ವಿದ್ಯಾರ್ಥಿಗಳು, ಪಾಲಕರು ಮತ್ತು ಸಾರ್ವಜನಿಕರು ೨೫ ಕಿ.ಮೀ ದೂರವಿರುವ ಕುರುಗೋಡಿಗೆ ಹೋಗಿ ಬರಲು ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದಲ್ಲಿ, ಇದಕ್ಕೆ ಸರ್ಕಾರದ ಕ್ರಮಗಳೇನು; (ಮಾಹಿತಿ ಒದಗಿಸುವುದು)

(ಇ) ಬಳ್ಳಾರಿ ಪಶ್ಚಿಮ ವ್ಯಾಪ್ತಿಗೆ ಸೇರಿರುವ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಶಾಲೆ/ಕಾಲೇಜುಗಳನ್ನು ಬಳ್ಳಾರಿ ನಗರ ವ್ಯಾಪ್ತಿಯಲ್ಲಿಯೇ ಇರುವ ಬಳ್ಳಾರಿ ಪೂರ್ವ ವಲಯದ ಬಿಇಒ ಕಛೇರಿಯನ್ನು ಬಳ್ಳಾರಿ ನಗರ ಬಿಇಒ ಕಛೇರಿ ಎಂದು

ಮರುನಾಮಕರಣಗೊಳಿಸಿ ಬಳ್ಳಾರಿ ನಗರ ವ್ಯಾಪ್ತಿಯ ಎಲ್ಲಾ ಶಾಲೆ/ಕಾಲೇಜುಗಳನ್ನು ಈ ವ್ಯಾಪ್ತಿಗೆ ಸೇರಿಸಲು ಇರುವ ತೊಂದರೆಗಳೇನು; (ಮಾಹಿತಿ ಒದಗಿಸುವುದು)

(ಈ) ಕುರುಗೋಡಿಗೆ ಸೇರಿರುವ ಬಳ್ಳಾರಿ ನಗರ ಪಶ್ಚಿಮ ಶಾಲೆ/ಕಾಲೇಜುಗಳನ್ನು ಯಾವ ಕಾಲಮಿತಿಯಲ್ಲಿ ಬಳ್ಳಾರಿ ನಗರ ವ್ಯಾಪ್ತಿಯ ಬಿಇಒ ಕಛೇರಿಗೆ ಸೇರಿಸಲಾಗುವುದು ? (ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

## ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ ಶಾಲೆಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೩೧ (೭೩೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಕಳೆದ ೦೩ ವರ್ಷಗಳಲ್ಲಿ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ಸರ್ಕಾರದ ಯೋಜನೆಯಡಿ, ಸಿಎಸ್‌ಆರ್ ಅನುದಾನದಡಿ, ಖಾಸಗಿ ಸಂಸ್ಥೆಗಳು ಹಾಗೂ ದಾನಿಗಳಿಂದ ಸ್ಥಾಪಿಸಲಾದ ಶುದ್ಧ ಕುಡಿಯುವ ನೀರಿನ ಘಟಕಗಳು ಎಷ್ಟು ;

(ಆ) ಯಾವ ಯಾವ ಶಾಲೆಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳು ಸ್ಥಾಪಿಸಲಾಗಿದೆ; ಸ್ಥಾಪಿಸಲಾದ ಶುದ್ಧ ಕುಡಿಯುವ ನೀರಿನ ಘಟಕಗಳು ಕಾರ್ಯನಿರ್ವಹಿಸುತ್ತಿವೆಯೇ ; ಸ್ಥಾಪಿಸಲಾದ ಶುದ್ಧ ಕುಡಿಯುವ ನೀರಿನ ಘಟಕಗಳು ಸ್ಥಗಿತಗೊಳ್ಳಲು ಕಾರಣಗಳೇನು ;

(ಇ) ಈ ಶುದ್ಧ ಕುಡಿಯುವ ನೀರಿನ ಘಟಕಗಳು ಕಾರ್ಯಗತಗೊಳ್ಳಲು ಸರ್ಕಾರವು ಕ್ರಮ ಕೈಗೊಳ್ಳುವುದೇ ?

# ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿ ಕುರಿತು

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೩೨ (೭೩೯) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಲ್ಲಿ ಸಮಗ್ರವಾಗಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ತಿದ್ದುಪಡಿ ಮಾಡುವ ಕುರಿತು ೨೦೧೮ ರಿಂದ ಇಲ್ಲಿಯವರೆಗೆ ಕ್ರಮ ಕೈಗೊಳ್ಳದೆ ಇರಲು ಕಾರಣವೇನು; ಹಾಗಿದ್ದಲ್ಲಿ, ಸದರಿ ನಿಯಮಗಳನ್ನು ಅಂತಿಮಗೊಳಿಸುವ ಕುರಿತು ಸರ್ಕಾರ ಕಾಲಮಿತಿಯೇನಾದರೂ ವಿಧಿಸಿದೆಯೇ; ಯಾವ ಕಾಲಮಿತಿಯೊಳಗಾಗಿ ಅಂತಿಮಗೊಳಿಸಲಾಗುವುದು; ಕಳೆದ ಆರು ವರ್ಷಗಳಿಂದ ಅಂತಿಮಗೊಳಿಸದೇ ಇರಲು ಕಾರಣಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ನಿಯಮಗಳನ್ನು ತಿದ್ದುಪಡಿ ಮಾಡಲು ಆರು ವರ್ಷಗಳ ಸಮಯ ಅವಶ್ಯಕವೇ; ಹಾಗಿದ್ದಲ್ಲಿ, ತಿದ್ದುಪಡಿ ಮಾಡಲು ಇನ್ನು ಎಷ್ಟು ವರ್ಷಗಳು ಬೇಕಾಗಬಹುದು ; ಈ ಕುರಿತು ಕಳೆದ ಆರು ವರ್ಷಗಳಿಂದ ನಡೆಸಿರುವ ಸಭೆಯ ನಡವಳಿಗಳು, ಸಂಬಂಧಪಟ್ಟ ಇಲಾಖೆ ನೀಡಿರುವ ಅಭಿಪ್ರಾಯಗಳು ಹಾಗೂ ಶಿಕ್ಷಣ ಇಲಾಖೆಯು ನೀಡಿರುವ ಸಮರ್ಥನೆಗಳ ಸಂಪೂರ್ಣ ಪ್ರತಿಗಳನ್ನು ನೀಡುವುದು ;

(ಇ) ದಿನಾಂಕ:೦೩.೧೦.೨೦೨೪ ರಂದು ಈ ಕುರಿತು ವೃಂದ ಪರಿಶೀಲನಾ ಸಮಿತಿಯ ಉಪ ಸಮಿತಿಯು ನಡೆಸಿರುವ ಸಭೆಯ ನಡವಳಿಗಳು ಅಂತಿಮಗೊಂಡಿದೆಯೇ; ಅಂತಿಮಗೊಳ್ಳದೇ ಇದ್ದಲ್ಲಿ,

ಕಾರಣಗಳೇನು; ಯಾವಾಗ ಅಂತಿಮಗೊಳಿಸಲಾಗುವುದು; (ನಡವಳಿಗಳ ಪ್ರತಿಯನ್ನು ನೀಡುವುದು)

(ಈ) ೧೯೬೭ ರಿಂದ ಜಾರಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ತಿದ್ದುಪಡಿ ಮಾಡುವಲ್ಲಿ ವಿಳಂಬವಾಗುತ್ತಿರುವ ಕುರಿತು ಸರ್ಕಾರದ ನಿಲುವೇನು ?

## ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಲ್ಲಿರುವ ಪ್ರಾಧ್ಯಾಪಕರ ಕೊರತೆ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :-**

೭೩೩ (೮೩೦) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಪ್ರದಾಯಕ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು ; (ಅದರ ಪಟ್ಟಿಯನ್ನು ಒದಗಿಸುವುದು)

(ಆ) ಈ ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ಮಂಜೂರಾದ ಪ್ರಾಧ್ಯಾಪಕರ ಹುದ್ದೆಗಳೆಷ್ಟು; ಮತ್ತು ಖಾಯಂ ಆಗಿ ಕಾರ್ಯನಿರ್ವಹಿಸುತ್ತಿರುವ ಪೂರ್ಣಾವಧಿ ಪ್ರಾಧ್ಯಾಪಕರ ಸಂಖ್ಯೆ ಎಷ್ಟು ; (ವಿಶ್ವ ವಿದ್ಯಾಲಯಗಳವಾರು ಪ್ರತ್ಯೇಕ ವಿವರ ನೀಡುವುದು)

(ಇ) ಈ ವಿಶ್ವವಿದ್ಯಾಲಯಗಳಲ್ಲಿ ಬೋಧಕರ ಕೊರತೆ ಇದ್ದಲ್ಲಿ, ಅದನ್ನು ಸರಿದೂಗಿಸಲು ಏನು ಕ್ರಮ ಕೈಗೊಳ್ಳಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಈ) ನಿವೃತ್ತಿಯಿಂದ ತೆರವಾಗಿರುವ ಹುದ್ದೆಗಳನ್ನು ತುಂಬಿಕೊಳ್ಳಲು ಕೈಗೊಂಡ ಕ್ರಮಗಳೇನು ?

## ಸರ್ಕಾರಿ ಶಾಲೆಗಳಲ್ಲಿಯ PST ಶಿಕ್ಷಕರನ್ನು GPT ವೃಂದಕ್ಕೆ ಬಡ್ತಿ ನೀಡುವ ಬಗ್ಗೆ

**ಶ್ರೀ ಎಸ್.ವ್ಹಿ.ಸಂಕನೂರ (ಪದವೀಧರರ ಕ್ಷೇತ್ರ) :-**

೭೩೪ (೮೩೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೬ರ ಪೂರ್ವದಲ್ಲಿ ೧ ರಿಂದ ೭ನೇ ತರಗತಿಗಳಿಗೆ ನೇಮಕಗೊಂಡ PST ವೃಂದದ ಶಿಕ್ಷಕರನ್ನು GPT (೬-೮) ವೃಂದಕ್ಕೆ ಬಡ್ತಿ ನೀಡುವ ಪ್ರಕ್ರಿಯೆ ಯಾವ ಹಂತದಲ್ಲಿದೆ ; (ಮಾಹಿತಿ ನೀಡುವುದು)

(ಆ) ಈ ಕುರಿತು ಅಧ್ಯಯನ ಮಾಡಿ ವರದಿ ಸಲ್ಲಿಸಲು ಉನ್ನತಮಟ್ಟದ ಸಮಿತಿ ರಚನೆ ಆಗಿದ್ದು, ಅದು ವರದಿ ಸಲ್ಲಿಸಿದೆಯೇ ? (ವಿವರವಾದ ಮಾಹಿತಿ ನೀಡುವುದು)

## ಪ್ರಾಥಮಿಕ ಆರೋಗ್ಯ ಕೇಂದ್ರಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೩೫ (೮೪೮) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಇವೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸಿಬ್ಬಂದಿಗಳ ಕೊರತೆಯಿಂದಾಗಿ ರೋಗಿಗಳಿಗೆ ಚಿಕಿತ್ಸೆ ಲಭಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಸಿಬ್ಬಂದಿಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ಮಾಹಿತಿ ನೀಡುವುದು)

(ಇ) ಪ್ರಾಥಮಿಕ ಆರೋಗ್ಯ ಕೇಂದ್ರಗಳ ಅಭಿವೃದ್ಧಿಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಗುತ್ತಿಗೆ ಆದಾರದ ವೈದ್ಯರುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು) ಅವರನ್ನು ಖಾಯಂಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಕೃಷಿ ಕೈಗಾರಿಕೆಗಳ ಬಳಕೆಯಾಗುತ್ತಿರುವ ವಿದ್ಯುತ್ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೩೬ (೮೪೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಗೃಹ ಬಳಕೆ, ವಾಣಿಜ್ಯ, ಕೃಷಿ ಮತ್ತು ಕೈಗಾರಿಕೆಗೆ ಬಳಕೆಯಾಗುತ್ತಿರುವ ವಿದ್ಯುತ್ ಎಷ್ಟು ಮತ್ತು ಒಂದು ಯೂನಿಟ್ ವಿದ್ಯುತ್ ದರ ಎಷ್ಟು ; (ವಿವರ ನೀಡುವುದು)

(ಆ) ಒಂದು ಟ್ರಾನ್ಸ್‌ಪಾರಂಗೆ ಎಷ್ಟು ಪಂಪ್‌ಸೆಟ್ ಮೋಟಾರ್‌ಗಳನ್ನು ಅಳವಡಿಸಬಹುದು ; ಓಲ್ಟೇಜ್ ಸಿಗದ ಕಾರಣ ರೈತರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಇದಕ್ಕೆ ಕೈಗೊಂಡ ಕ್ರಮಗಳೇನು ;

(ಇ) ೨೦೨೨-೨೩ ರಿಂದ ೨೦೨೩-೨೪ನೇ ಸಾಲಿನವರೆಗೆ ಕರ್ನಾಟಕ ವಿದ್ಯುತ್ ನಿಗಮಕ್ಕೆ ೫ ವಿದ್ಯುತ್ ಸರಬರಾಜು ಕಂಪನಿಗಳಿಂದ ಬಂದಿರುವ ವಾರ್ಷಿಕ ಆದಾಯ ಎಷ್ಟು ;

(ಈ) ರಾಜ್ಯದಲ್ಲಿ ಪ್ರಸ್ತುತ ವಿದ್ಯುತ್ ಉತ್ಪಾದನೆ ಎಷ್ಟಿದೇ ; ಯಾವ ಯಾವ ಮೂಲದಿಂದ ವಿದ್ಯುತ್ ಉತ್ಪಾದನೆಯಾಗುತ್ತಿದೆ ? (ಮಾಹಿತಿ ನೀಡುವುದು)

## ಪಡಿತರ ಚೀಟಿಯ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೩೭ (೮೫೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಸ್ತುತ ಪಡಿತರ ಪಡೆಯುತ್ತಿರುವ ಒಟ್ಟು ಕುಟುಂಬಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಲಬುರಗಿ ಜಿಲ್ಲೆಯಲ್ಲಿ ಬಿಪಿಎಲ್ ಪಡಿತರ ಚೀಟಿ ರದ್ದಾಗಿರುವವರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಪ್ರಸ್ತುತ ಪಡಿತರ ಚೀಟಿಯಲ್ಲಿ ಒಬ್ಬ ವ್ಯಕ್ತಿಗೆ ನೀಡುತ್ತಿರುವ ಅಕ್ಕಿ ಪ್ರಮಾಣ ಎಷ್ಟು ; ಇದರಲ್ಲಿ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದಿಂದ ಪ್ರಮಾಣವೆಷ್ಟು ; (ಪ್ರತ್ಯೇಕವಾಗಿ ಮಾಹಿತಿ ನೀಡುವುದು)

(ಈ) ಆರ್ಥಿಕವಾಗಿ ಸದೃಢವಾಗಿರುವ ಕುಟುಂಬಗಳಿಗೆ ಸುಳ್ಳು ಮಾಹಿತಿ ನೀಡಿ ಬಿಪಿಎಲ್ ಕಾರ್ಡ್ ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸುಳ್ಳು ಮಾಹಿತಿ ನೀಡಿದವರ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ವಿಶ್ವವಿದ್ಯಾಲಯಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚನಾಯಿತರಾದವರು) :-**

೭೩೮ (೮೫೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉನ್ನತ ಶಿಕ್ಷಣ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ, ಖಾಸಗಿ ಮತ್ತು ಡೀಮ್ಡ್ ವಿಶ್ವವಿದ್ಯಾಲಯಗಳು ಎಷ್ಟು ; ಅವು ಯಾವುವು ; ಯಾವ ವರ್ಷದಲ್ಲಿ ಪ್ರಾರಂಭಗೊಂಡಿವೆ ; ಅವುಗಳ ವ್ಯಾಪ್ತಿ ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ವಿಶ್ವವಿದ್ಯಾಲಯಗಳಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಕುಲಪತಿಗಳು, ಕುಲಸಚಿವರು (ಆಡಳಿತ) ಮತ್ತು ಕುಲಸಚಿವರು (ಪರೀಕ್ಷೆ) ಯಾರು ; (ವಿವರವಾಗಿ ಹೆಸರು, ವಿಳಾಸ, ದೂರವಾಣಿ/ ಮೊಬೈಲ್ ಸಂಖ್ಯೆಗಳೊಂದಿಗೆ ಮಾಹಿತಿ ನೀಡುವುದು)

(ಇ) ತುಮಕೂರು ವಿಶ್ವವಿದ್ಯಾಲಯದ ದಿನಾಂಕ: ೨೪.೧೦.೨೦೧೦ರ ಜಾಹಿರಾತಿನ್ವಯ ಆಯ್ಕೆಯಾದ ಸಹಾಯಕ, ಸಹ ಪ್ರಾಧ್ಯಾಪಕರ ಹುದ್ದೆಗಳ ಆಯ್ಕೆ ಪಟ್ಟಿಯನ್ನು ನೀಡುವುದು;

(ಈ) ರಾಷ್ಟ್ರೀಯ ಶಿಕ್ಷಣ (NEP) ನೀತಿ ಅಡಿಯಲ್ಲಿ ತೇರ್ಗಡೆಗೊಂಡಿರುವ ವಿದ್ಯಾರ್ಥಿಗಳಿಗೆ ಇಲ್ಲಿಯವರೆಗೂ ಅಂಕ ಪಟ್ಟಿಗಳನ್ನು ನೀಡದಿರಲು ಕಾರಣಗಳೇನು ; ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ಹಾಗೂ ಯಾವ ಕಾಲಮಿತಿಯಲ್ಲಿ ವಿದ್ಯಾರ್ಥಿಗಳಿಗೆ ಅಂಕ ಪಟ್ಟಿಗಳನ್ನು ನೀಡಲಾಗುವುದು ?

## ಯುವ ನಿಧಿ ನೋಂದಣಿ ಮತ್ತು ಅನುದಾನಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೩೯ (೮೫೬) ಮಾನ್ಯ ಉನ್ನತ ಶಿಕ್ಷಣ ಸಚಿವರು ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಯುವ ನಿಧಿ ಯೋಜನೆ ನೋಂದಣಿಯಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ

ನೀಡುವುದು) ನೋಂದಣಿಯಾದ ಫಲಾನುಭವಿಗಳಿಗೆ ಇಲ್ಲಿಯವರೆಗೆ ಎಷ್ಟು ಹಣ ಖಾತೆಗೆ ಜಮಾ ಆಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು) ಹಾಗೂ ಈ ಯೋಜನೆಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಯೋಜನೆಯಡಿಯಲ್ಲಿ ಸರ್ಕಾರದಿಂದ ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸಲು ಸರ್ಕಾರ ಯಾವ ರೀತಿ ಸಿದ್ಧತೆ ಮಾಡಲಾಗಿದೆ ; ಮಾಡಿದ್ದಲ್ಲಿ ಸರ್ಕಾರ ಯಾವ ಯೋಜನೆ ಹಾಕಿಕೊಂಡಿದೆ ? (ಮಾಹಿತಿ ನೀಡುವುದು)

## ಶಾಲಾ ಶಿಕ್ಷಕರ ನೇಮಕಾತಿಯ ಕುರಿತು

**ಶ್ರೀ ಶರಣಗೌಡ ಬಯ್ಯಾಪುರ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೪೦ (೭೫೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ದೈಹಿಕ ಶಿಕ್ಷಕರು, ಚಿತ್ರಕಲಾ ಶಿಕ್ಷಕರು ಸಂಗೀತ ಶಿಕ್ಷಕರು ಹಾಗೂ ಕ್ರಾಫ್ಟ್ ಶಿಕ್ಷಕರ ಸಂಖ್ಯೆಯೆಷ್ಟು ; ಇಲ್ಲಿ ಮಂಜೂರಾದ ಹುದ್ದೆಗಳೆಷ್ಟು ; ಖಾಲಿಯಿರುವ ಹುದ್ದೆಗಳೆಷ್ಟು ; (ಮಾಹಿತಿ ಒದಗಿಸುವುದು)

(ಆ) ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ದೈಹಿಕ ಶಿಕ್ಷಕರು, ಸಂಗೀತ ಶಿಕ್ಷಕರು ಮತ್ತು ಕ್ರಾಫ್ಟ್ ಶಿಕ್ಷಕರ ಕೊರತೆಯ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಯಾವಾಗ ಕ್ರಮವಹಿಸುವುದು ; ಈ ಕುರಿತು ಶಿಕ್ಷಣ ಇಲಾಖೆಯು ಆರ್ಥಿಕ ಇಲಾಖೆಯು ಅನುಮೋದನೆಗೆ ಪ್ರಸ್ತಾವನೆಯನ್ನು ಸಲ್ಲಿಸಿದೆಯೇ ; ಹಾಗಿದ್ದಲ್ಲಿ, ಸದರಿ ಪ್ರಸ್ತಾವನೆ ಯಾವ ಹಂತದಲ್ಲಿದೆ ?

## ಬೆಂಗಳೂರಿನಲ್ಲಿ ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿನ ಶಿಥಿಲಾವಸ್ಥೆಯಲ್ಲಿರುವ ಕಂಬಗಳನ್ನು ಸ್ಥಳಾಂತರಿಸುವ ಬಗ್ಗೆ

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :-**

೭೪೧ (೭೭೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರದಲ್ಲಿ ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿ ಬಹಳ ವರ್ಷಗಳ ಹಿಂದೆ ಅಳವಡಿಸಲಾದ ವಿದ್ಯುತ್ ಕಂಬಗಳು ತುಕ್ಕು ಹಿಡಿದು ಬೀಳುತ್ತಿದ್ದು, ಅನೇಕ ಅವಘಡಗಳು ಸಂಭವಿಸುತ್ತಿರುವುದು ಸರ್ಕಾರದ ಗಮಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸದರಿ ಕಂಬಗಳನ್ನು ಸ್ಥಳಾಂತರಿಸದಿರಲು ಕಾರಣಗಳೇನು ;

(ಆ) ಬೆಂಗಳೂರು ನಗರದ ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿನ ಯಶವಂತಪುರ ಹೋಬಳಿಯ ಮಲ್ಲಸಂದ್ರ ಮುಖ್ಯರಸ್ತೆಯ ೦೫ನೇ ಅಡ್ಡ ರಸ್ತೆಯ ಅರುಣೋದಯ ಆಸ್ಪತ್ರೆಯಿಂದ ಮನೆ ಸಂಖ್ಯೆ: ೦೯ ರವರೆಗೆ ಅವೈಜ್ಞಾನಿಕವಾಗಿ ಅಳವಡಿಸಲಾದ ವಿದ್ಯುತ್ ಕಂಬಗಳನ್ನು ಮನೆಗಳ ಬಾಗಿಲುಗಳ ಮುಂದೆಯೇ ಅಳವಡಿಕೆ ಮಾಡಿದ್ದು ಇವುಗಳನ್ನು ಸ್ಥಳಾಂತರಿಸಿ ಹೊಸ ಕಂಬಗಳನ್ನು ಅಳವಡಿಸಲು ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಅವೈಜ್ಞಾನಿಕವಾಗಿ ಮನೆ ಸಂಖ್ಯೆ ೯ ಮನೆಬಾಗಿಲು ಮುಂದೆ ಅಳವಡಿಸಲಾದ ಶಿಥಿಲಾವಸ್ಥೆಯಲ್ಲಿರುವ ವಿದ್ಯುತ್ ಕಂಬಕ್ಕೆ ಬೇರೊಂದು ಕಂಬವನ್ನು ಆಸರೆಯಾಗಿ ಅಳವಡಿಸಿದ್ದು, ಒಂದು ವೇಳೆ ಅವಘಡ ಸಂಭವಿಸಿದ್ದಲ್ಲಿ ಇದಕ್ಕೆ ಯಾವ ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡಲಾಗುವುದು ;

(ಈ) ಈ ೫ನೇ ಅಡ್ಡರಸ್ತೆಯಲ್ಲಿನ ಶಿಥಿಲಾವಸ್ಥೆಯಲ್ಲಿರುವ ಕಂಬಗಳನ್ನು ಯಾವ ಕಾಲಮಿತಿಯಲ್ಲಿ ಸ್ಥಳಾಂತರಿಸಿ ಹೊಸ ವಿದ್ಯುತ್ ಕಂಬಗಳನ್ನು ಅಳವಡಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ಅಲ್ಪಾವಧಿ ವಿದ್ಯುತ್ ಟೆಂಡರ್‌ನ ವಿಳಂಬದಿಂದ ಆರ್ಥಿಕ ನಷ್ಟವಾಗಿರುವ ಕುರಿತು

**ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) :-**

೭೪೨ (೭೯೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಡಿಮೆ ದರದಲ್ಲಿ ವಿದ್ಯುತ್ ಖರೀದಿಸುವ ಸಲುವಾಗಿ ಅಲ್ಪಾವಧಿಗೆ ಟೆಂಡರ್ ಅನ್ನು ಎಷ್ಟು ತಿಂಗಳಿಗೊಮ್ಮೆ ಕರೆಯಲಾಗುತ್ತದೆ ;

(ಆ) ೨೦.೧೧.೨೦೨೩ ರಿಂದ ೩೧.೦೫.೨೦೨೪ರ ಅವಧಿಗೆ ವಿದ್ಯುತ್ ಖರೀದಿಸಲು ಟೆಂಡರ್ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿದೆಯೇ ; ಟೆಂಡರ್ ಕರೆಯದಿದ್ದಲ್ಲಿ ಮುಂದೂಡಲು ಕಾರಣಗಳೇನು ; (ಸಂಪೂರ್ಣ ಮಾಹಿತಿಯನ್ನು ನೀಡುವುದು)

(ಇ) ಸದರಿ ಟೆಂಡರ್ ಪ್ರಕ್ರಿಯೆಯನ್ನು ಮುಂದೂಡಿದ್ದರಿಂದ ಸರ್ಕಾರಕ್ಕೆ ಉಂಟಾದ ಆರ್ಥಿಕ ಹೊರೆ ಎಷ್ಟು ; ಈ ಅವಧಿಯಲ್ಲಾದ ಆರ್ಥಿಕ ಹೊರೆಯನ್ನು ಹೇಗೆ ಸರಿದೂಗಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಅಲ್ಪಾವಧಿಗೆ ವಿದ್ಯುತ್ ಖರೀದಿಸಲು ಇಂಧನ ಇಲಾಖೆ ಅನುಸರಿಸಿದ ವಿಳಂಬಕ್ಕೆ ಸಿಎಜಿ ರವರು ಆಕ್ಷೇಪಣೆಯಲ್ಲಿ ತಿಳಿಸಿದ ಪ್ರಮುಖ ಅಂಶಗಳಾವುವು ? (ಪತ್ರದ ಪ್ರತಿಯನ್ನು ನೀಡುವುದು)

## ಬಳ್ಳಾರಿ ಸರ್ಕಾರಿ ಆಸ್ಪತ್ರೆಗಳಲ್ಲಿ ಬಾಣಂತಿಯರ ಸಾವಾಗಿರುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೭೪೩ (೭೭೬) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿ ಜಿಲ್ಲೆಯಲ್ಲಿರುವ ಸರ್ಕಾರಿ ಆಸ್ಪತ್ರೆಗಳ ಸಂಖ್ಯೆ ಎಷ್ಟು ; ಅಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು)

(ಆ) ಬಳ್ಳಾರಿ ಜಿಲ್ಲೆಯಲ್ಲಿ ಕಳೆದ ಕೆಲವು ದಿನಗಳಿಂದ ಬಾಣಂತಿಯರ ಸಾವಾಗುತ್ತಿರುವುದು ಸರಕಾರದ ಗಮನಕ್ಕೆ ಬಂದಿದೆಯೇ ;

(ಇ) ಕಳೆದ ೦೨ ತಿಂಗಳುಗಳಿಂದ ಒಟ್ಟು ಎಷ್ಟು ಜನ ಬಾಣಂತಿಯರು ಸಾವಿಗೀಡಾಗಿದ್ದಾರೆ ;

(ಈ) ಇತ್ತೀಚಿನ ದಿನಗಳಲ್ಲಿ ಬಳ್ಳಾರಿ ಜಿಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿಯೇ ಬಾಣಂತಿಯರ ಸಾವು ಸಂಭವಿಸುತ್ತಿರುವುದಕ್ಕೆ ಕಾರಣಗಳೇನು ; ಈ ಕುರಿತು ಸರ್ಕಾರ ಯಾವ ರೀತಿ ಕ್ರಮ ಕೈಗೊಳ್ಳುತ್ತದೆ ಹಾಗೂ ಇದಕ್ಕೆ ಸಂಬಂಧ ಪಟ್ಟ ವೈದ್ಯಾಧಿಕಾರಿಗಳ ಮೇಲೆ ಇಲ್ಲಿಯವರೆಗೆ ಯಾವ ಕ್ರಮ ಕೈಗೊಳ್ಳಲಾಗಿದೆ ? (ಪೂರ್ಣ ಮಾಹಿತಿ ನೀಡುವುದು)

## ವಾಜಪೇಯಿ ಆರೋಗ್ಯಶ್ರೀ ಯೋಜನೆ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೭೪೪ (೭೭೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಾಜಪೇಯಿ ಆರೋಗ್ಯಶ್ರೀ ಯೋಜನೆ ಜಾರಿಯಲ್ಲಿದೆಯೇ ; ಈ ಯೋಜನೆಗೆ ಅರ್ಹರು ಯಾರು ; (ವಿವರ ನೀಡುವುದು)

(ಆ) ಕಲಬುರಗಿ ಜಿಲ್ಲೆಯ ವಿವಿಧ ಖಾಸಗಿ ಆಸ್ಪತ್ರೆಗಳಿಗೆ ಈ ಯೋಜನೆಯಿಂದ ಇಲ್ಲಿಯವರೆಗೆ ಬರಬೇಕಾದ ಬಾಕಿ ಮೊತ್ತ ಎಷ್ಟು ? (ಆಸ್ಪತ್ರೆಗಳವಾರು ಮಾಹಿತಿ ನೀಡುವುದು)

## ಸರ್ಕಾರಿ ಪ್ರಾಥಮಿಕ/ಪ್ರೌಢ ಶಾಲೆಗಳಲ್ಲಿ ದೈಹಿಕ ಶಿಕ್ಷಕರ ನೇಮಕಾತಿ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೭೪೫ (೭೭೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸುಮಾರು 12 ವರ್ಷಗಳಿಂದ ಸರ್ಕಾರಿ ಪ್ರಾಥಮಿಕ/ ಪ್ರೌಢ ಶಾಲೆಗಳಲ್ಲಿ ದೈಹಿಕ ಶಿಕ್ಷಕರ ನೇಮಕಾತಿಗಳನ್ನು ಮಾಡಿಕೊಳ್ಳದಿರುವುದು ನಿಜವೇ ; ಹಾಗಿದ್ದರೆ, ಇದಕ್ಕೆ ಇರುವ ಅಡೆತಡೆಗಳೇನು ;

(ಆ) ಸದ್ಯ ಕರ್ತವ್ಯ ನಿರ್ವಹಿಸುತ್ತಿರುವ ದೈಹಿಕ ಶಿಕ್ಷಕರುಗಳ ಸಂಖ್ಯೆ ಎಷ್ಟು ; ಪ್ರಾಥಮಿಕ/ಪ್ರೌಢ ಶಾಲೆಗಳ ಶಿಕ್ಷಕರುಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು)

(ಇ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿನ ದೈಹಿಕ ಶಿಕ್ಷಣ ಉಪನ್ಯಾಸಕರುಗಳ ಸಂಖ್ಯೆ ಎಷ್ಟು ; ವಿವರವಾದ ತಾಲ್ಲೂಕುವಾರು ಮಾಹಿತಿ ನೀಡುವುದು ;

(ಈ) ಈ ಸರ್ಕಾರಿ ಶಾಲೆಗಳಲ್ಲಿ ಮಂಜೂರಾಗಿ ನಿವೃತ್ತಿ ಹೊಂದಿದ ದೈಹಿಕ ಶಿಕ್ಷಕರ ಹುದ್ದೆಗಳು ಭರ್ತಿ ಮಾಡಲು ಸರ್ಕಾರ ಚಿಂತನೆ ನಡೆಸಿದೆಯೇ ; ಹಾಗಿದ್ದಲ್ಲಿ ಈ ಬಗ್ಗೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ;

(ಉ) ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿಯಿಂದ ತೆರವಾಗಿರುವ ದೈಹಿಕ ಶಿಕ್ಷಣ ಉಪನ್ಯಾಸಕರನ್ನು ನೇಮಕಾತಿ ಮಾಡಿಕೊಳ್ಳದಂತೆ ಆರ್ಥಿಕ ಇಲಾಖೆಯಿಂದ ಟಿಪ್ಪಣಿ ರೂಪದಲ್ಲಿ ಆದೇಶ ಬಂದಿದೆಯೇ ; ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ನಡೆಸುವ ಪರೀಕ್ಷೆಗಳ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೭೪೬ (೮೫೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಯಾವ ಯಾವ ಪರೀಕ್ಷೆಗಳನ್ನು ನಡೆಸುತ್ತದೆ ; ಕಳೆದ ಒಂದು ವರ್ಷದಲ್ಲಿ ರಾಜ್ಯ ಸರ್ಕಾರ ವಿವಿಧ ಹುದ್ದೆಗಳ ನೇಮಕಾತಿಗಾಗಿ ಪ್ರಾಧಿಕಾರಕ್ಕೆ ಬಂದಿರುವ ಪ್ರಾಸ್ತಾವನೆಗಳು ಯಾವುವು ;

(ಆ) ಕಳೆದ ಒಂದು ವರ್ಷದಲ್ಲಿ ಪ್ರಾಧಿಕಾರದಿಂದ ಯಾವ ಯಾವ ಹುದ್ದೆಗಳ ನೇಮಕಾತಿಗಾಗಿ ಅಧಿಸೂಚನೆಗಳನ್ನು ಹೊರಡಿಸಲಾಗಿದೆ ; ಈ ಅಧಿಸೂಚನೆಗಳಿಗೆ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು ಮತ್ತು ಈ ಅರ್ಜಿಗಳಿಂದ ಸಂಗ್ರಹವಾದ ಒಟ್ಟು ಶುಲ್ಕದ ಮೊತ್ತ ಎಷ್ಟು ; (ಎಲ್ಲಾ ಅಧಿಸೂಚನೆಗಳವಾರು ವಿವರವಾದ ಮಾಹಿತಿಯನ್ನು ಒದಗಿಸುವುದು)

(ಇ) ನೇಮಕಾತಿ ಹಂತದಲ್ಲಿರುವ ಅಧಿಸೂಚನೆಗಳು ಯಾವುವು ; ಪರೀಕ್ಷೆ ಪ್ರಕ್ರಿಯೆಗಳು ಯಾವ ಹಂತದಲ್ಲಿವೇ ಹಾಗೂ ಯಾವ ಕಾಲಮಿತಿಯಲ್ಲಿ ಈ ನೇಮಕಾತಿಗಳನ್ನು ಪೂರ್ಣಗೊಳಿಸಲಾಗುವುದು ;

(ಈ) ಪ್ರಾಧಿಕಾರವು ಎಲ್ಲಾ ಪರೀಕ್ಷೆಗಳ ಫಲಿತಾಂಶಗಳನ್ನು ತ್ವರಿತಗತಿಯಲ್ಲಿ ಬಿಡುಗಡೆ ಮಾಡಲು ಕೈಗೊಂಡ ಕ್ರಮಗಳೇನು ಹಾಗೂ ಪ್ರತಿ ಪರೀಕ್ಷೆಯಲ್ಲಿ ಅಭ್ಯರ್ಥಿಗಳ ಪರೀಕ್ಷಾ ಕೇಂದ್ರಗಳನ್ನು ಯಾವ ಮಾನದಂಡದಡಿಯಲ್ಲಿ ನಿಗದಿಪಡಿಸಲಾಗುತ್ತದೆ ?

## ಅರಣ್ಯ ಇಲಾಖೆಯಲ್ಲಿ ಉದ್ಯೋಗದಲ್ಲಿರುವ ಬುಡಕಟ್ಟು ಜನಾಂಗಗಳ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೭೪೭ (೮೪೨) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಅರಣ್ಯ ಇಲಾಖೆಯಲ್ಲಿ ಎಷ್ಟು ಜನ ಬುಡಕಟ್ಟು ಜನಾಂಗದವರು ಸರ್ಕಾರಿ ಉದ್ಯೋಗದಲ್ಲಿದ್ದಾರೆ ; (ವೃಂದವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅರಣ್ಯದ ಕುರಿತು ಹೆಚ್ಚಿನ ಜ್ಞಾನ ಉಳ್ಳ ಬುಡಕಟ್ಟು ಹಾಗೂ ವಿದ್ಯಾವಂತ ಯುವಕರಿಗಾಗಿ ಅರಣ್ಯ ಇಲಾಖೆಯಲ್ಲಿ ಯಾವುದಾದರೂ ವಿಶೇಷ ಮೀಸಲಾತಿ ಇದೆಯೇ: ಇಲ್ಲದಿದ್ದಲ್ಲಿ ಮೀಸಲಾತಿ ನೀಡುವ ಕುರಿತು ಸರ್ಕರದ ಮುಂದಿನ ನಿರ್ಧಾರಗಳೇನು ; (ತಿಳಿಸುವುದು)

(ಇ) ಅರಣ್ಯ ಮತ್ತು ಕಾಡು ಪ್ರಾಣಿಗಳ ರಕ್ಷಣೆಗಾಗಿ ಅರಣ್ಯ ಇಲಾಖೆ ಹಮ್ಮಿಕೊಳ್ಳುವ ಜನಜಾಗೃತಿ ಕಾರ್ಯಕ್ರಮಗಳು ಯಾವುವು ಮತ್ತು ಕಾರ್ಯಕ್ರಮದ ರೂಪುರೇಷೆಗಳಾವುವು ? (ವಿವರ ನೀಡುವುದು)

## ಕಾರವಾರ ಜಿಲ್ಲೆಯಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರ ಕೊರತೆ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೭೪೮ (೮೪೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉತ್ತರ ಕನ್ನಡ ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಾರವಾರ ವಿಜ್ಞಾನಗಳ ಸಂಸ್ಥೆಯ (ಕೀಮ್ಸ್) ೧೧ ತಾಲ್ಲೂಕು ಆಸ್ಪತ್ರೆಗಳಲ್ಲಿ ೧೦೪ ತಜ್ಞ ವೈದ್ಯರ ಪೈಕಿ ಕೇವಲ ೬೮ ವೈದರು ಮಾತ್ರ ಕಾರ್ಯನಿರ್ವಹಿಸತ್ತಿದ್ದು ಅನಸ್ತೇಶಿಯಾ, ಮೂಳೇ ತಜ್ಞರು, ಮಕ್ಕಳ ತಜ್ಞರು, ಚರ್ಮರೋಗ ತಜ್ಞರು ಸೇರಿದಂತೆ ೩೬ ತಜ್ಞ ವೈದ್ಯರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸರ್ಕಾರವು ಕಾರವಾರ ಜಿಲ್ಲೆಯಲ್ಲಿರುವ ಖಾಲಿ ತಜ್ಞ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದುಕೊಳ್ಳುವ ಕ್ರಮವೇನು ; ಸರ್ಕಾರದ ಸ್ಪಷ್ಟ ನಿಲುವೇನು ?

# ಬೆಳಗಾವಿ ಜಿಲ್ಲೆಯ ಪಾರಂಪಾರಿಕ ಅರಣ್ಯವಾಸಿಗಳು ಎದುರಿಸುತ್ತಿರುವ ಸಮಸ್ಯೆಗಳ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೭೪೯ (೮೪೪) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆ, ಖಾನಾಪೂರ ತಾಲ್ಲೂಕಿನಲ್ಲಿ ಸ್ವಾತಂತ್ರ್ಯ ಪೂರ್ವದಿಂದಲೂ ಅರಣ್ಯ ಪ್ರದೇಶದಲ್ಲಿ ಹೈನುಗಾರಿಕೆ ಉದ್ಯೋಗವನ್ನು ಮಾಡಿಕೊಂಡು ಬಂದಿರುವ ಪಾರಂಪಾರಿಕ ಅರಣ್ಯವಾಸಿಗಳಾದ ಗೌಳಿ ಜನಾಂಗದ ೨೫ ಕ್ಕೂ ಹೆಚ್ಚು ಹಳ್ಳಿಗಳಿಗೆ ಮೂಲಭೂತ ಸೌಕರ್ಯಗಳನ್ನು ಪಡೆಯಲು ಅರಣ್ಯ ಇಲಾಖೆಯವರು ಅಡ್ಡಿಪಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಸದರಿ ಜನಾಂಗದವರು ದನಕರುಗಳನ್ನು ಕಾಡಿನಲ್ಲಿ ಮೇಯಿಸಲು ಹೋದ ಸಂದರ್ಭದಲ್ಲಿ ಹುಲಿ, ಚಿರತೆ ಮುಂತಾದ ಕಾಡುಪ್ರಾಣಿಗಳ ದಾಳಿಗೆ ತುತ್ತಾದ ದನಕರುಗಳಿಗೆ ಅರಣ್ಯ ಇಲಾಖೆ ಪರಿಹಾರ ನೀಡುತ್ತಿದ್ದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ; (ವಿವರ ನೀಡುವುದು)

(ಇ) ಉತ್ತರ ಕನ್ನಡ, ಧಾರವಾಡ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಎಷ್ಟು ಫಾರೆಸ್ಟ್ ಕ್ಲಿಯರೆನ್ಸ್ ಅರ್ಜಿಗಳನ್ನು ಸ್ವೀಕರಿಸಲಾಗಿದೆ ಹಾಗೂ ಎಷ್ಟು ಅರ್ಜಿಗಳನ್ನು ಇತ್ಯರ್ಥಪಡಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಅರಣ್ಯವಾಸಿಗಳು ಮೂಲಭೂತ ಸೌಕರ್ಯಗಳಿಗಾಗಿ ಫಾರೆಸ್ಟ್ ಕ್ಲಿಯರೆನ್ಸ್ ಅರ್ಜಿಗಳನ್ನು ಹಾಕುವ ವಿಧಾನ ಹಾಗೂ ಮಾನದಂಡಗಳೇನು? (ಸಂಪೂರ್ಣವಾಗಿ ವಿವರಿಸಿ)

## ಖಾನಾಪುರ ತಾಲ್ಲೂಕಿನಲ್ಲಿ ಬಿ.ಎಸ್.ಎನ್.ಎಲ್ ಟವರ್ ಕುಳಿಸಲು ಅರಣ್ಯ ಇಲಾಖೆ ಅಡ್ಡಿ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ಧಿ (ನಾಮನಿರ್ದೇಶನ ಹೊಂದಿದವರು) :-**

೭೫೦ (೮೪೫) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆಯ ಖಾನಾಪುರ ತಾಲೂಕಿನ ವಿವಿಧ ಗ್ರಾಮಗಳಿಗೆ ಮೊಬೈಲ್ ಸಂಪರ್ಕ ನೀಡುವ ನಿಟ್ಟಿನಲ್ಲಿ ಮೊಬೈಲ್ ಟವರ್ ಅಳವಡಿಸುವ ಮತ್ತು ಒಎಫ್ಸಿ ಕೇಬಲ್ ಅಳವಡಿಸುವುದಕ್ಕೆ ಅರಣ್ಯ ಇಲಾಖೆ ಅಡ್ಡಿಪಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಾರಣಗಳನ್ನು ತಿಳಿಸುವುದು ;

(ಆ) ಸದರಿ ಉದ್ದೇಶಕ್ಕಾಗಿ ಬಿ.ಎಸ್.ಎನ್.ಎಲ್ ಕಂಪನಿಯವರು ಅರಣ್ಯ ಮತ್ತು ವನ್ಯಜೀವಿ ಅನುಮೋದನೆ ಕೋರಿ ಪ್ರಸ್ತಾವನೆ ಸಲ್ಲಿಸಿರುವ ವಿವಿಧ ಗ್ರಾಮಗಳಾವುವು ; (ಪಟ್ಟಿ ಒದಗಿಸುವುದು)

(ಇ) ಪ್ರತಿಯೊಂದು ಪ್ರಸ್ತಾವನೆಗೂ ಬೆಳಗಾವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಮಾಡಿರುವ ಶಿಫಾರಸ್ಸು ಪತ್ರಗಳನ್ನು ಒದಗಿಸುವುದು;

(ಈ) ಪ್ರಸ್ತಾವನೆಗಳು ಪ್ರಸ್ತುತ ಯಾವ ಹಂತದಲ್ಲಿದೆ ? (ವಿವರ ಒದಗಿಸುವುದು)

## ಬೆಳಗಾವಿ ಜಿಲ್ಲೆ, ಖಾನಾಪುರ ತಾಲ್ಲೂಕಿನ ಕೆಲವು ಮರಾಠಿ ಶಾಲೆಗಳನ್ನು ಕನ್ನಡ ಮಾಡುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೭೫೧ (೮೪೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆ, ಖಾನಾಪೂರ ತಾಲ್ಲೂಕಿನಲ್ಲಿ ಕೆಲವು ಕಡೆಗಳಲ್ಲಿ ಮರಾಠಿ ಶಾಲೆಗಳ ಬದಲು ಕನ್ನಡ ಮಾಧ್ಯಮದಲ್ಲಿ ತರಗತಿಗಳನ್ನು ಪ್ರಾರಂಭಿಸುವಂತೆ ಬೇಡಿಕೆ ಇರುವ ಶಾಲೆಗಳು ಎಷ್ಟು ;

(ಆ) ಖಾನಾಪುರ ತಾಲ್ಲೂಕಿನ ತಾವರಗಟ್ಟಿ ಮತ್ತು ಬಾಳಗುಂದ ಗ್ರಾಮದಲ್ಲಿ ಮರಾಠಿ ಮಾಧ್ಯಮದ ಪ್ರಾಥಮಿಕ ಶಾಲೆಗಳಿದ್ದು ಇಲ್ಲಿನ ೮೦% ಮಕ್ಕಳು ಕನ್ನಡ ಮಾಧ್ಯಮಕ್ಕಾಗಿ ಪಕ್ಕದ ಊರಿಗೆ ಹೋಗುತ್ತಿರುವುದರಿಂದ ಮಕ್ಕಳ ಪಾಲಕರು ಕೂಡ ಸದರಿ ಶಾಲೆಗಳನ್ನು ಕನ್ನಡ ಮಾಧ್ಯಮದಲ್ಲಿ ಪ್ರಾರಂಭಿಸುವಂತೆ ಕೋರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಮುಂದಿನ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರವು ಸದರಿ ಶಾಲೆಗಳನ್ನು ಕನ್ನಡ ಮಾಧ್ಯಮದಲ್ಲಿ ಪ್ರಾರಂಭಿಸಲು ಕ್ರಮ ತೆಗೆದುಕೊಳ್ಳುವುದೇ ? (ವಿವರ ನೀಡುವುದು)

## ರಾಜ್ಯದಲ್ಲಿರುವ ಅನುದಾನಿತ ಶಾಲೆಗಳ ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್.) (ಶಿಕ್ಷಕರ ಕ್ಷೇತ್ರ) :-**

೭೫೨ (೭೮೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಅನುದಾನಿತ ಪ್ರಾಥಮಿಕ ಶಾಲೆಗಳು ಎಷ್ಟು; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಶಾಲೆಗಳಿಗೆ ಮಂಜೂರಾಗಿರುವ ಶಿಕ್ಷಕರ ಸಂಖ್ಯೆ ಎಷ್ಟು; ಹಾಗೂ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು;

(ಇ) ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ ; ಇಲ್ಲದೇ ಇದ್ದಲ್ಲಿ, ಕಾರಣಗಳೇನು ;

(ಈ) ಈ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಹೆಚ್ಚು ಇದ್ದರೂ ಸಹ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು ;

(ಉ) ಅನುದಾನಿತ ಶಾಲೆಗಳ ಮಕ್ಕಳ ಅನುಪಾತ ೩೦, ಹಾಜರಾತಿ ೨೦ ಇರುವುದರಿಂದ ಆಗುತ್ತಿರುವ ತೊಂದರೆಗಳೇನು ?

## ರಾಜ್ಯದಲ್ಲಿರುವ ಪದವಿ ಪೂರ್ವ ಕಾಲೇಜುಗಳ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್.) (ಶಿಕ್ಷಕರ ಕ್ಷೇತ್ರ) :-**

೭೫೩ (೭೮೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಹಾಲಿ ಇರುವ ಪದವಿಪೂರ್ವ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು ; ಈ ಕಾಲೇಜುಗಳಲ್ಲಿ ಇರುವ ಕೋರ್ಸ್‌ಗಳು ಯಾವುವು ಮತ್ತು ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಕೋರ್ಸ್‌ವಾರು, ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಎಲ್ಲಾ ವಿದ್ಯಾರ್ಥಿಗಳಿಗೆ ಅಗತ್ಯವಾಗಿ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ; ಒದಗಿಸಿದ್ದಲ್ಲಿ, ಯಾವ ಯಾವ ಸೌಲಭ್ಯಗಳನ್ನು ಒದಗಿಸಲಾಗಿದೆ ;

(ಇ) ಪ್ರಸ್ತುತ ಅವಧಿಯಲ್ಲಿ ಬೇಕಾಗಿರುವ ಶಿಕ್ಷಣದ ಜೊತೆಗೆ ಕಂಪ್ಯೂಟರ್ ಶಿಕ್ಷಣವನ್ನು ಎಲ್ಲಾ ಕೋರ್ಸುಗಳಿಗೆ ಸೇರಿಸುವ ಉದ್ದೇಶ ಸರ್ಕಾರಕ್ಕಿದೆಯೇ ?

## ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರಿಗೆ ಆಗುತ್ತಿರುವ ತೊಂದರೆಗಳ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್.) (ಶಿಕ್ಷಕರ ಕ್ಷೇತ್ರ) :-**

೭೫೪ (೭೮೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಮತ್ತು ಉಪನ್ಯಾಸಕರ ಸಂಖ್ಯೆ ಎಷ್ಟು ;

(ಆ) ಈ ಶಿಕ್ಷಕರು ಮತ್ತು ಉಪನ್ಯಾಸಕರುಗಳಿಗೆ ಮಾಹೆಯಾನ ವೇತನ ನಿಗಧಿತ ಸಮಯಕ್ಕೆ ಸರಿಯಾಗಿ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಪ್ರತಿ ತಿಂಗಳ ಕೊನೆಯ ದಿನಾಂಕ ವೇತನ ಪಾವತಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು ;

(ಈ) ತೊಂದರೆಗಳಿದ್ದಲ್ಲಿ, ಅವುಗಳನ್ನು ಸರಿಪಡಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಉ) ಜ್ಯೋತಿ ಸಂಜೀವಿನಿ ಅಥವಾ ಇನ್ನಾವುದೇ ಆರೋಗ್ಯ ವಿಮೆ ಯೋಜನೆಗೆ ಅನುದಾನಿತ ಶಿಕ್ಷಕರು ಒಳಪಡುತ್ತಾರೆಯೇ ; ಒಳಪಡದಿದ್ದರೇ, ಕಾರಣಗಳೇನು ?

## ಆರೋಗ್ಯ ಇಲಾಖೆಯಡಿ ಬರುವ ಜಿಲ್ಲಾವಾರು ಮತ್ತು ತಾಲ್ಲೂಕುವಾರು ಆಸ್ಪತ್ರೆಗಳ ಮಾಹಿತಿ ನೀಡುವ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್.) (ಶಿಕ್ಷಕರ ಕ್ಷೇತ್ರ) :-**

೭೫೫ (೭೮೭) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಆಸ್ಪತ್ರೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಎಲ್ಲಾ ಆಸ್ಪತ್ರೆಗಳಲ್ಲಿ ಸಾರ್ವಜನಿಕರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ;

(ಇ) ರಾಜ್ಯದ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು ಅಗತ್ಯ ಸಂಖ್ಯೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆಯೇ ;

(ಈ) ಇಲ್ಲದೇ ಇದ್ದಲ್ಲಿ, ಈ ವೈದ್ಯರುಗಳನ್ನು ನೇಮಕಾತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಯಾವಾಗ ನೇಮಕಾತಿ ಮಾಡಲಾಗುವುದು ?

## ಯು.ಯು.ಸಿ.ಎಂ.ಎಸ್ ಪದ್ಧತಿಯಿಂದ ಆಗಿರುವ ಸಮಸ್ಯೆಗಳು ಮತ್ತು ನಿರ್ವಹಣಾ ವೈಫಲ್ಯ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೭೫೬ (೭೬೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸರ್ಕಾರಿ ವಿಶ್ವವಿದ್ಯಾಲಯಗಳು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಏಕೀಕೃತ ಯು.ಯು.ಸಿ.ಎಂ.ಎಸ್ ಪದ್ಧತಿಯಿಂದ

ಪದವಿ/ಸ್ನಾತಕೋತ್ತರ ಪರೀಕ್ಷೆಗಳ ಫಲಿತಾಂಶ ವಿಳಂಬ, ಅಂಕಪಟ್ಟಿಗಳಲ್ಲಿ ಅಂಕಗಳು ಇಲ್ಲದಿರುವುದು ಮತ್ತು ಅಂಕ ಪಟ್ಟಿಗಳೇ ಲಭ್ಯವಾಗದಂತಹ ಸಮಸ್ಯೆಗಳಿಗೆ ಯಾವ ಸುಧಾರಣಾ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಆ) ಡಿಜಿಟಲ್ ವ್ಯವಸ್ಥೆ ಅಳವಡಿಸಬೇಕು ಎಂದು ವಿಶ್ವವಿದ್ಯಾಲಯದಲ್ಲಿ ಯಾವುದೇ ಪೂರ್ವ ಸಿದ್ಧತೆಯಿಲ್ಲದೆ ಜಾರಿಗೊಳಿಸಿರುವುದು ಸಮಾಂಜಸವೆ ; ಈ ಕ್ರಮದಿಂದ ವಿದ್ಯಾರ್ಥಿಗಳ ಭವಿಷ್ಯ ಹಾಳು ಮಾಡಿದಂತಲ್ಲವೇ ;

(ಇ) ಪದವಿ ಪೂರೈಸಿದರೂ ಪದವಿಯು ಇಲ್ಲದೆ, ಅಂಕ ಪಟ್ಟಿಯು ಇಲ್ಲದೆ ಉದ್ಯೋಗ್ಯಕೆ ಅರ್ಜಿ ಹಾಕಲು ಅತಂತ್ರ ಸ್ಥಿತಿ ನಿರ್ಮಾಣ ಮಾಡಿರುವ ಈ ವ್ಯವಸ್ಥೆಯನ್ನು ಹೇಗೆ ಸರಿಪಡಿಸಲಾಗುವುದು ; (ವಿವರ ನೀಡುವುದು)

(ಈ) ಅವ್ಯವಸ್ಥೆ ಆಗರವಾಗಿರುವ ವಿಶ್ವವಿದ್ಯಾಲಯಗಳ ಪರಿಸರದಲ್ಲಿ ಇಂತಹದೊಂದು ಪರಿಸ್ಥಿತಿ ನಿರ್ಮಾಣದಿಂದ ಉನ್ನತ ಶಿಕ್ಷಣ ಕುರಿತು ವಿದ್ಯಾರ್ಥಿಗಳಲ್ಲಿ, ಪಾಲಕರಲ್ಲಿ ವಿಶ್ವಾಸ ಮತ್ತು ಗುಣಮಟ್ಟ ಕಡಿಮೆಯಾಗಿರುವುದು ಇದನ್ನು ಸುಧಾರಿಸಲು ಕೈಗೊಳ್ಳುವ ಕ್ರಮವೇನು ?

## ರಾಜ್ಯದ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಸೀಟ್ ಬ್ಲಾಕಿಂಗ್ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೭೫೭ (೭೬೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪ್ರತಿಷ್ಠಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ KEA ಮುಖಾಂತರ ಪ್ರವೇಶ ಪ್ರಕ್ರಿಯೆ ಸಂದರ್ಭದಲ್ಲಿ ಸೀಟ್ ಬ್ಲಾಕಿಂಗ್ ದಂಧೆ ನಡೆಸುವ ವ್ಯವಸ್ಥಿತ ಜಾಲದ ಕುರಿತು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇಂಜಿನಿಯರಿಂಗ್/ಮೆಡಿಕಲ್ ಕಾಲೇಜುಗಳಲ್ಲಿ ಪ್ರವೇಶಕ್ಕೆ ಸೀಟ್ ಬ್ಲಾಕಿಂಗ್ ವ್ಯವಸ್ಥಿತವಾಗಿ ಹಲವಾರು ವರ್ಷಗಳಿಂದ ನಡೆಯುತ್ತಿದ್ದರು ಸರ್ಕಾರ ಏಕೆ ಕಠಿಣ ಕ್ರಮ ಜರುಗಿಸಿರುವುದಿಲ್ಲ ;

(ಇ) ಸೀಟ್ ಬ್ಲಾಕಿಂಗ್ ದಂಧೆಯಲ್ಲಿ ತೊಡಗಿರುವ ಅಧಿಕಾರಿಗಳು/ ರಾಜಕಾರಣಿಗಳು ಹಣ ಮಾಡುತ್ತಿರುವುದು ಮತ್ತು ಅರ್ಹತೆ ಹೊಂದಿದ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತಿರುವುದರ ಬಗ್ಗೆ ಸರ್ಕಾರ ಕ್ರಮ ವಹಿಸದೆ ಇರಲು ಕಾರಣವೇನು ;

(ಈ) ಹೆಚ್ಚಿನ ಬೇಡಿಕೆ ಇರುವ ಕೋರ್ಸ್‌ಗಳಿಗೆ ಆಯ್ಕೆಯಾಗಿ ಪ್ರವೇಶ ಪಡೆಯದ ವಿದ್ಯಾರ್ಥಿಗಳನ್ನು ಒಳಗೊಂಡು ಈ ದಂಧೆಯಲ್ಲಿ ತೊಡಗಿರುವ ಶಿಕ್ಷಣ ಸಂಸ್ಥೆಗಳ ಮೇಲೆ ಕ್ರಮ ಕೈಗೊಳ್ಳದಿರಲು ಕಾರಣಗಳೇನು ;

(ಉ) ಉನ್ನತ ಶಿಕ್ಷಣ ಇಲಾಖೆಯ/KEA ಅಧಿಕಾರಿಗಳು ನೇರವಾಗಿ ಸೀಟ್ ಬ್ಲಾಕಿಂಗ್ ದಂಧೆಯಲ್ಲಿ ಭಾಗಿಯಾಗಿದ್ದಾರೆ ಎಂದು ಮಾಧ್ಯಮದಲ್ಲಿ ವರದಿಯಾಗುತ್ತಿದ್ದು ಅಂತಹ ಅಧಿಕಾರಿಗಳ ವಿರುದ್ಧ ಸರ್ಕಾರವು ಕ್ರಮ ಕೈಗೊಳ್ಳದಿರಲು ಕಾರಣವೇನು ?

## ಪ್ರಾಥಮಿಕ ಶಾಲಾ ಹಿಂದಿ ಶಿಕ್ಷಕ (೧ ರಿಂದ ೫ನೇ ತರಗತಿ)ರನ್ನು ಪ್ರಾಥಮಿಕ ಶಾಲಾ ಸಾಮಾನ್ಯ ಶಿಕ್ಷಕ (೧ ರಿಂದ ೫ನೇ ತರಗತಿ) ಎಂದು ಪದನಾಮೀಕರಿಸುವ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೭೫೮ (೭೨೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೬ರ ಪೂರ್ವದಲ್ಲಿ ೬ ರಿಂದ ೭ ಮತ್ತು ೮ ನೇ ತರಗತಿಗೆ ನೇಮಕವಾಗಿದ್ದ ಪ್ರಾಥಮಿಕ ಶಾಲಾ ಹಿಂದಿ ಸಹ ಶಿಕ್ಷಕರನ್ನು ಪ್ರಾಥಮಿಕ ಶಾಲಾ ಹಿಂದಿ (ಪಿ.ಎಸ್.ಟಿ ಹಿಂದಿ) (೧ ರಿಂದ ೫ನೇ ತರಗತಿ) ಶಿಕ್ಷಕರೆಂದು ಪದನಾಮೀಕರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪಿ.ಯು.ಸಿ., ಟಿ.ಸಿಹೆಚ್/ಡಿ.ಎಡ್ ವಿದ್ಯಾರ್ಹತೆಯ ಮೇಲೆ ನೇಮಕವಾಗಿರುವ ಪ್ರಾಥಮಿಕ ಶಾಲಾ ಹಿಂದಿ (ಪಿ.ಎಸ್.ಟಿ ಹಿಂದಿ) (೧ ರಿಂದ ೫ನೇ ತರಗತಿ) ಶಿಕ್ಷಕರನ್ನು ೬-೮ನೇ ತರಗತಿಗಳಿಗೆ ಬೋಧನೆ ಮಾಡಲು ಸೂಚಿಸಿರುವುದು ಶಿಕ್ಷಣ ಹಕ್ಕು ಕಾಯಿದೆ-೨೦೦೯ ಮತ್ತು ಎನ್.ಸಿ.ಟಿ. ಇ ಮಾರ್ಗಸೂಚಿಗಳ ಸ್ಪಷ್ಟ ಉಲ್ಲಂಘನೆಯಾಗಿಲ್ಲವೇ ;

(ಇ) ಪ್ರಾಥಮಿಕ ಶಾಲಾ ಹಿಂದಿ ಶಿಕ್ಷಕ (೧ ರಿಂದ ೫ನೇ ತರಗತಿ) ರ ಮತ್ತು ಪ್ರಾಥಮಿಕ ಶಾಲಾ ಸಾಮಾನ್ಯ ಶಿಕ್ಷಕ (೧ ರಿಂದ ೫ನೇ ತರಗತಿ) ರ ಮೂಲ ವಿದ್ಯಾರ್ಹತೆಯೇನು ;

(ಈ) ಈ ರೀತಿ ಪದನಾಮೀಕರಿಸಲು ಯಾವ ನಿಯಮಗಳಲ್ಲಿ ಅವಕಾಶವಿದೆ ಹಾಗೂ ಸದರಿ ಶಿಕ್ಷಕರನ್ನು ಪದನಾಮೀಕರಿಸಲು ನಿಯಮಗಳನ್ನು ಜಾರಿಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿಗಳ ಕೊರತೆ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೭೫೯ (೭೫೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಜಿಲ್ಲಾ, ತಾಲ್ಲೂಕು ಮತ್ತು ಹೋಬಳಿ ಮಟ್ಟದ ಸರ್ಕಾರಿ ಆಸ್ಪತ್ರೆಗಳಲ್ಲಿ ಗ್ರಾಮೀಣ ಪ್ರದೇಶದ ಬಡ ರೋಗಿಗಳಿಗೆ ಖಾಸಗಿ ಮೆಡಿಕಲ್ ಸ್ಟೋರ್‌ಗಳಲ್ಲಿ ಔಷಧಿ ಖರೀದಿಸಲು ವೈದ್ಯರು ಚೀಟಿ ಬರೆದು ಕೊಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸರ್ಕಾರಿ ಆಸ್ಪತ್ರೆಗಳಿಗೆ ಹೋಗುವ ಗ್ರಾಮೀಣ ಪ್ರದೇಶದ ಬಡ ರೋಗಿಗಳು ಔಷಧಿಗಳ ವೆಚ್ಚ ಭರಿಸಲಾಗದೆ, ಅನಾರೋಗ್ಯದಿಂದ ಬಳಲುತ್ತಿರುವುದಕ್ಕೆ ಸರ್ಕಾರವು ಯಾವ ಕ್ರಮಗಳನ್ನು ಕೈಗೊಂಡಿದೆ ;

(ಇ) ಸರ್ಕಾರಿ ಆಸ್ಪತ್ರೆಗಳ ವೈದ್ಯರುಗಳು ಬಡ ರೋಗಿಗಳಿಗೆ ಹೊರಗಡೆ ಔಷಧಿಗಳನ್ನು ಖರೀದಿಸಲು ಅವಕಾಶ ಕೊಡದೆ, ಸಾಧ್ಯವಾದಷ್ಟು ಆಸ್ಪತ್ರೆಯಲ್ಲಿಯೇ ಒದಗಿಸಬೇಕೆಂದು 2017ರಲ್ಲಿನ ಸರ್ಕಾರಿ ಆದೇಶವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸದಿರಲು ಕಾರಣವೇನು ;

(ಈ) ಗ್ರಾಮೀಣ ಪ್ರದೇಶದ ಬಡರೋಗಿಗಳಿಗೆ ಕನಿಷ್ಟ ಔಷಧಿ ಮತ್ತು ಪ್ರಯೋಗಾಲಯಗಳ ಪರೀಕ್ಷೆಗಳನ್ನು ಕೈಗೊಳ್ಳಲು, ಸರ್ಕಾರಿ ಆಸ್ಪತ್ರೆಗಳನ್ನು ಸುಧಾರಿಸಲು ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳು ಹಾಗೂ ಪದವಿ ಪೂರ್ವ ಶಾಲೆಗಳಲ್ಲಿ ದೈಹಿಕ ಶಿಕ್ಷಕರ ನೇಮಕಾತಿ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೭೬೦ (೭೫೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಐದು ವರ್ಷಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಎಷ್ಟು ಜನ ದೈಹಿಕ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ ; (ವಿವರ ನೀಡುವುದು)

(ಆ) ಮಕ್ಕಳ ಆರೋಗ್ಯಕ್ಕೆ ಮತ್ತು ಕ್ರೀಡಾ ಸ್ಪರ್ಧೆಗಳಿಗೆ ಪೂರಕವಾಗುವ ದೈಹಿಕ ಶಿಕ್ಷಕರನ್ನು ನೇಮಕ ಮಾಡಿಕೊಳ್ಳದೆ, ನಿರ್ಲಕ್ಷ್ಯ ತೋರುತ್ತಿರುವುದಕ್ಕೆ ಕಾರಣಗಳೇನು ;

(ಇ) ಆರ್ಥಿಕ ಇಲಾಖೆ ಅನುಮತಿ ಇರುವುದಿಲ್ಲವೆಂದು ನೆಪ ಹೇಳಿ ಇಲಾಖೆ ಸಾವಿರಾರು ದೈಹಿಕ ಶಿಕ್ಷಣ ಪದವಿ ಪಡೆದು ಅವಕಾಶಕ್ಕಾಗಿ ಕಾಯುತ್ತಿರುವ ಯುವಕರ ಭವಿಷ್ಯಕ್ಕೆ ತೊಂದರೆಯುಂಟು ಮಾಡುತ್ತಿರುವುದು ಸರಿಯೇ ;

(ಈ) ಪ್ರಾಥಮಿಕ ಮತ್ತು ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ತಕ್ಷಣವೇ ದೈಹಿಕ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದೇ ?

## ವನ್ಯ ಜೀವಿಗಳ ಸಂರಕ್ಷಣೆಗಾಗಿ ಕೈಗೊಂಡಿರುವ ಕ್ರಮಗಳ ಬಗ್ಗೆ

**ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೭೬೧ (೮೬೦) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅಳಿವಿನ ಅಂಚಿನಲ್ಲಿರುವ ವನ್ಯ ಜೀವಿಗಳು, ಸಸ್ತನಿಗಳು ಹಾಗೂ ಪಕ್ಷಿಗಳು ಯಾವುವೆಂದು ಗುರುತಿಸಲಾಗಿದೆ ಮತ್ತು ಇವುಗಳ ಸಂಖ್ಯೆ ಮತ್ತು ತಾಣಗಳು ಯಾವುವು ಹಾಗೂ ವನ್ಯ ಜೀವಿಗಳ ಸಂಖ್ಯೆ ಎಷ್ಟು ; (ಪೂರ್ಣ ಮಾಹಿತಿ ನೀಡುವುದು)

(ಆ) ಇವುಗಳ ಸಂರಕ್ಷಣೆಗೆ ರಾಜ್ಯ ಸರ್ಕಾರ ಕೈಗೊಂಡಿರುವ ಯೋಜನೆಗಳು ಯಾವುವು ಮತ್ತು ಈ ಯೋಜನೆಗಳ ಅನುಷ್ಠಾನಕ್ಕಾಗಿ ಕಳೆದ ೫ ವರ್ಷಗಳಲ್ಲಿ ಸರ್ಕಾರ ನೀಡಿರುವ ಅನುದಾನವೆಷ್ಟು ಮತ್ತು ಈ ಅನುದಾನವನ್ನು ಯಾವ ರೀತಿ ಸದ್ಬಳಕೆ ಮಾಡಿಕೊಳ್ಳಲಾಗಿದೆ ; (ಕಳೆದ ೫ ವರ್ಷಗಳ ಮಾಹಿತಿಯನ್ನು ಯೋಜನಾವಾರು ನೀಡುವುದು)

(ಇ) ಈ ಯೋಜನೆಗಳಿಗೆ ಕೇಂದ್ರ ಸರ್ಕಾರದಿಂದ ಕಳೆದ ೫ ವರ್ಷಗಳಲ್ಲಿ ರಾಜ್ಯ ಸರ್ಕಾರ ಪಡೆದಿರುವ ಆರ್ಥಿಕ ನೆರವು ಮತ್ತು ಸವಲತ್ತುಗಳು ಯಾವುವು? (ಪೂರ್ಣ ಮಾಹಿತಿ ನೀಡುವುದು)

## ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆಯ ಪ್ರಯೋಜನೆಗಳ ಬಗ್ಗೆ

**ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೭೬೨ (೮೬೧) ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಅಡಿಯಲ್ಲಿ ಕೈಗೊಂಡಿರುವ ಸೇವೆಗಳು ಮತ್ತು ಯೋಜನೆಗಳು ಯಾವುವು ; ಈ ಯೋಜನೆಗಳ ಧ್ಯೆಯೋದ್ದೇಶಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ೫ ವರ್ಷಗಳಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಗೆ ಮೀಸಲಿಡಲಾಗಿರುವ ಅನುದಾನ ಎಷ್ಟು ; (ಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಇಲಾಖೆಯ ವತಿಯಿಂದ ನೀಡುವ ವಿವಿಧ ತರಬೇತಿ ಹಾಗೂ ಯೋಜನೆಗಳು ಯಾವುವು ; (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

(ಈ) ರಾಜ್ಯದಲ್ಲಿ ಕಳೆದ ೫ ವರ್ಷಗಳಲ್ಲಿ ಸದರಿ ಇಲಾಖೆಯ ವತಿಯಿಂದ ಎಷ್ಟು ಜನ ನಿರುದ್ಯೋಗಿಗಳಿಗೆ ತರಬೇತಿಯನ್ನು ನೀಡಲಾಗಿದೆ ; ಹಾಗೂ ತರಬೇತಿಗೆ ಖರ್ಚಾಗಿರುವ ಅನುದಾನವೆಷ್ಟು ಮತ್ತು ತರಬೇತಿ ಹೊಂದಿದ ಎಷ್ಟು ಜನ ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸಲಾಗಿದೆ ? (ವರ್ಷವಾರು, ಜಿಲ್ಲಾವಾರು, ತರಬೇತಿ ಪಡೆದ ಅಭ್ಯರ್ಥಿಗಳ ವಿವರ ಒಳಗೊಂಡಂತೆ ಪೂರ್ಣ ವಿವರ ನೀಡುವುದು)

## ಶಿಥಿಲಾವಸ್ಥೆಯಲ್ಲಿರುವ ಶಾಲಾ ಕೊಠಡಿಗಳ ದುರಸ್ತಿ ಕಾರ್ಯ ಕೈಗೊಳ್ಳುವ ಬಗ್ಗೆ

**ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೭೬೩ (೮೬೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಇರುವ ಒಟ್ಟು ಸರ್ಕಾರಿ ಮತ್ತು ಅನುದಾನಿತ ಶಾಲೆಗಳು ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿರುವ ಈ ಶಾಲೆಗಳಲ್ಲಿ ಎಷ್ಟು ಕಟ್ಟಡ ಹೊಂದಿರುವ ಶಾಲೆಗಳು ಮತ್ತು ಕಟ್ಟಡ ಇಲ್ಲದೇ ಇರುವ ಶಾಲೆಗಳೆಷ್ಟು ; (ಜಿಲ್ಲಾವಾರು, ವರ್ಷವಾರು ಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿರುವ ಈ ಶಾಲೆಗಳಲ್ಲಿ ಎಷ್ಟು ಶಾಲೆಗಳಿಗೆ ಅವಶ್ಯವಿರುವ ಹೆಚ್ಚುವರಿ ಕೊಠಡಿಗಳನ್ನು ನಿರ್ಮಿಸಲಾಗಿದೆ ಮತ್ತು ಬಾಕಿ ಉಳಿದಿರುವ ಕೊಠಡಿಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಎಷ್ಟು ಶಾಲಾ ಕೊಠಡಿಗಳು ಶಿಥಿಲಾವಸ್ಥೆಯಲ್ಲಿವೆ ;

(ಉ) ರಾಜ್ಯದಲ್ಲಿ ಅಗತ್ಯವಿರುವ ಶಾಲಾ ಕಟ್ಟಡಗಳನ್ನು, ಹೆಚ್ಚುವರಿ ಕೊಠಡಿಗಳನ್ನು ಹಾಗೂ ಶಿಥಿಲಾವಸ್ಥೆಯಲ್ಲಿರುವ ಕೊಠಡಿಗಳನ್ನು ದುರಸ್ತಿಗೊಳಿಸಲು ಸರ್ಕಾರ ಕೈಗೊಂಡಿರುವ ಕಾರ್ಯಕ್ರಮಗಳು ಯಾವುವು ಹಾಗೂ ಕಟ್ಟಡಗಳ ನಿರ್ಮಾಣ ಮತ್ತು ದುರಸ್ತಿಗೆ ಸರ್ಕಾರ ನಿಗದಿಪಡಿಸಿ, ಬಿಡುಗಡೆ ಮಾಡಿರುವ ಅನುದಾನವೆಷ್ಟು ? (ಈ ಬಗ್ಗೆ ಕಳೆದ ೫ ವರ್ಷಗಳ ಪೂರ್ಣ ಮಾಹಿತಿ ನೀಡುವುದು)

## ಹದಿಹರೆಯದವರ ಸಾಮಾಜಿಕ ಜಾಲತಾಣಗಳ ಬಳಕೆಗೆ ನಿರ್ಬಂಧ ಹೇರುವ ಬಗ್ಗೆ

**ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೭೬೪ (೮೮೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇತ್ತೀಚೆಗೆ ಶಾಲಾ ಮಕ್ಕಳು ಮತ್ತು ಹದಿಹರೆಯದವರು ಸಾಮಾಜಿಕ ಜಾಲತಾಣಕ್ಕೆ ಸಿಲುಕಿ ರಾಷ್ಟ್ರದ ಮುಖ್ಯವಾಹಿನಿಯಿಂದ ದೂರ ಸರಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಈ ಪಿಡುಗನ್ನು ಹೋಗಲಾಡಿಸಲು ಕೈಗೊಂಡಿರುವ ಕ್ರಮಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಆ) ಇತ್ತೀಚಿನ ವರ್ಷಗಳಲ್ಲಿ Artificial intelligence ಬೆಳವಣಿಗೆ ಜನಜೀವನದ ಪ್ರತಿ ರಂಗದಲ್ಲೂ ಹಬ್ಬುತ್ತಿದ್ದು ಶಾಲಾ ಮಕ್ಕಳಲ್ಲಿ ಸಾವಾಜಿಕ ಜಾಲತಾಣ ಹೊರತುಪಡಿಸಿ Artificial intelligence ಬಗ್ಗೆ ಒಲವು ಮತ್ತು ಆಸಕ್ತಿ ಮೂಡಿಸುವುದು ಅಗತ್ಯವೆಂಬುದನ್ನು ರಾಜ್ಯ ಸರ್ಕಾರ ಮನಗಂಡಿದೆಯೇ ; ಹಾಗಿದ್ದಲ್ಲಿ ಈ ಬಗ್ಗೆ ರೂಪಿಸಿರುವ ಕಾರ್ಯಕ್ರಮಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಇ) ಶಾಲಾ ಮಕ್ಕಳ ಮತ್ತು ಕಿರಿಯರಲ್ಲಿ ಸಾಮಾಜಿಕ ಜಾಲತಾಣ ಉಪಯೋಗಿಸುವ ಬಗ್ಗೆ ಕೇಂದ್ರ ಅಥವಾ ರಾಜ್ಯ ಸರ್ಕಾರಗಳು ವಯಸ್ಸಿನ ನಿರ್ಬಂಧ ಹೇರಲು ನಿರ್ಧರಿಸಿವೆಯೇ ; ಹಾಗಿದ್ದಲ್ಲಿ ಪೂರ್ಣ ಮಾಹಿತಿ ನೀಡುವುದು ?

## ಪ್ರೌಢ ಶಾಲಾ ಮುಖ್ಯ ಶಿಕ್ಷಕರ ವೃಂದದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಣಾಧಿಕಾರಿಗಳ ಬಡ್ತಿ ನೀಡುವ ಬಗ್ಗೆ

**ಡಾ. ಡಿ. ತಿಮ್ಮಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೬೫ (೭೭೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರೌಢ ಶಾಲಾ ಮುಖ್ಯ ಶಿಕ್ಷಕರ ವೃಂದದಲ್ಲಿ ಹಲವಾರು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವವರಿಗೆ ಗ್ರೂಪ್ ಎ ಕಿರಿಯ ಶ್ರೇಣಿ ಶಿಕ್ಷಣಾಧಿಕಾರಿಗಳ ಹುದ್ದೆಗೆ ಬಡ್ತಿ ನೀಡಲು ಕ್ರಮ ವಹಿಸಲಾಗುತ್ತಿದೆಯೇ ;

(ಆ) ನಿಯಮ ೩೨ರಡಿ ಗ್ರೂಪ್ ಎ ಕಿರಿಯ ಶ್ರೇಣಿ ಶಿಕ್ಷಣಾಧಿಕಾರಿಗಳ ಹುದ್ದೆಗೆ ಬಡ್ತಿ ನೀಡಲು ಪೂರ್ವ ಭಾವಿಯಾಗಿ ನಿಯಮಾನುಸಾರ ಅರ್ಹ ಶಿಕ್ಷಕರಿಂದ ಕಾರ್ಯನಿರ್ವಹಣಾ ವರದಿಯುನ್ನು ಸ್ವೀಕರಿಸಲಾಗಿದೆಯೇ ;

(ಇ) ಈ ಸಂಬಂಧ ಇಲಾಖಾ ಮುಂಬಡ್ತಿ ಸಭೆ ನಡೆದಿದೆಯೇ ; ನಡೆದಿದ್ದಲ್ಲಿ, ಸರ್ಕಾರದಿಂದ ಅನುಮೋದನೆ ನೀಡಲು ಯಾವ ಹಂತದಲ್ಲಿದೆ ;

(ಈ) ಇಲಾಖಾ ಮುಂಬಡ್ತಿ ವಿಳಂಬದಿಂದ ಒಂದೇ ಹುದ್ದೆಯಲ್ಲಿ ಸುಮಾರು ೨೫ಕ್ಕೂ ಹೆಚ್ಚು ವರ್ಷಗಳಷ್ಟು ಸೇವೆ ಸಲ್ಲಿಸಿ ನಿವೃತ್ತಿ ಅಂಚಿನಲ್ಲಿರುವ ಶಿಕ್ಷಕರಿಗೆ ಆಗುವ ಬಡ್ತಿ ಸೇವಾವಧಿ ಹಿರಿತನಕ್ಕೆ ಆಗುವ ತೊಂದರೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಮುಂಬಡ್ತಿ ನೀಡಲು ತೆಗೆದುಕೊಂಡಿರುವ ಕ್ರಮವೇನು ?

## ನಕಲಿ ಡಾಕ್ಟರೇಟ್ ಪದವಿ ಕುರಿತು

**ಶ್ರೀ ಅಡಗೂರು ಹೆಚ್.ವಿಶ್ವನಾಥ್ (ನಾಮನಿರ್ದೇಶನ ಹೊಂದಿದವರು):-**

೭೬೬ (೭೧೫) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಲಯನ್ಸ್ ವಿಶ್ವವಿದ್ಯಾಲಯದಿಂದ ಅಕ್ರಮವಾಗಿ ಡಾಕ್ಟರೇಟ್ ಪದವಿಯನ್ನು ಪಡೆದಿರುವ ಈ ಹಿಂದಿನ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿಯವರ ಆರೋಪಕ್ಕೆ ಸಂಬಂಧಿಸಿದಂತೆ ವಿಸ್ತೃತವಾದ ತನಿಖೆ ನಡೆಸಲು ತಜ್ಞರ ಸಮಿತಿಯನ್ನು ರಚಿಸಿ ಶಿಕ್ಷಣ ಇಲಾಖೆಯು ದಿನಾಂಕ: ೨೬-೦೩-೨೦೨೪ರ ಆದೇಶ ಹೊರಡಿಸಿದ್ದು ಸದರಿ ಸಮಿತಿಯು ಸರ್ಕಾರಕ್ಕೆ ವರದಿ ನೀಡಿದೆಯೇ ;

(ಆ) ಸದರಿ ವರದಿಯನ್ನು ಕೂಲಂಕಷವಾಗಿ ಪರಿಶೀಲನೆ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಸದರಿ ವರದಿಯು ಸತ್ಯಕ್ಕೆ ದೂರವಾಗಿರುವುದಾಗಿ ಸರ್ಕಾರಕ್ಕೆ ದೂರು ಬಂದಿದೆಯೇ ; ಯಾವಾಗ ಬಂದಿದೆ ; ಬಂದಿದ್ದಲ್ಲಿ, ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಡೀಮ್ಡ್ ಅರಣ್ಯಗಳ ಕುರಿತು

**ಡಾ. ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೭೬೭ (೭೯೧) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಡೀಮ್ಡ್ ಅರಣ್ಯಗಳನ್ನು ಗುರುತಿಸಲು ಅನುಸರಿಸುವ ಮಾನದಂಡಗಳೇನು ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಈವರೆಗೆ ಎಷ್ಟು ಎಕರೆ ಡೀಮ್ಡ್ ಅರಣ್ಯಗಳನ್ನು ಗುರುತಿಸಲಾಗಿದೆ ; (ಜಿಲ್ಲಾವಾರು ಮತ್ತು ಇಲಾಖಾವಾರು ಮಾಹಿತಿ ನೀಡುವುದು)

(ಇ) ಡೀಮ್ಡ್ ಅರಣ್ಯಗಳ ನಿರ್ವಹಣೆಗೆ ಸರ್ಕಾರದ ಕಾರ್ಯನೀತಿ ಏನು ? (ವಿವರ ನೀಡುವುದು)

## ಸ್ಮಾರ್ಟ್ ಮೀಟರ್‌ಗಳನ್ನು ಅಳವಡಿಸುವ ಕುರಿತು

**ಡಾ. ಯತೀಂದ್ರ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೭೬೮ (೭೯೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಈವರೆಗೆ ಎಷ್ಟು ಸ್ಮಾರ್ಟ್ ಮೀಟರ್‌ಗಳನ್ನು ಅಳವಡಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸ್ಮಾರ್ಟ್ ಮೀಟರ್‌ಗಳನ್ನು ಅಳವಡಿಸಲು ವರ್ಷವಾರು ಗುರಿ ನಿಗದಿಪಡಿಸಲಾಗಿದೆಯೇ ; (ವರ್ಷವಾರು ಮಾಹಿತಿ ನೀಡುವುದು)

(ಇ) ಕಳೆದ ಐದು ವರ್ಷಗಳಲ್ಲಿ ಈ ಕುರಿತು ಎಷ್ಟು ಅನುದಾನ ಒದಗಿಸಲಾಗಿದೆ ; ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದ ಪಾಲೆಷ್ಟು ? (ಮಾಹಿತಿಯನ್ನು ಪ್ರತ್ಯೇಕವಾಗಿ ನೀಡುವುದು)

## ಕರ್ನಾಟಕ ರಾಜ್ಯದಲ್ಲಿ ಜಿಲ್ಲೆಗೊಂದು ವಿಶ್ವವಿದ್ಯಾಲಯ ಸ್ಥಾಪಿಸುವ ಬಗ್ಗೆ

**ಡಾ॥ ಬಿ.ಜಿ. ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೬೯ (೮೦೭) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯಲ್ಲಿ ಜಿಲ್ಲೆಗೊಂದು ವಿಶ್ವವಿದ್ಯಾಲಯ ಪ್ರಾರಂಭಿಸಲು ಸರ್ಕಾರ ಸುತ್ತೋಲೆ ಹೊರಡಿಸಿದೆಯೇ ; (ಆದೇಶದ ಪ್ರತಿ ನೀಡುವುದು)

(ಆ) ಹೈದ್ರಾಬಾದ್ ಕರ್ನಾಟಕ ವ್ಯಾಪ್ತಿಯಲ್ಲಿ ಬರುವ ಬೀದರ್, ರಾಯಚೂರು ವಿಶ್ವವಿದ್ಯಾಲಯಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆಯನ್ನು ನಿವಾರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಕಲಬುರಗಿ ವಿಶ್ವವಿದ್ಯಾಲಯದಲ್ಲಿ ಖಾಲಿ ಇರುವ ಬೋಧಕರ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಬೋಧಕ ಹುದ್ದೆಗಳ ನೇಮಕಾತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ವಿದ್ಯಾರ್ಥಿಗಳ ಹೆಸರು ಅದಲು-ಬದಲಾಗಿರುವ ಬಗ್ಗೆ

**ಡಾ॥ ಬಿ.ಜಿ. ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೭೦ (೮೦೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಕ್ಕಮಹಾದೇವಿ ಮಹಿಳಾ ವಿಶ್ವಾವಿದ್ಯಾಲಯದ ವ್ಯಾಪ್ತಿಯಲ್ಲಿ ಬರುವ ಕಲಬುರಗಿಯ ವೀರಮ್ಮ ಗಂಗಸಿರಿ ಮಹಿಳಾ ಪದವಿ ಮಹಾ ವಿದ್ಯಾಲಯದಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳ ಯುನಿಫೈಡ್

ಯುನಿವರ್ಸಿಟಿ ಕಾಲೇಜ್ ಮ್ಯಾನೇಜ್‌ಮೆಂಟ್ ಸಿಸ್ಟಂ (ಯು ಯು ಸಿ ಎಂ ಎಸ್) ತಂತ್ರಾಂಶದ ಅಂಕ ಪಟ್ಟಿಯಲ್ಲಿ ಹೆಸರುಗಳು ಅದಲು ಬದಲಾಗಿರುವುದರಿಂದ ನೈಜ ವಿದ್ಯಾರ್ಥಿಗಳು ಹಾಗೂ ಪಾಲಕರು ಗೊಂದಲಕ್ಕೀಡಾಗಿದ್ದು ತಪ್ಪುಗಳ ತಿದ್ದುಪಡಿಗೆ ಕೈಗೊಂಡಿರುವ ಕ್ರಮಗಳೇನು ; ವಿದ್ಯಾರ್ಥಿಗಳ ಹೆಸರುಗಳ ಅದಲು ಬದಲಾಗಲು ಕಾರಣಗಳೇನು ; (ವಿವರ ನೀಡುವುದು)

(ಆ) ಅಕ್ಕಮಹಾದೇವಿ ಮಹಿಳಾ ವಿಶ್ವಾವಿದ್ಯಾಲಯದಲ್ಲಿ ಕಡಿಮೆ ಅಂಕ ಬಂದು ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿ ತಿಂಗಳುಗಳು ಕಳೆದರೂ ಫಲಿತಾಂಶ ಪ್ರಕಟಣೆಗೆ ತಡ ಮಾಡಲಾಗುತ್ತಿದ್ದು, ಇದರಿಂದ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿದ್ದು, ಸಮಿತಿಯ ಮರುಮೌಲ್ಯಮಾಪನದ ಫಲಿತಾಂಶಗಳು ಶೀಘ್ರ ಪ್ರಕಟಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರ ನೀಡುವುದು)

## ಅಟೆಂಡೆಂಟ್ ಗ್ರೇಡ್–೨ ಗ್ರೂಪ್ ಡಿ ಪದೋನ್ನತಿ ನೀಡುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೭೧ (೭೪೦) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ 2014ರಲ್ಲಿ ನೇಮಕಾತಿಯಾದ ಹಾಸ್ಪಟಲ್ ಅಟೆಡೆಂಟ್ ಗ್ರೇಡ್ – 2 ಗ್ರೂಪ್ ಡಿ 2323 ನೇಮಕಾತಿ ಹೊಂದಿದ ನೌಕರರಿಗೆ ಇಲ್ಲಿಯವರೆಗೆ ಪದೋನ್ನತಿ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ;

(ಆ) ಈ ಇಲಾಖೆಯಲ್ಲಿ ವಿವಿಧ ವೃಂದದಲ್ಲಿ ಸೇವೆ ಸಲ್ಲಿಸುತ್ತಿರುವ ನೌಕರರಿಗೆ ಮುಂಬಡ್ತಿ ನೀಡುತ್ತಿರುವುದರಿಂದ ಅಟೆಂಡೆಂಟ್ ಗ್ರೇಡ್–2 ಗ್ರೂಪ್–ಡಿ ಪದೋನ್ನತಿ ನೀಡದೆ ಇರುವುದು ನೌಕರರಿಗೆ ತಾರತಮ್ಯ ತೋರುತ್ತಿರುವುದು ಸರಿಯೇ ;

(ಇ) ಹಾಸ್ಪೆಟಲ್ ಅಟೆಂಡೆಂಟ್ ಗ್ರೇಡ್–2 ಗ್ರೂಪ್ ಡಿ ನೌಕರರಿಗೆ ಯಾವಾಗ ಪದೋನ್ನತಿ ನೀಡಲಾಗುವುದು ? (ವಿವರ ಒದಗಿಸುವುದು)

## ಬಿಪಿಎಲ್ ಮತ್ತು ಎಪಿಎಲ್ ಕಾರ್ಡ್ ಮಾಹಿತಿ ನೀಡುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೭೨ (೭೪೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಎಷ್ಟು ಬಿಪಿಎಲ್ ಕಾರ್ಡ್ ಮತ್ತು ಎಪಿಎಲ್ ಕಾರ್ಡ್‌ಗಳಿವೆ ; (ತಾಲ್ಲೂಕುವಾರು ಅಂಕಿ–ಅಂಶಗಳ ಮಾಹಿತಿ ನೀಡುವುದು)

(ಆ) ಸದರಿ ಜಿಲ್ಲೆಯಲ್ಲಿ ಎಷ್ಟು ಎಪಿಎಲ್ ಕಾರ್ಡ್‌ಗಳನ್ನು ಎಪಿಎಲ್ ಕಾರ್ಡ್‌ಗಳಾಗಿ ಪರಿವರ್ತಿಸಲಾಗಿದೆ ; (ತಾಲ್ಲೂಕುವಾರು ವಿವರ ಒಗಿಸುವುದು)

(ಇ) ಈ ಜಿಲ್ಲೆಯಲ್ಲಿ ಎಷ್ಟು ಬಿಪಿಎಲ್ ಕಾರ್ಡ್‌ಗಳನ್ನು ನೀಡುವಂತೆ ಅರ್ಜಿ ಬಂದಿರುತ್ತದೆ ? (ತಾಲ್ಲೂಕುವಾರು ವಿವರ ಒಗಿಸುವುದು)

## ವಿದ್ಯುತ್ ಕಂಬಗಳನ್ನು ಅಳವಡಿಸುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೭೩ (೭೪೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯ ಗ್ರಾಮಗಳಲ್ಲಿ, ಪಟ್ಟಣಗಳಲ್ಲಿ ಬಹಳಷ್ಟು ವಿದ್ಯುತ್ ಕಂಬಗಳು ಹಳೆಯದಾಗಿದ್ದು, ಯಾವ ಸಮಯದಲ್ಲಾದರೂ ಬೀಳುವ ಪರಿಸ್ಥಿತಿ ಇರುವುದರಿಂದ ಸಾರ್ವಜನಿಕರು ಜೀವ ಭಯದಲ್ಲಿ ಓಡಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದ್ದಲ್ಲಿ, ಸರ್ಕಾರವು ಕಳೆದ ೨ ವರ್ಷಗಳಲ್ಲಿ ಎಷ್ಟು ಹೊಸದಾಗಿ ವಿದ್ಯುತ್ ಕಂಬಗಳನ್ನು ಅಳವಡಿಸಲಾಗಿದೆ ? (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

## ೧೦೮ ಆಂಬುಲೆನ್ಸ್ ಕಾರ್ಯ ನಿರ್ವಹಣೆ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೭೪ (೭೪೩) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಈ ಜಿಲ್ಲೆಯ ವ್ಯಾಪ್ತಿಯಲ್ಲಿ ಎಷ್ಟು ೧೦೮ ಆಂಬುಲೆನ್ಸ್ ಕಾರ್ಯನಿರ್ವಹಿಸುತ್ತಿವೆ ; ಹೊಸದಾಗಿ ಎಷ್ಟು ಆಂಬುಲೆನ್ಸ್‌ಗಳು ಕಾರ್ಯನಿರ್ವಹಿಸುತ್ತಿವೆ ; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಕೆಲವು ಆರೋಗ್ಯ ಕೇಂದ್ರಗಳು ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದಲ್ಲಿ, ಸರ್ಕಾರವು ಶಿಥಿಲಾವಸ್ಥೆಯಲ್ಲಿರುವ ಕಟ್ಟಡಗಳ ನವೀಕರಣಕ್ಕೆ ಕೈಗೊಂಡ ಕ್ರಮಗಳೇನು ? (ಮಾಹಿತಿ ಒದಗಿಸುವುದು)

## ಉಪನ್ಯಾಸಕರನ್ನು ನೇಮಕ ಮಾಡುವ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೭೫ (೭೪೪) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯಲ್ಲಿ ಎರಡು ವರ್ಷಗಳ ಹಿಂದೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಪ್ರಾರಂಭಿಸಿ ೪ ಕೋರ್ಸ್‌ಗಳಿಗೆ ಮಂಜೂರಾತಿ ನೀಡಿ ಪ್ರಸ್ತುತ ೪೫೨ ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದು, ಇಲ್ಲಿಯವರೆಗೆ ಉಪನ್ಯಾಸಕರನ್ನು ನೇಮಕ ಮಾಡದೇ ೧೮ ಜನ ಅತಿಥಿ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಇಲ್ಲಿಯವರೆಗೆ ಖಾಯಂ ಉಪನ್ಯಾಸಕರನ್ನು ನೇಮಕ ಮಾಡದಿರಲು ಕಾರಣವೇನು ;

(ಇ) ಈ ಕಾಲೇಜಿನಲ್ಲಿ ಖಾಯಂ ಉಪನ್ಯಾಸಕರನ್ನು ಮತ್ತು ಇತರೆ ಸಿಬ್ಬಂದಿಯನ್ನು ಯಾವಾಗ ನೇಮಕ ಮಾಡಲಾಗುವುದು ? (ಮಾಹಿತಿ ಒದಗಿಸುವುದು)

## ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಕಟ್ಟಡ ಜಮೀನು ದಾಖಲಾತಿ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೭೬ (೭೬೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳೆಷ್ಟು ; (ತಾಲ್ಲೂಕವಾರು ಮಾಹಿತಿ ನೀಡುವುದು)

(ಆ) ಸದರಿ ಜಿಲ್ಲೆಗಳಲ್ಲಿ ಸರ್ಕಾರಿ ಶಾಲೆ ಕಟ್ಟಡ ಇರುವ ಜಮೀನು ಮಂಜೂರಾಗದೆ ಅಥವಾ ಪಹಣಿಯಲ್ಲಿ ಈವರೆಗೂ ಶಾಲೆಯ ಹೆಸರಿನಲ್ಲಿ ದಾಖಲಾಗದೆ ಇರುವ ಸರ್ಕಾರಿ ಶಾಲೆಗಳು ಮತ್ತು ಸದರಿ ಶಾಲೆಗಳು ಪ್ರಾರಂಭವಾದ ವರ್ಷದ ವಿವರಗಳನ್ನು ತಾಲ್ಲೂಕುವಾರು ನೀಡುವುದು ;

(ಇ) ಈವರೆಗೂ ಜಮೀನು ಮಂಜೂರಾಗದೆ ಅಥವಾ ಪಹಣಿ ದಾಖಲಾಗದೆ ಇರುವ ಸರ್ಕಾರಿ ಶಾಲೆಗಳಿದ್ದಲ್ಲಿ ಅದಕ್ಕೆ ಕಾರಣಗಳೇನು ;

(ಈ) ಈ ಜಿಲ್ಲೆಗಳಲ್ಲಿ ಬಾಡಿಗೆ ಕಟ್ಟಡದಲ್ಲಿ ಸರ್ಕಾರಿ ಶಾಲೆಗಳು ನಡೆಯುತ್ತಿದ್ದರೆ ಅದರ ವಿವರವನ್ನು ನೀಡುವುದು ?

## ಪಡಿತರ ಚೀಟಿ ವಿತರಣೆ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೭೭ (೭೬೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ದಿನಾಂಕ: ೦೧-೦೬-೨೦೨೩ರ ನಂತರ ಈವರೆಗೂ ವಿತರಿಸಲಾದ ಮತ್ತು ರದ್ದುಪಡಿಸಲಾದ ಬಿ.ಪಿ.ಎಲ್ ಮತ್ತು ಎ.ಪಿ.ಎಲ್. ಪಡಿತರ ಚೀಟಿಗಳೆಷ್ಟು ; ಈ ಪಡಿತರ ಚೀಟಿಗಳನ್ನು ರದ್ದುಪಡಿಸಲು ಕಾರಣಗಳೇನು ; (ತಾಲ್ಲೂಕುವಾರು ಅಂಕಿ-ಅಂಶ ನೀಡುವುದು)

(ಆ) ಬಿ.ಪಿ.ಎಲ್. ಪಡಿತರ ಚೀಟಿ ಪಡೆಯಲು ಇರಬೇಕಾದ ಅರ್ಹತೆಗಳೇನು ;

(ಇ) ಪಡಿತರ ಚೀಟಿಗೆ ಹೆಸರು ಸೇರ್ಪಡೆ ಮತ್ತು ತಿದ್ದುಪಡಿಗೆ ಅವಕಾಶ ನೀಡದೆ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕ ಬಂದಿದೆಯೇ ; ಹೆಸರು ಸೇರ್ಪಡೆಗೆ ಯಾವಾಗ ಅವಕಾಶ ನೀಡಲಾಗುವುದು ?

## ಕಸ್ತೂರಿ ರಂಗನ್ ವರದಿ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೭೮ (೭೮೮) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪಶ್ಚಿಮ ಘಟ್ಟಗಳ ಕುರಿತು ಕಸ್ತೂರಿ ರಂಗನ್ ವರದಿಯಂತೆ ಬಾಧಿತವಾಗಿರುವ ದಕ್ಷಿಣ ಕನ್ನಡ ಮತ್ತು ಉಡುಪಿ ಜಲ್ಲೆಯ ಗ್ರಾಮಗಳು ಯಾವುವು ;

(ಆ) ಸದರಿ ವರದಿ ಅನುಷ್ಠಾನಕ್ಕೆ ಸಾರ್ವಜನಿಕರಿಂದ ತೀವ್ರ ವಿರೋಧ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ವರದಿಯನ್ನು ವಿರೋಧಿಸಿ ಸಾರ್ವಜನಿಕರ ಪರವಾದ ಬೇಡಿಕೆಯನ್ನು ಈಡೇರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಸದರಿ ವರದಿಯ ಕುರಿತು ಸರ್ಕಾರ ಮತ್ತು ಸಾರ್ವಜನಿಕರ ಮಧ್ಯೆ ಸಂವಾಹನಕ್ಕಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ವರದಿಯ ಶಿಫಾರಸ್ಸಿನಂತೆ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳಿಗೆ ಅವಕಾಶವಿರುವುದಿಲ್ಲ ? (ವಿವರ ನೀಡುವುದು)

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲಾ ಅರಣ್ಯ ಇಲಾಖಾ ನೌಕರರಿಗೆ ಮೂಲ ವೇತನ ನಿಗಧಿಪಡಿಸದೆ ಇರುವ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೭೯ (೭೭೯) ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2010 ಮತ್ತು 2012 ನೇ ಸಾಲಿನಲ್ಲಿ ನೇಮಕ ಹೊಂದಿ ಮುಂಬಡ್ತಿ ಹೊಂದದ ಅರಣ್ಯ ರಕ್ಷಕ (ಪ್ರಸ್ತುತ ಅರಣ್ಯ ಪಾಲಕ) ಹುದ್ದೆಗಳಿಗೆ ವಿವಿಧ ಜಿಲ್ಲೆಗಳಲ್ಲಿ ಮೂಲ ವೇತನದಲ್ಲಿ ವ್ಯತ್ಯಾಸವಿರಲು ಕಾರಣವೇನು ;

(ಆ) ಸರ್ಕಾರಿ ಆದೇಶ ಸಂಖ್ಯೆ KARNATAKA FOREST DEPARTMENT/HOFF/HRMS/5/2022PNR ರಂತೆ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲಾ ಅರಣ್ಯ ಇಲಾಖಾ ನೌಕರರಿಗೆ ಮೂಲ ವೇತನ ನಿಗಧಿಪಡಿಸದಿರಲು ಕಾರಣವೇನು ? (ಸಂಪೂರ್ಣ ವಿವರ ನೀಡುವುದು)

## ವೃಂದ ಮತ್ತು ನೇಮಕಾತಿ ನಿಯಮಗಳಿಲ್ಲದೇ ಇರುವುದರಿಂದ ಕಾರ್ಯಕಾರಿ ಆದೇಶ ಹೊರಡಿಸುವ ಬಗ್ಗೆ

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೮೦ (೮೫೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಿನಾಂಕ:26/08/2015ರಲ್ಲಿನ ಆದೇಶದಂತೆ ಶಾಲಾ ಶಿಕ್ಷಣ ಇಲಾಖೆಯಲ್ಲಿ ಎಷ್ಟು ಬೋಧಕೇತರ ವೃಂದದ ಗ್ರೂಪ್-ಸಿ ಹುದ್ದೆಗಳನ್ನು ಮಂಜೂರು ಮಾಡಲಾಗಿದೆ ; ಮಂಜೂರಾಗಿರುವ ಹುದ್ದೆಗಳು ಶಿಕ್ಷಣ ಇಲಾಖೆ ಅಥವಾ ರಾಜ್ಯ ಲೆಕ್ಕಪತ್ರ ಇಲಾಖೆಗೆ ಸಂಬಂಧಿಸಿದ ಹುದ್ದೆಗಳೆಂಬುದರ ಬಗ್ಗೆ ಮಾಹಿತಿ ನೀಡುವುದು: ಸದರಿ ಆದೇಶದ ಪ್ರಸ್ತಾವನೆಯಲ್ಲಿ ವಿವರಸಿರುವಂತೆ ಹುದ್ದೆಗಳ ಮಂಜೂರಾತಿಯ ಉದ್ದೇಶಗಳೇನು ;

(ಆ) ಶಿಕ್ಷಣ ಇಲಾಖೆಗೆ ಒಟ್ಟು ಮಂಜೂರಾಗಿರುವ, ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಲೆಕ್ಕಾಧಿಕಾರಿಗಳು, ಅಕೌಂಟ್ಸ್ ಅಧೀಕ್ಷಕರು ಹಾಗೂ ಅಕೌಂಟ್ಸ್ ಪ್ರಥಮ ದರ್ಜೆ ಸಹಾಯಕರ ಹುದ್ದೆಗಳು ಎಷ್ಟು: ಮಂಜೂರಾಗಿರುವ ಹುದ್ದೆಗಳಲ್ಲಿ ಶಿಕ್ಷಣ ಇಲಾಖೆ ಹಾಗೂ ರಾಜ್ಯ ಲೆಕ್ಕಪತ್ರ ಇಲಾಖೆಗೆ ಸೇರಿದ ಹುದ್ದೆಗಳು ಎಷ್ಟು ಮತ್ತು ಯಾವುವು ; ಅವುಗಳನ್ನು ಹೇಗೆ ಗುರುತಿಸಲಾಗಿದೆ ; ಗುರುತಿಸಿದ್ದಲ್ಲಿ, ಅವುಗಳ ವಿವರಗಳನ್ನು ನೀಡುವುದು ; ಗುರುತಿಸದೇ ಇದ್ದಲ್ಲ ಕಾರಣಗಳೇನು ; ಗುರುತಿಸುವ ಕುರಿತು ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು ;

(ಇ) ಅಕೌಂಟ್ಸ್ ಪ್ರಥಮ ದರ್ಜೆ ಸಹಾಯಕರ ಹುದ್ದೆಯ ನೇಮಕಾತಿ ವಿಧಾನದ ಬಗ್ಗೆ ನಿಯಮಗಳು ಇಲ್ಲದಿದ್ದ ಪ್ರಕರಣಗಳಲ್ಲಿ ಕಾರ್ಯಕಾರಿ ಆದೇಶವನ್ನು ಹೊರಡಿಸುವ ಕುರಿತು ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಯಾವ ಹಂತದಲ್ಲಿದೆ ; ಯಾವ ದಿನಾಂಕದೊಳಗಾಗಿ ಕಾರ್ಯಕಾರಿ ಆದೇಶ ಹೊರಡಿಸಲಾಗುವುದು ; ಈ ಕುರಿತು ಸರ್ಕಾರದ ನಿಲುವೇನು ; (ಮಾಹಿತಿ ನೀಡುವುದು)

(ಈ) ಕಳೆದ ಆರು ವರ್ಷಗಳಿಂದ ಸಮಗ್ರ ವೃಂದ ಮತ್ತು ನೇಮಕಾತಿ ನಿಯಮಗಳನ್ನು ತಿದ್ದುಪಡಿ ತರಲು ಸಾಧ್ಯವಾಗದಿರುವ ಕಾರಣ ಅಕೌಂಟ್ಸ್ ಪ್ರಥಮ ದರ್ಜೆ ಸಹಾಯಕರ ಹುದ್ದೆಯ ನೇಮಕಾತಿ ವಿಧಾನಗಳಿಗೆ ಸಂಬಂಧಿಸಿದಂತೆ ಕಾರ್ಯಕಾರಿ ಆದೇಶ ಹೊರಡಿಸುವ ಕುರಿತು ಸರ್ಕಾರಕ್ಕಿರುವ ತೊಂದರೆಗಳೇನು ; ಈ ಕುರಿತು ಸರ್ಕಾರದ ನಿಲುವೇನು ; (ಮಾಹಿತಿ ನೀಡುವುದು)

(ಉ) ಹುದ್ದೆಗಳು ಮಂಜೂರಾಗಿ ಒಂಭತ್ತು ವರ್ಷಗಳೂ ಕಳೆದಿದ್ದರೂ ಸಹ ನೇಮಕಾತಿ ವಿಧಾನ ಮತ್ತು ನಿಯಮಗಳನ್ನು ರೂಪಿಸುವಲ್ಲಿ ಸರ್ಕಾರವು ವಿಫಲವಾಗಿರಲು ಕಾರಣಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಹುದ್ದೆ ಆಧಾರಿತ ಜೇಷ್ಠತಾ ಪಟ್ಟಿ ಪ್ರಕಟಿಸುವ ಬಗ್ಗೆ

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೮೧ (೮೫೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಶಿಕ್ಷಣ ಸಾಕ್ಷರತಾ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕೇತರ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಜೇಷ್ಠತಾ ಪಟ್ಟಿಯನ್ನು ಸಮಯೋಚಿತವಾಗಿ ಪ್ರಕಟಿಸುವಲ್ಲಿ ಮತ್ತು ಮುಂಬಡ್ತಿ ನೀಡುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಯಾವ ನಿಯಮಗಳ ಆಧಾರದಲ್ಲಿ ಜೇಷ್ಠತಾಪಟ್ಟಿಯನ್ನು ಪ್ರಕಟಿಸಿ ಮುಂಬಡ್ತಿ ನೀಡಲಾಗುತ್ತದೆ ; (ಆದೇಶದ ಪ್ರತಿಗಳನ್ನು ನೀಡುವುದು)

(ಆ) ಸರ್ಕಾರದ ಆದೇಶ ಸಂ: ಸಿಆಸುಇ 106 ಸೇನೆನಿ 2021, ದಿನಾಂಕ:10/12/2021ರ ಆದೇಶದ ಅನ್ವಯ ರಾಜ್ಯ ಸಿವಿಲ್

ಸೇವೆಗಳಲ್ಲಿನ ಹುದ್ದೆಗಳನ್ನು ಭರ್ತಿ ಮಾಡುವಾಗ ರಿಕ್ತ ಸ್ಥಾನ ಆಧಾರಿತ ವರ್ಗೀಕರಣದ ಬದಲಾಗಿ ಹುದ್ದೆ ಆಧಾರಿತ ವರ್ಗೀಕರಣವನ್ನು ಮಾಡಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಆದೇಶವನ್ನು ಶಾಲಾ ಶಿಕ್ಷಣ ಇಲಾಖೆಯಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆಯೇ ; (ಮಾಹಿತಿ ನೀಡುವುದು)

(ಇ) ಸದರಿ ಆದೇಶದೊಂದಿಗೆ ನೀಡಲಾದ ಅನುಬಂಧಗಳನ್ವಯ ಪ್ರತಿವರ್ಷವೂ ಡಿಸೆಂಬರ್ 31ಕ್ಕೆ ಅಂತ್ಯಗೊಂಡಂತೆ ಅಥವಾ ಜನವರಿ 1ಕ್ಕಿದ್ದಂತೆ ತಾತ್ಕಾಲಿಕ ಜೇಷ್ಠತಾ ಪಟ್ಟಿಗಳನ್ನು ಸಿದ್ಧಪಡಿಸಿ, ಆಕ್ಷೇಪಣೆಗಳನ್ನು ಆಹ್ವಾನಿಸಿ ಅವುಗಳನ್ನು ಪರಿಶೀಲಿಸಿ ಮಾರ್ಚ್ 31ರ ಒಳಗಾಗಿ ಅಂತಿಮ ಜೇಷ್ಠತಾ ಪಟ್ಟಿಗಳನ್ನು ಪ್ರಕಟಿಸಲಾಗುತ್ತಿದೆಯೇ ; ಹಾಗಿದ್ದಲ್ಲಿ, ಬೋಧಕೇತರ ಹುದ್ದೆಗಳಾದ ಸಿ ವೃಂದದ ಎಲ್ಲಾ ಹುದ್ದೆಗಳ ಪ್ರಸಕ್ತ ಸಾಲಿನ ಜೇಷ್ಠತಾ ಪಟ್ಟಿಗಳನ್ನು ನೀಡುವುದು ; (ಮಾಹಿತಿ ನೀಡುವುದು)

(ಈ) ಸದರಿ ಆದೇಶದ ಅನ್ವಯ ಜೇಷ್ಠತಾ ಪಟ್ಟಿಯನ್ನು ಡಿಸೆಂಬರ್ 31 2023ರ ಅಂತ್ಯಕ್ಕಿದ್ದಂತೆ ಪ್ರಕಟಿಸದಿರುವ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಸದರಿ ಆದೇಶದನ್ವಯ ಡಿಸೆಂಬರ್31 2024ರ ಅಂತ್ಯಕ್ಕಿದ್ದಂತೆ ಅಥವಾ ಜನವರಿ 1ಕ್ಕಿದ್ದಂತೆ ಜೇಷ್ಠತಾ ಪಟ್ಟಿಗಳನ್ನು ಪ್ರಕಟಿಸುವ ಕುರಿತು ಸರ್ಕಾರದ ನಿಲುವೇನು ? (ಸಂಪೂರ್ಣ ಮಾಹಿತಿ ನೀಡುವುದು)

## ವಿಶ್ವವಿದ್ಯಾಲಯಗಳಲ್ಲಿ ಸಿಬ್ಬಂದಿಗಳ ನೇಮಕಾತಿ ಬಗ್ಗೆ

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೨ (೮೧೮) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಶ್ವವಿದ್ಯಾಲಯಗಳಲ್ಲಿ ಬೋಧಕ/ಬೋಧಕೇತರ ಸಿಬ್ಬಂದಿಗಳ ನೇಮಕಾತಿಗೆ ಪ್ರಸ್ತುತ ಇರುವ ಪದ್ಧತಿ ಯಾವುದು, ಸದರಿ ಪದ್ಧತಿ ಬದಲಿಗೆ ಕೆ.ಪಿ.ಎಸ್.ಸಿ ಅಥವಾ ಕೆ.ಇ.ಎ ಮೂಲಕ ಸಿಬ್ಬಂದಿಗಳ ನೇಮಕಾತಿಗೆ ಸರ್ಕಾರ ಕ್ರಮಕೈಗೊಳ್ಳುವುದೇ ;

(ಆ) ವಿಶ್ವವಿದ್ಯಾಲಯಗಳು ಸ್ವಾಯತ್ತ ಸಂಸ್ಥೆಯ ವಿಶೇಷ ಅಧಿಕಾರ ಹೊಂದಿದೆ ಎಂದು ವಿಶ್ವವಿದ್ಯಾಲಯಗಳ ಸ್ನಾತಕೋತ್ತರ ಕೇಂದ್ರ, ಘಟಕ ಮಹಾ ವಿದ್ಯಾಲಯ ಮತ್ತು ಸಂಯೋಜಿತ ಕಾಲೇಜುಗಳಲ್ಲಿ ಎಷ್ಟು ಜನ ತಾತ್ಕಾಲಿಕ ಸಿಬ್ಬಂದಿಗಳನ್ನು ನೇಮಕ ಮಾಡಿಕೊಂಡಿವೆ ; (ವಿಶ್ವವಿದ್ಯಾಲಯವಾರು ಹುದ್ದೆವಾರು ವಿವರ ನೀಡುವುದು)

(ಇ) ವಿಶ್ವವಿದ್ಯಾಲಯಗಳ ಆಡಳಿತ ಸುಧಾರಣೆ ದೃಷ್ಟಿಯಿಂದ ಅವಶ್ಯಕತೆಗಿಂತ ಹೆಚ್ಚುವರಿ ಬೋಧಕ/ಬೋಧಕೇತರ ಸಿಬ್ಬಂದಿಗಳಿರುವ ವಿಶ್ವವಿದ್ಯಾಲಯಗಳಿಂದ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ವಿಶ್ವವಿದ್ಯಾಲಯಗಳ ಸಂಯೋಜಿತ ಕಾಲೇಜುಗಳಿಗೆ ಸದರಿ ಬೋಧಕ/ಬೋಧಕೇತರ ಸಿಬ್ಬಂದಿಗಳನ್ನು ಹಂಚಿಕೆ ಮಾಡುವ ಕುರಿತು ಸರ್ಕಾರದ ನಿಲುವೇನು ;

(ಈ) ಉನ್ನತ ಶಿಕ್ಷಣದ ಮೂಲ ಉದ್ದೇಶವಾಗಿರುವ ಸಂಶೋಧನಾ ಕಾರ್ಯ ಮಾಡದ ಎಷ್ಟು ಬೋಧಕ ಸಿಬ್ಬಂದಿಗಳ ಮೇಲೆ ಸರ್ಕಾರ ಯಾವ ಕ್ರಮಕೈಗೊಂಡಿದೆ ? (ವಿಶ್ವವಿದ್ಯಾಲಯವಾರು ವಿವರ ನೀಡುವುದು)

## ವಿಶ್ವವಿದ್ಯಾಲಯಗಳಿಗೆ ಅಗತ್ಯ ಸಿಬ್ಬಂದಿಗಳ ಮಂಜೂರಾತಿ ಬಗ್ಗೆ

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೭೮೩ (೮೧೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ವಿಶ್ವವಿದ್ಯಾಲಯುಗಳು ಯಾವುವು; ಈ ವಿಶ್ವವಿದ್ಯಾಲಯಗಳಿಗೆ ಮಂಜೂರಾದ ಮತ್ತು ಪುಸ್ತುತ ಖಾಲಿ ಇರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವಿವರವನ್ನು ವಿಶ್ವವಿದ್ಯಾಲಯವಾರು ನೀಡುವುದು)

(ಆ) ಹೊಸ ಹುದ್ದೆ ಮಂಜೂರಾತಿ ಕೋರಿ ವಿಶ್ವವಿದ್ಯಾಲಯಗಳಿಂದ ಸರ್ಕಾರಕ್ಕೆ ಬಂದಿರುವ ಪ್ರಸ್ತಾವನೆಗಳು ಎಷ್ಟು; ಈ ಪೈಕಿ ಎಷ್ಟು ಪ್ರಸ್ತಾವನೆಗಳಿಗೆ ಸರ್ಕಾರ ಯಾವಾಗ ಅನುಮೋದನೆ ನೀಡಿದೆ ; (ವಿಶ್ವವಿದ್ಯಾಲಯವಾರು ವಿವರವನ್ನು ಅವರು ಕೋರಿರುವ ಹುದ್ದೆಗಳ ಸಹಿತ ಸಮಗ್ರ ವಿವರ ನೀಡುವುದು)

(ಇ) ವಿಶ್ವವಿದ್ಯಾಲಯಗಳಲ್ಲಿ ನೇಮಕಾತಿಗೆ ಸಂಬಂಧಪಟ್ಟಂತೆ ವಿವಿಧ ನ್ಯಾಯಾಲಯುಗಳಲ್ಲಿರುವ ಪ್ರಕರಣಗಳು ಯಾವುವು ; (ವಿಶ್ವವಿದ್ಯಾಲಯವಾರು ವಿವರ ನೀಡುವುದು)

(ಈ) ವಿಶ್ವವಿದ್ಯಾಲಯಗಳಲ್ಲಿ ಕೈ ಬರಹದ/ಲಿಪಿಕ ಅನುಗುಣವಾಗಿ ಸಿಬ್ಬಂದಿ ಹುದ್ದೆ ಅನುಮೋದನೆಯಾದ ಕಂಪ್ಯೂಟರೀಕರಣದ ನಂತರ ಆಡಳಿತ ಸುಧಾರಣೆ ಮುಖಾಂತರ ಸದರಿ ಹುದ್ದೆಗಳನ್ನು ಮರು ಹಂಚಿಕೆ ಮಾಡಲಾಗಿದೆಯೇ ? (ವಿಶ್ವವಿದ್ಯಾಲಯುವಾರು ವಿವರ ನೀಡುವುದು)

## ESCOM ಮತ್ತು KPCL ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮೪ (೮೪೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) **ESCOM** ಮತ್ತು **KPCL** ಸಂಸ್ಥೆಗಳು ಅನುಭವಿಸಿದಾಗ ಸಂಭ್ಯಾವ್ಯ ದಿವಾಳಿಯಾದಾಗ ಸರ್ಕಾರದ ಮೇಲೆ ಹೊಣೆಗಾರಿಕೆ ಉಂಟಾಗುವ ಸಾಧ್ಯತೆಯ ಬಗ್ಗೆ ಸರ್ಕಾರಕ್ಕೆ ಅರಿವಿದೆಯೇ ;

(ಆ) ಈ ಬಗ್ಗೆ ಮುಂಜಾಗ್ರತಾ ಕ್ರಮಗಳ ಶಿಫಾರಸ್ಸಿಗಾಗಿ ತಜ್ಞರ ಸಮಿತಿ ರಚಿಸಲಾಗಿದೆಯೇ ; (ವಿವರ ಒದಗಿಸುವುದು)

(ಇ) ತಜ್ಞರ ಸಮಿತಿಯನ್ನು ಯಾವ ದಿನಾಂಕದಂದು ರಚಿಸಲಾಗಿದೆ ; ಇಲ್ಲಿಯವರೆಗೆ ಎಷ್ಟು ಸಭೆ ನಡೆಸಿದೆ ; (ನಡಾವಳಿಯ ಪ್ರತಿ ಒದಗಿಸುವುದು)

(ಈ) ಯಾವ ಶಿಫಾರಸ್ಸನ್ನು ಸಮಿತಿಯು ನೀಡಿದೆ? (ವಿವರ ಒದಗಿಸುವುದು)

## ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ಅರಣ್ಯ ಭೂಮಿ ವಿಸ್ತೀರ್ಣ ಹಾಗೂ ಸಾರ್ವಜನಿಕರಿಂದ ಒತ್ತುವರಿಯಾದ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲು ಅನುಸರಿಸುತ್ತಿರುವ ಕ್ರಮ

**ಡಾ. ಸೂರಜ್ ರೇವಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೮೫ (೮೮೬) ಮಾನ್ಯ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲ್ಲೂಕು ವ್ಯಾಪ್ತಿಯಲ್ಲಿ ಅರಣ್ಯ ಇಲಾಖೆಗೆ ಸೇರಿದ ಜಮೀನಿನಲ್ಲಿ ಸಾರ್ವಜನಿಕರು ಒತ್ತುವರಿ ಮಾಡಿಕೊಂಡಿರುವ ಜಮೀನಿನ ವಿಸ್ತೀರ್ಣ ಎಷ್ಟು ; ಈ ವಿಸ್ತೀರ್ಣದ ಪ್ರದೇಶವನ್ನು ಇಲಾಖೆಗೆ ಸ್ವಾಧೀನ ಪಡಿಸಿಕೊಳ್ಳಲು ಕೈಗೊಂಡಿರುವ ಕ್ರಮವೇನು ; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಚನ್ನರಾಯಪಟ್ಟಣ ತಾಲ್ಲೂಕು ಗ್ಯಾರೆಹಳ್ಳಿ ಗ್ರಾಮದ ಸರ್ವೆ ನಂಬರ್ ೧೬೧ರಲ್ಲಿ ಅರಣ್ಯ ಇಲಾಖೆಗೆ ಒಳಪಡುವ ವಿಸ್ತೀರ್ಣವೆಷ್ಟು ಹಾಗೂ ಸಾರ್ವಜನಿಕರು ಹೊಂದಿರುವ ವಿಸ್ತೀರ್ಣವೆಷ್ಟು ; ಈ ಸರ್ವೆ ನಂಬರ್‌ಗಳಲ್ಲಿ ಅರಣ್ಯ ಇಲಾಖೆಯಿಂದ ಭೂಮಿಯನ್ನು ಸಾರ್ವಜನಿಕರಿಂದ ವಶಪಡಿಸಿಕೊಂಡಿದೆಯೇ ? (ಸಂಪೂರ್ಣ ವಿವರ ನೀಡುವುದು)

## ಕರ್ನಾಟಕ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಮತ್ತು ಖಾಸಗಿ ಶಾಲೆಗಳ ಕುರಿತು

**ಶ್ರೀ ಎ. ವಸಂತಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೮೬ (೮೮೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ, ಖಾಸಗಿ ಅನುದಾನಿತ ಅನುದಾನರಹಿತ ಕಿರಿಯ ಪ್ರಾಥಮಿಕ. ಹಿರಿಯ ಪ್ರಾಥಮಿಕ, ಪ್ರೌಢ ಶಾಲೆಗಳು ಹಾಗೂ ಪದವಿ ಪೂರ್ವ ಶಾಲೆಗಳೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಶಾಲಾ ಕಾಲೇಜುಗಳನ್ನು ಮಂಜೂರು ಮಾಡಲು ಇರುವ ಮಾನದಂಡಗಳೇನು ; (ವಿವರ ನೀಡುವುದು)

(ಇ) ದಕ್ಷಿಣ ಕರ್ನಾಟಕಕ್ಕೆ ಹೋಲಿಸಿದ್ದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಸರ್ಕಾರಿ ಶಾಲಾ ಕಾಲೇಜುಗಳ ಸಂಖ್ಯೆ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವಶ್ಯಕತೆಗನುಗುಣವಾಗಿ ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಶಾಲಾ ಕಾಲೇಜುಗಳನ್ನು ಮಂಜೂರು ಮಾಡಲು ಸಾಧ್ಯವಿಲ್ಲವೇ ; ಸಾಧ್ಯವಿದ್ದಲ್ಲಿ ಯಾವಾಗ ಮಂಜೂರು ಮಾಡಲಾಗುವುದು ?

## ರಾಯಚೂರು ಜಿಲ್ಲೆ ದೇವದುರ್ಗ ತಾಲ್ಲೂಕಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕಟ್ಟಡದ ಕುರಿತು

**ಶ್ರೀ ಎ. ವಸಂತಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೭೮೭ (೮೮೯) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರು ಜಿಲ್ಲೆ ದೇವದುರ್ಗ ತಾಲ್ಲೂಕಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕಟ್ಟಡ ಕಳೆದ ೫ ವರ್ಷಗಳಿಂದ ಶಿಥಿಲಾವ್ಯವಸ್ಥೆಯಲ್ಲಿದ್ದು ವಿದ್ಯಾರ್ಥಿಗಳು ಜೀವಭಯದಲ್ಲಿ ಅಭ್ಯಾಸ ಮಾಡುತ್ತಿರುವುದು ಹಾಗೂ ಬಣ್ಣವಿಲ್ಲದೆ ಕಾಲೇಜು ಕಟ್ಟಡ ಪೂರ್ತಿ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ;

(ಆ) ಈ ಕಾಲೇಜು ದುರಸ್ತಿ ಕಾರ್ಯವನ್ನು ಯಾವಾಗ ಪ್ರಾರಂಭ ಮಾಡಲಾಗುವುದು ? (ಮಾಹಿತಿ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O131/400 ಪ್ರತಿಗಳು/03–12–2024